RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 102 ಪುಟ: 06 ಮಂಗಳವಾರ 18–03–2025 ₹ 3
Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)
Executive Editor: L P Babu
Honourary Editor: Venkatesh

ಸುದ್ದಿ, ಜಾಹೀರಾತು ಹಾಗೂ ಪತ್ರಿಕೆಗೆ ಚಂದಾದಾರರಾಗಲು ಸಂಪರ್ಕಿಸಿ: 9448074878



ನೂರನೇ ಟೆಸ್ಟ್ : ಕ್ರಿಕೆಟ್‌ಗೆ ವಿದಾಯ ಹೇಳಲು ಬಯಸಿದ್ದೆ:

ಸೌಂದರ್ಯಗೆ ಈ ಕ್ರೇಜಿ ನಡಿ ತುಂಬಾ ಇಷ್ಟ

'ಎಂದೆಂದಿಗೂ ನಮ್ಮ ಹೃದಯದಲ್ಲಿ' ಪುಟ 6

## ಒಂಭತ್ತು ತಿಂಗಳ ನಂತರ ಭೂಮಿಗೆ ಹಿಂದಿರುಗುತ್ತಿರುವ ಗಗನಯಾತ್ರಿಗಳು

# ಭೂಮಿಯತ್ತ ಸುನೀತಾ ವಿಲಿಯಮ್ಸ್

**ವಾಷಿಂಗ್ಟನ್:** ಬಾಹ್ಯಕಾಶ ನೌಕೆ ಸ್ಟಾರ್‌ಲೈನರ್‌ನಲ್ಲಿ ಉಂಟಾದ ತಾಂತ್ರಿಕ ದೋಷದಿಂದಾಗಿ ಕಳೆದ ಒಂಭತ್ತು ತಿಂಗಳಿನಿಂದ ಭೂಮಿಯತ್ತ ಮರಳಲು ಸಾಧ್ಯವಾಗದೇ ಬಾಹ್ಯಕಾಶದಲ್ಲೇ ಆತಂಕದ ದಿನಗಳನ್ನು ಎಣಿಸುತ್ತಿದ್ದ ಗಗನಯಾತ್ರಿಗಳನ್ನು ಭೂಮಿಗೆ ಕರೆತರುವಲ್ಲಿ ನಾಸಾ ಯಶಸ್ವಿ ಪ್ರಯತ್ನ ನಡೆಸಿದೆ.

ಗಗನಯಾತ್ರಿಗಳನ್ನು ಭೂಮಿಗೆ ಕರೆತರಲು ವಿಶೇಷವಾಗಿ ತಯಾರಿಸಿರುವ ಸ್ಪೇಸ್‌ಎಕ್ಸ್‌ನ ಡ್ರಾಗನ್ ಕ್ರಾಫ್ಟ್ ಬಾಹ್ಯಾಕಾಶ ನೌಕೆ ಮಂಗಳವಾರ ಭಾರತೀಯ ಕಾಲಮಾನ ಬೆಳಿಗ್ಗೆ 10:35ಕ್ಕೆ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ (ಐಎಸ್‌ಎಸ್) ಬೇರ್ಪಟ್ಟಿದೆ. ಅಂದರೆ ಅನ್‌ಡಾಕ್ ಪ್ರಕ್ರಿಯೆ ಯಶಸ್ವಿಯಾಗಿ ನಡೆದಿದ್ದು, ಅದರ ವಿಡಿಯೋವನ್ನು ನಾಸಾ ತನ್ನ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದೆ.

ಸುನಿತಾ ವಿಲಿಯಮ್ಸ್, ಬುಚ್ ವಿಲ್ಲೋರ್ ಬುಧವಾರ ಬಂದಿಳಿಯಲಿದ್ದಾರೆ

ಭಾರತೀಯ ಮೂಲದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಜೂನ್ 5, 2024ರಂದು ಪರೀಕ್ಷಾ ವಾಹನ ಸ್ಟಾರ್‌ಲೈನರ್‌ನಲ್ಲಿ ಐಎಸ್‌ಎಸ್‌ಗೆ ಪಯಣ ಬೆಳೆಸಿದ್ದರು. ಎಂಟು ದಿನಗಳನ್ನು ಅಲ್ಲಿ ಕಳೆದ ನಂತರವೇ ಹಿಂತಿರುಗಬೇಕಿತ್ತು. ಆದರೆ ನೌಕೆಯಲ್ಲಿನ ದೋಷದಿಂದಾಗಿ ಇಬ್ಬರೂ ಸುಮಾರು 9 ತಿಂಗಳ ಕಾಲ ಐಎಸ್‌ಎಸ್‌ನಲ್ಲೇ ಸಿಲುಕಿದ್ದರು.

ಭಾರತೀಯ ಕಾಲಮಾನ ಬೆಳಗ್ಗೆ 10:35ಕ್ಕೆ ಅನ್‌ಡಾಕಿಂಗ್ ಪ್ರಕ್ರಿಯೆ ನಡೆದಿದ್ದು, ಅಂದರೆ ಡ್ರ್ಯಾಗನ್ ಕ್ಯಾಪ್ಸುಲ್ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಬೇರ್ಪಟ್ಟು, ಮಾರ್ಚ್ 19ರ ಬೆಳಗಿನ ಜಾವ 3:27ರ ಸುಮಾರಿಗೆ ಫ್ಲೋರಿಡಾ ಕರಾವಳಿಯಲ್ಲಿ ಇಳಿಯಲಿದೆ. ಈ ಪ್ರಯಾಣ ಸುಮಾರು 17 ಗಂಟೆಗಳನ್ನು ತೆಗೆದುಕೊಳ್ಳಲಿದೆ ಎಂದು ನಾಸಾ ಹೇಳಿದೆ.

ಸ್ಪೇಸ್‌ಎಕ್ಸ್ ಕ್ರೂ–9 ಭೂಮಿಗೆ ಮರಳುವುದನ್ನು ಐಎಸ್‌ಎಸ್ ನೇರಪ್ರಸಾರ ಮಾಡಲಿದೆ ಎಂದು ನಾಸಾ ಈಗಾಗಲೇ ತಿಳಿಸಿದೆ.

ಬಾಹ್ಯಾಕಾಶದಲ್ಲಿ ವಾಸಿಸುತ್ತಿರುವಾಗಲೇ ಸುನೀತಾ ವಿಲಿಯಮ್ಸ್ ಅನೇಕ ಪ್ರಮುಖ ಸಂಶೋಧನೆಗಳನ್ನು ಮಾಡುವ ಮೂಲಕ ದಾಖಲೆಗಳನ್ನು ನಿರ್ಮಿಸಿದ್ದಾರೆ.

ಶುಕ್ರವಾರ (ಮಾರ್ಚ್ 14) ಸ್ಪೇಸ್‌ಎಕ್ಸ್ ಕ್ರೂ–10 ಮಿಷನ್ ಪ್ರಾರಂಭಿಸಿದ್ದು, ಕ್ರೂ ಡ್ರ್ಯಾಗನ್ ಕ್ಯಾಪ್ಸುಲ್ ಅನ್ನು ಫಾಲ್ಕನ್–9 ರಾಕೆಟ್ ಮೂಲಕ ಉಡಾಯಿಸಲಾಯಿತು. ಇದು ನಾಸಾದ ಕಮರ್ಷಿಯಲ್ ಕ್ರೂ ಪ್ರೊಗ್ರಾಂ ಅಡಿಯಲ್ಲಿ ಐಎಸ್‌ಎಸ್‌ಗೆ ಸಿಬ್ಬಂದಿ ಹೊಂದಿರುವ 11ನೇ ನೌಕೆ. ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಮಾರ್ಚ್ ಅಂತ್ಯದ ವೇಳೆಗೆ ಭೂಮಿಗೆ ಮರಳಬೇಕಿತ್ತು. ಆದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇಲಾನ್



ಮಸ್ಕ್ ಅವರಿಗೆ ಗಗನಯಾತ್ರಿಗಳನ್ನು ಬೇಗನೆ ಮರಳಿ ಕರೆತರುವಂತೆ ಒತ್ತಾಯಿಸಿದ ನಂತರ ಕಾರ್ಯಾಚರಣೆಯನ್ನು ಚುರುಕುಗೊಳಿಸಲಾಯಿತು.

ಸುನೀತಾ ವಿಲಿಯಮ್ಸ್ ಅವರು ಬಾಹ್ಯಕಾಶಕ್ಕೆ ತೆರಳಿದ ಸ್ವಲ್ಪ ದಿನದಲ್ಲೇ ಸ್ಟಾರ್‌ಲೈನರ್‌ನಲ್ಲಿ ಹೀಲಿಯಂ ಸೋರಿಕೆ ಮತ್ತು ಇಂಜಿನ್ ಸಮಸ್ಯೆ ಕಂಡು ಬಂತು. ಇದರಿಂದ ಅವರ ವಾಪಸಾತಿ ಅಸುರಕ್ಷಿತ ಎಂದು ಪರಿಗಣಿಸಿ ಅವರು ಅಲ್ಲೆ ಉಳಿದುಕೊಳ್ಳಬೇಕಾದ ಸ್ಥಿತಿ ನಿರ್ಮಾಣವಾಯಿತು.

ಸುನಿತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಲೋರ್ ಬಾಹ್ಯಾಕಾಶದಲ್ಲಿ 284 ದಿನಗಳನ್ನು ಕಳೆದಿದ್ದಾರೆ. ಅಂತಹ ಪರಿಸ್ಥಿತಿಯಲ್ಲಿ ಇಬ್ಬರೂ ಅನೇಕ ಆರೋಗ್ಯ ಸಂಬಂಧಿತ ಸಮಸ್ಯೆಗಳನ್ನು ಎದುರಿಸಬೇಕಾಗಬಹುದು. ದೇಹ ಭಾರವಿಲ್ಲ ಎನ್ನುವಂತೆ ಅವರಿಗೆ ಅನಿಸುತ್ತದೆ.ಜೊತೆಗೆ ಅವರ ದೇಹದ ಚರ್ಮ ಮೊದಲಿನಂತೆ ಇರುವುದಿಲ್ಲ. ಅದು ಸಹಜ ಸ್ಥಿತಿಗೆ ಬರಬೇಕೆಂದರೆ ಸಮಯ ತೆಗೆದುಕೊಳ್ಳುತ್ತದೆ. ಗಗನಯಾತ್ರಿಗಳ ದೇಹದ ಮೇಲೆ ಭೂಮಿಯ ಗುರುತ್ವಾಕರ್ಷಣೆಯ ಕೊರತೆಯಿಂದ ಮೂಳೆಯ ಸಾಂದ್ರತೆ ಮತ್ತು ಸ್ನಾಯು ಕ್ಷೀಣತೆ ಅನುಭವಿಸುತ್ತಾರೆ.

ಶೂನ್ಯ ಗುರುತ್ವಾಕರ್ಷಣೆ ಮತ್ತು ಹೆಚ್ಚಿನ ವಿಕಿರಣದಲ್ಲಿ ದೀರ್ಘಕಾಲ ಬಾಹ್ಯಾಕಾಶದಲ್ಲಿ ಉಳಿಯುವುದರಿಂದ ಮೂಳೆಗಳ ದೌರ್ಬಲ್ಯ, ದೃಷ್ಟಿಯ ಮೇಲೆ ಪರಿಣಾಮ ಮತ್ತು ದೇಹದ ಸಮತೋಲನ ನಷ್ಟದಂತಹ ಸಮಸ್ಯೆಗಳು ಉಂಟಾಗಬಹುದು ಎಂಬುದು ಗಮನಿಸಬೇಕಾದ ಸಂಗತಿ. ವಿಕಿರಣವು ಕ್ಯಾನ್ಸರ್ ಮತ್ತು ನರಮಂಡಲದ ಸಮಸ್ಯೆಗಳನ್ನು ಉಂಟುಮಾಡಬಹುದು. ಅಲ್ಲದೆ, ರೋಗನಿರೋಧಕ ಶಕ್ತಿ ಕಡಿಮೆಯಾಗಬಹುದು.

ಭೂಮಿಗೆ ಬಂದ ಬಳಿಕ ಇಲ್ಲಿಯ ಗುರುತ್ವಾಕರ್ಷಣೆಗೆ ಒಗ್ಗಿಕೊಳ್ಳಲು ಬಾಹ್ಯಾಕಾಶ ಸಂಸ್ಥೆಗಳು ಪುನರ್ವಸತಿ ಕೇಂದ್ರ ತೆರೆಯುತ್ತವೆ. ಅದರಡಿ ಹಿಂದಿರುಗುವ ಪುಟ 2



ಮಂಡ್ಯ ಜಿಲ್ಲೆಯ ಪಾಂಡವಪುರ ತಾಲೂಕಿನ ದೊಡ್ಡ ಬ್ಯಾಡರಹಳ್ಳಿ ಗ್ರಾಮದಲ್ಲಿ ಜೀರ್ಣೋದ್ಧಾರ ಮಾಡಲಾದ ಶ್ರೀ ಶಂಕರ ಮಠವನ್ನು ಮಾನ್ಯ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಲೋಕಾರ್ಪಣೆ ಮಾಡಿದರು. ಅನಿತಾ ಕುಮಾರಸ್ವಾಮಿ, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರೂ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಹೆಚ್‌ಡಿಕೆ ವಿರುದ್ಧ ಸರ್ಕಾರಿ ಭೂಮಿ ಒತ್ತುವರಿ ಆರೋಪ : ತೆರವಿಗೆ ಮುಂದಾದ ಅಧಿಕಾರಿಗಳು

ರಾಮನಗರ : ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮತ್ತು ಇತರರ ವಿರುದ್ಧದ ಭೂ ಒತ್ತುವರಿ ಆರೋಪ ಸಂಬಂಧ ಕೋರ್ಟ್ ಆದೇಶದ ಬೆನ್ನಲ್ಲೇ ಕಂದಾಯ ಇಲಾಖೆಯ ಅಧಿಕಾರಿಗಳು ಒತ್ತುವರಿ ತೆರವು ಕಾರ್ಯಾಚರಣೆಗೆ ಮುಂದಾಗಿದ್ದಾರೆ.

ಒತ್ತುವರಿ ತೆರವು ಮಾಡುವಂತೆ ಹೈಕೋರ್ಟ್ ಖಡಕ್ ಸೂಚನೆ ನೀಡಿದ್ದ ಬೆನ್ನಲ್ಲೆ ಒತ್ತುವರಿ ಕಾರ್ಯಾಚರಣೆಗೆ ಇಂದು ಅಧಿಕಾರಿಗಳು ಸ್ಥಳಕ್ಕೆ ಬಂದಿದ್ದಾರೆ.

ಒತ್ತುವರಿ ತೆರವು ಕಾರ್ಯಾಚರಣೆ ಕೈಗೊಳ್ಳಲಿರುವ ಹೆಚ್.ಡಿ. ಕುಮಾರಸ್ವಾಮಿ ಅವರ ಬಿಡದಿ ಬಳಿಯ ಕೇತಗಾನಹಳ್ಳಿಯ ತೋಟದ ಮನೆ ಜಾಗಕ್ಕೆ ರಾಮನಗರ ಜಿಲ್ಲಾಧಿಕಾರಿ ಯಶವಂತ ವಿ. ಗುರುಕರ್ ಅವರು ಕೋರ್ಟ್ ಆದೇಶ ಹಾಗೂ ಒತ್ತುವರಿ ಸರ್ವೇ ವರದಿಯೊಂದಿಗೆ ಇಂದು ಬೆಳಗ್ಗೆ ಆಗಮಿಸಿದರು. ಈ ವೇಳೆ ಉಪ ವಿಭಾಗಾಧಿಕಾರಿ ಬಿನೋಯ್ ಪಿ.ಕೆ, ತಹಶೀಲ್ದಾರ್ ತೇಜಸ್ವಿನಿ, ಸರ್ವೇ ಅಧಿಕಾರಿ



ಹನುಮೇಗೌಡ, ಪೊಲೀಸರು ಸೇರಿದಂತೆ ಇತರ ಅಧಿಕಾರಿಗಳು ಕೂಡ ಹಾಜರಿದ್ದರು.

ಕೋರ್ಟ್ ಆದೇಶದ ಮೇರೆಗೆ ಕುಮಾರಸ್ವಾಮಿ ಸೇರಿ ಇತರರ ಭೂಮಿ ತೆರವು ಕಾರ್ಯಾಚರಣೆ ನಡೆಸಲು ಮುಂದಾಗಿದ್ದೇವೆ. ಹಲವರಿಗೆ ಸೇರಿರುವ 12 ಸರ್ವೇ ನಂಬರ್‌ಗಳ 15 ಎಕರೆಯಷ್ಟು ಜಾಗ ಪುಟ 2

## ಪೆನ್ನಾರ್ ನದಿ ನೀರು ವಿವಾದ ಕುರಿತು ಚರ್ಚೆಗೆ ದೆಹಲಿ ಭೇಟಿ

**ಬೆಂಗಳೂರು:** "ಪೆನ್ನಾರ್ ನದಿ ನೀರು ಹಾಗೂ ಕೋಲಾರ ಭಾಗದಿಂದ ತಮಿಳುನಾಡಿನ ಕಡೆಗೆ ಹರಿಯುವ ನೀರಿನ ವಿವಾದದ ಕುರಿತು ಕೇಂದ್ರ ಜಲಶಕ್ತಿ ಸಚಿವರ ಜೊತೆ ಚರ್ಚೆ ನಡೆಸಲು ದೆಹಲಿಗೆ ಭೇಟಿ ನೀಡಲಾಗುತ್ತಿದೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.



ಸದಾಶಿವನಗರದ ನಿವಾಸದ ಬಳಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಮಂಗಳವಾರ ಬೆಳಿಗ್ಗೆ ಪ್ರತಿಕ್ರಿಯೆ ನೀಡಿದರು. "ಪೆನ್ನಾರ್ ನದಿ ನೀರಿನ ವಿಚಾರವಾಗಿ ಎರಡು ರಾಜ್ಯಗಳ ಪ್ರತಿನಿಧಿಗಳನ್ನು ಸೇರಿಸಿ ನಿಮ್ಮಲ್ಲೇ ಚರ್ಚೆ ನಡೆಸಿ ಬಗೆಹರಿಸಿಕೊಳ್ಳಿ ಎನ್ನುವ ಸುಪ್ರೀಂ ಕೋರ್ಟ್ ನಿರ್ದೇಶನವಿತ್ತು. ಆದರೆ ಸೋಮವಾರ ರಾತ್ರಿ ತಮಿಳುನಾಡಿನ ಪ್ರತಿನಿಧಿಗಳು ಬರುವುದಿಲ್ಲ, ಅವರು ಪ್ರತ್ಯೇಕವಾಗಿ ಮನವಿ ಸಲ್ಲಿಸುತ್ತಾರೆ ಪುಟ 2

## ಏಪ್ರಿಲ್‌ನಿಂದ 10 ಕೆಜಿ ಅಕ್ಕಿ ಕೊಡುತ್ತೇವೆ

**ಬೆಂಗಳೂರು:** ನಮ್ಮ ಬಳಿ ಅಕ್ಕಿ ಇದೆ. ಕೇಂದ್ರವೂ ಅಕ್ಕಿ ಕೊಡಲು ಸಿದ್ಧವಿದೆ. ಏಪ್ರಿಲ್ ತಿಂಗಳಿನಿಂದ ಬಿಪಿಎಲ್ ಕಾರ್ಡುದಾರರಿಗೆ 10 ಕೆಜಿ ಅಕ್ಕಿ ಕೊಡುತ್ತೇವೆ ಎಂದು ಆಹಾರ ಸಚಿವ ಕೆ.ಎಚ್ ಮುನಿಯಪ್ಪ ತಿಳಿಸಿದರು. ಮಂಗಳವಾರ ಮಾಧ್ಯಮಗಳ ಜೊತೆ ಮಾತನಾಡಿದ ಸಚಿವ ಕೆ.ಎಚ್ ಮುನಿಯಪ್ಪ, ಕಳೆದ ತಿಂಗಳಿನಿಂದ ನಮ್ಮ ಬಳಿ ಪುಟ 2

## 3 ಕೋಟಿ ಮೌಲ್ಯದ ಬ್ರೌನ್‌ಶುಗರ್ ವಶ

**ಇಂಫಾಲ್:** ಮಣಿಪುರದ ಚಂದೇಲ್ ಜಿಲ್ಲೆಯಲ್ಲಿ 3.29 ಕೋಟಿ ಮೌಲ್ಯದ ಬ್ರೌನ್ ಶುಗರ್ ವಶಪಡಿಸಿಕೊಳ್ಳಲಾಗಿದ್ದು, 23 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ. ಕಳೆದ ಮೂರು ದಿನಗಳಿಂದ 137 ಬ್ರೌನ್ ಶುಗರ್ ಸಾಬೂನು ಪ್ರಕರಣಗಳನ್ನು ವಶಪಡಿಸಿಕೊಂಡ ನಂತರ ಅಸ್ಸಾಂ ರೈಫಲ್ಸ್ ತಂಡವು ಜಿಲ್ಲೆಯ ಕುಲ್ಬಾಂಗ್ ಗ್ರಾಮದಲ್ಲಿ ಕಾರ್ಯಾಚರಣೆಯನ್ನು ಪ್ರಾರಂಭಿಸಿತು ಮತ್ತು ವ್ಯಕ್ತಿಯನ್ನು ಬಂಧಿಸಿದೆ ಎಂದು ಅದು ಹೇಳಿದೆ. ಪುಟ 2

## ಶಾಸಕರ ಗೌರವ ಮುಖ್ಯ

**ಬೆಂಗಳೂರು:** ವಿಧಾನ ಮಂಡಲದ ಮಂಗಳವಾರದ ಕಾರ್ಯಕಲಾಪಗಳಲ್ಲಿ ಸಭಾಧ್ಯಕ್ಷ ಯುಟಿ ಖಾದರ್ ನೀಡಿದ ರೂಲಿಂಗ್ ಅನ್ನು ವಿರೋಧ ಪಕ್ಷದ ಸದಸ್ಯರು ಮೇಜುತಟ್ಟಿ ಸ್ವಾಗತಿಸಿದ್ದಾರೆ. ವಿಷಯ ಜನಪ್ರತಿನಿಧಿಗಳೊಂದಿಗೆ ಅಧಿಕಾರಿಗಳ ವರ್ತನೆಗೆ ಸಂಬಂಧಿಸಿದ್ದಾಗಿತ್ತು. ಅಧಿಕಾರಿಗಳು ಐಎಎಸ್, ಕೆಎಎಸ್– ಯಾವುದೇ ಸ್ತರದವರಾಗಿರಲಿ, ಶಾಸಕರು ಕರೆದಾಗ ಹೋಗಬೇಕು ಮತ್ತು ಅವರು ಕೇಳುವ ಪ್ರಶ್ನೆಗಳಿಗೆ ಸಮಂಜಸ ಪುಟ 2

## ಕಾಂಗ್ರೆಸ್ ಸಂವಿಧಾನ ವಿರುದ್ಧವಾಗಿ ಅಲ್ಪಸಂಖ್ಯಾತರಿಗೆ ಮೀಸಲಾತಿ ನೀಡಿ

**ಬೆಂಗಳೂರು:** ಕಾಂಗ್ರೆಸ್ ನವರು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಹಾಗೂ ಸಂವಿಧಾನದ ಮೂಲ ತತ್ವದ ವಿರುದ್ಧವಾಗಿ ಅಲ್ಪಸಂಖ್ಯಾತರಿಗೆ ಮೀಸಲಾತಿ ನೀಡಿ, ಸಮಾಜದಲ್ಲಿ ಕ್ಷೋಭೆ ಉಂಟು ಮಾಡಿ, ತಮ್ಮ ಮತಬ್ಯಾಂಕ್ ಗಟ್ಟಿಮಾಡಿಕೊಳ್ಳುವ ಪ್ರಯತ್ನಾಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಕ ಬೊಮ್ಮಾಯಿ ಆರೋಪಿಸಿದ್ದಾರೆ.

ನವ ದೆಹಲಿಯಲ್ಲಿ ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ



ನೇತೃತ್ವದ ಕಾಂಗ್ರೆಸ್ ಸರ್ಕಾರ ಹಿಂದುಳಿದ ಜನರಿಗೆ ಮೋಸ ಮಾಡುತ್ತಿದೆ. ರಾಜ್ಯದಲ್ಲಿ ಅಲ್ಪ ಸಂಖ್ಯಾತರಿಗೆ ಶೇ 4% ರಷ್ಟು ಮೀಸಲಾತಿ ನೀಡಿರುವುದು ಅಸಂವಿಧಾನಿಕ ನಾವು ಅದನ್ನೇ ಬದಲಾಯಿಸಿದ್ದೇವು, ಈಗ ಅದು ಸಪ್ರೀಂ ಕೋರ್ಟ್ ನಲ್ಲಿ ಪ್ರಶ್ನೆ ಮಾಡಲಾಗಿದೆ. ಇದು ಸುಪ್ರೀಂ ಕೋರ್ಟ್ ನಲ್ಲಿ ಇದೆ ಎನ್ನುವುದು ಗೊತ್ತಿದ್ದರೂ, ನಾವು ಹಿಂದುಳಿದ ವರ್ಗದವರಿಗೆ ಕೊಡಿತ್ತಿದ್ದೇವೆ ಎಂದು ಹೇಳಿ ಅಲ್ಪಸಂಖ್ಯಾತರಿಗೆ ಶೇ 4% ಮೀಸಲಾತಿ ನೀಡುವುದು ಸಂವಿಧಾನ ಬಾಹಿರ, ಕಾನೂನು ಬಾಹಿರ ಎಂದು ಹೇಳಿದರು.

ನಮ್ಮ ಸಮಾಜದಲ್ಲಿ ಧರ್ಮದ ಆಧಾರದಲ್ಲಿ ಮೀಸಲಾತಿ ನೀಡುವುದು ಬೇಡ ಎಂದು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ಪುಟ 2

## ನಾಗ್ಪುರದಲ್ಲಿ ಭುಗಿಲೆದ್ದ ಹಿಂಸಾಚಾರ: ಶಾಂತಿ ಕಾಪಾಡುವಂತೆ ಸಿಎಂ ಮನವಿ

**ನಾಗ್ಪುರ(ಮಹಾರಾಷ್ಟ್ರ):** ಔರಂಗಜೇಬನ ಸಮಾಧಿಯ ವಿಚಾರವಾಗಿ ಎರಡು ಗುಂಪುಗಳ ನಡುವೆ ಮಹಾರಾಷ್ಟ್ರದ ನಾಗ್ಪುರದಲ್ಲಿ ಸೋಮವಾರ ಭಾರಿ ಹಿಂಸಾಚಾರ ನಡೆದಿದೆ. ಉದ್ರಿಕ್ತರು ಹಲವು ಮನೆಗಳು, ವಾಹನಗಳನ್ನು ಧ್ವಂಸಗೊಳಿಸಿದ್ದಾರೆ.



ಹಿಂಸಾಚಾರ ತೀವ್ರಗೊಂಡ ಹಿನ್ನೆಲೆಯಲ್ಲಿ ನಗರದಲ್ಲಿ ನಿಷೇಧಾಜ್ಞೆ ಹೇರಲಾಗಿದೆ. ಬೆಳಗಿನ ಹೊತ್ತಿಗೆ ಪರಿಸ್ಥಿತಿ ಶಾಂತವಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯ ಪೂರ್ಣ ವಿವರ: ಔರಂಗಜೇಬನ ಸಮಾಧಿ ಕೆಡವುವಂತೆ ಒಂದು ಕೋಮಿಗೆ ಸೇರಿದ ಸಂಘಟನೆಯೊಂದು ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ, ಒಂದು ಸಮುದಾಯದ ಪವಿತ್ರ ಗ್ರಂಥವನ್ನು ಸುಟ್ಟುಹಾಕಲಾಗಿದೆ ಎಂಬ ಸುದ್ದಿ ನಿನ್ನೆ ಸಂಜೆ 7.30ರ ಸುಮಾರಿಗೆ ನಾಗ್ಪುರದಲ್ಲಿ ಕಾಡ್ಗಿಚ್ಚಿನಂತೆ ಹರಡಿತ್ತು. ಇದರಿಂದ ಕೋಪಗೊಂಡ ಮತ್ತೊಂದು ಸಮುದಾಯದ ಜನರು ಪೊಲೀಸರ ಮೇಲೆ ಕಲ್ಲು ತೂರಾಟ ನಡೆಸಿದ್ದಾರೆ.

ಕಲ್ಲೇಟಿನಿಂದ ಆರು ಜನರು ಮತ್ತು ಮೂವರು ಪೊಲೀಸರು ಸೇರಿದಂತೆ 9 ಮಂದಿ ಗಾಯಗೊಂಡರು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.ರಾತ್ರಿ 10.30ರಿಂದ 1.30ರ ಸುಮಾರಿಗೆ ಹಳೆ ಪುಟ 2

## ಹದಗೆಟ್ಟ ಕಾನೂನು ಸುವ್ಯವಸ್ಥೆ, ಗೂಂಡಾ ರಾಜ್ಯ ನಿರ್ಮಾಣ

ಬೆಂಗಳೂರು: ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಕಾಂಗ್ರೆಸ್ ಸರ್ಕಾರ ಆರೋಪಿಗಳನ್ನು ಬಂಧಿಸುವ ಕೆಲಸ ಮಾಡುತ್ತಿಲ್ಲ. ಕಾನೂನು ಸುವ್ಯವಸ್ಥೆಯ ಮೇಲೆ ಸಚಿವರು ಅಥವಾ ಮುಖ್ಯಮಂತ್ರಿಗೆ ಸ್ವಲ್ಪವೂ ಹಿಡಿತವೇ ಇಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು.



ವಿಧಾನಸಭೆಯಲ್ಲಿ ಕಾನೂನು ಸುವ್ಯವಸ್ಥೆ ಕುರಿತು ಮಾತನಾಡಿದ ಅವರು, ನಾವೆಲ್ಲರೂ ತಲೆ ತಗ್ಗಿಸುವಂತಹ ಘಟನೆ ರಾಮನಗರದಲ್ಲಿ ನಡೆದಿದೆ. ಬಿಡದಿಯ ಟೊಯೋಟ ಕಂಪನಿಯ ಶೌಚಾಲಯದ ಗೋಡೆಯ ಮೇಲೆ ಪಾಕಿಸ್ತಾನ ಜಿಂದಾಬಾದ್ ಎಂದು ಬರೆಯಲಾಗಿದೆ. ಜೊತೆಗೆ ಕನ್ನಡಿಗರ ಬಗ್ಗೆ ಅವಾಚ್ಯವಾಗಿ ನಿಂದಿಸಿ ಬರೆಯಲಾಗಿದೆ. ಇಂತಹ ಕಿಡಿಗೇಡಿಗಳಿಂದ ರಾಜ್ಯಕ್ಕೆ ಕೆಟ್ಟ ಹೆಸರು ಬರುತ್ತಿದೆ. ಇದು ಬಹಳ ಪ್ರತಿಷ್ಠಿತ ಕಂಪನಿಯಾಗಿದ್ದು, ಎಲ್ಲ ಕಡೆ ಸಿಸಿಟಿವಿ ಕ್ಯಾಮರಾ ಇದೆ. ಆದರೂ ಅದನ್ನು ಪರಿಶೀಲಿಸಿ ತಪ್ಪಿತಸ್ಥರನ್ನು ಬಂಧಿಸುವ ಕೆಲಸವನ್ನು ಪೊಲೀಸರು ಇನ್ನೂ ಮಾಡಿಲ್ಲ ಎಂದರು.

ಸ್ವಾತಿ ಲವ್ ಜಿಹಾದ್: ಹಾವೇರಿ ಜಿಲ್ಲೆಯಲ್ಲಿ ಹೋರಿ ಹಬ್ಬದ ಸ್ನೇಹ ಲವ್ ಜಿಹಾದ್‌ನಲ್ಲಿ ಅಂತ್ಯವಾಗಿದೆ. ಹಾವೇರಿ ಜಿಲ್ಲೆಯ ಪುಟ 2

## ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಗೆ ನೋಂದಣಿ ಕಡ್ಡಾಯ

**ಬೆಂಗಳೂರು:** ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಗೆ ನೋಂದಣಿ ಕಡ್ಡಾಯ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ವಿಧಾನ ಪರಿಷತ್ ಅಧಿವೇಶನದಲ್ಲಿ ಸದನದ ಸದಸ್ಯ ಶರವಣ, ಸಿ.ಟಿ.ರವಿ, ರವಿಕುಮಾರ್ ಮುಂತಾದವರು ನಿಯಮ 68 ರಡಿ ಮೈಕ್ರೋ ಫೈನಾನ್ಸ್ ಹಾವಳಿ, ಮೈಸೂರಿನ ಉದಯಗಿರಿ ಪ್ರಕರಣ ಮತ್ತು ಮಹಿಳೆಯರ ಮೇಲಿನ ದೌರ್ಜನ್ಯ ಸೇರಿದಂತೆ ವಿವಿಧ ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಸರ್ಕಾರ ಕೈಗೊಂಡ ಕ್ರಮ ಕುರಿತು ಮಂಡಿಸಿದ ಸೂಚನೆಗೆ ಉತ್ತರಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಸರ್ಕಾರ ' ಕರ್ನಾಟಕ ಕಿರುಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶ 2025 ಅನ್ನು ಜಾರಿಗೆ ತಂದಿದೆ. ನೋಂದಣಿಯಾಗದ, ಸುರಕ್ಷತಾ ಕ್ರಮಗಳನ್ನು ಅನುಸರಿಸದ, ಸಾರ್ವಜನಿಕರೊಂದಿಗೆ ನಿಯಮಬಾಹಿರವಾಗಿ ನಡೆದುಕೊಳ್ಳುವ ಮೈಕ್ರೋ ಫೈನಾನ್ಸ್ ಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಾಲ ನೀಡುವ ಸಂಸ್ಥೆಗಳು ಆರ್ ಬಿಐ ಮಾರ್ಗಸೂಚಿ ಅನ್ವಯ ಕ್ರಮ ಕೈಗೊಳ್ಳಬೇಕು ಮತ್ತು ಪ್ರಕರಣಗಳನ್ನು



ನ್ಯಾಯಾಲಯದಲ್ಲಿ ಬಗೆಹರಿಸಿಕೊಳ್ಳಬೇಕು. ಇಂತಹ ಕಂಪನಿಗಳಿಂದ ಸಾಲಗಾರರಿಗೆ ತೊಂದರೆಯಾದಲ್ಲಿ ನಿರ್ಭೀತಿಯಿಂದ ಸಂಬಂಧಿಸಿದ ಠಾಣೆಗಳಲ್ಲಿ ದೂರು ದಾಖಲಿಸಬಹುದಾಗಿದೆ ಎಂದರು.

ಮೈಸೂರಿನ ಉದಯಗಿರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕಲ್ಲು ತೂರಾಟ ನಡೆಸಿ ಪೊಲೀಸರ ಮೇಲೆ ದಾಳಿ ಮಾಡಿದ್ದ 15 ಜನರನ್ನು ದಸ್ತಗಿರಿ ಮಾಡಲಾಗಿದ್ದು, ಕ್ರಿಮಿನಲ್ ಪ್ರಕರಣದ ತನಿಖೆ ಪ್ರಗತಿಯಲ್ಲಿದೆ ಎಂದರು

ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ಸರ್ಕಾರ ಪಿಂಕ್ ಹೊಯ್ಸಳ ಮತ್ತು 112 ಗಸ್ತುವಾಹನ ಪುಟ 2

## ಅನಧಿಕೃತ ನಿರ್ಮಾಣ ತಡೆಗೆ ಪಾಲಿಕೆ ತಿದ್ದುಪಡಿ ವಿಧೇಯಕ ಮಂಡನೆ

**ಬೆಂಗಳೂರು:** ಬೆಂಗಳೂರಿನಲ್ಲಿ ಅನಧಿಕೃತ ನಿರ್ಮಾಣವನ್ನು ತಡೆಗಟ್ಟುವ ನಿಟ್ಟಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತಿದ್ದುಪಡಿ ವಿಧೇಯಕವನ್ನು ವಿಧಾನಸಭೆಯಲ್ಲಿ ಮಂಗಳವಾರ ಮಂಡಿಸಲಾಯಿತು.



ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತಿದ್ದುಪಡಿ ವಿಧೇಯಕವನ್ನು ವಿಧಾನಸಭೆಯಲ್ಲಿ ಮಂಡಿಸಿ, ಅನಧಿಕೃತ ನಿರ್ಮಾಣವನ್ನು ತಡೆಗಟ್ಟುವುದು ಮತ್ತು ಅನಧಿಕೃತ ಕಟ್ಟಡ ಅಥವಾ ಅದರ ಭಾಗವನ್ನು ಬಳಸುವುದಕ್ಕೆ ನಿರ್ಬಂಧ ಹೇರುವುದಕ್ಕೆ ಪುಟ 2

# ಗೋಹತ್ಯೆ ನಿಷೇಧ ಕಾನೂನು ಜಾರಿಗೆ ಭಾರತೀಯ ಗೋಪರಿವಾರ್ ಚಾರಿಟಬಲ್ ಟ್ರಸ್ಟ್ ಒತ್ತಾಯ




**ಬೆಂಗಳೂರು;** ಮಾ21ರಿಂದ 23ರವರೆಗೆ ಬೆಂಗಳೂರಿನ ಚನ್ನೇನ ಹಳ್ಳಿಯಲ್ಲಿ ನಡೆಯಲಿರುವ ಆರ್ ಎಸ್ ಎಸ್ ನ ಅಖಿಲ ಭಾರತ ಪ್ರತಿನಿಧಿ ಸಭೆಯಲ್ಲಿ ದೇಶಾದ್ಯಂತ ಗೋರಕ್ಷ ಆಂದೋಲನ,ಗೋಹತ್ಯೆ ನಿಷೇಧ ಕಡ್ಡಾಯಗೊಳಿಸುವಂತೆ ನಿರ್ಣಯ ಕೈಗೊಳ್ಳಬೇಕೆಂದು ಭಾರತೀಯ ಗೋ ಪರಿವಾರ್ ಚಾರಿಟಬಲ್ ಟ್ರಸ್ಟ್ ಒತ್ತಾಯಿಸಿದೆ. ಪ್ರೆಸ್ ಕ್ಲಬ್ ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಾಗಡಿ ರಸ್ತೆಯ ಗೋರಕ್ಷಕ ಗೋದಾಮುನ ರವೀಂದ್ರ ನಾಥ್ ಸರಸ್ವತಿ ಮಹಾರಾಜ್, ಗೋಶಾಲೆಗಳ ಮುಖ್ಯಸ್ಥರಾದ ಆನಂದ್ ಮಹಾಧಾಮ್,ದೀಪಕ್ ಜೈನ್, ಶೈಲೇಂದ್ರ ಸಂಘ ಪರಿವಾರದ ಅಂಗ ಪಕ್ಷವಾದ ಭಾರತೀಯ ಜನತಾ ಪಕ್ಷಕ್ಕೆ ದೇಶಾದ್ಯಂತ ಗೋ ಹತ್ಯೆ ನಿಷೇಧಿಸುವಂತೆ,ಆಕ್ರಮ ಸಾಗಾಟಕ್ಕೆ ಕಠಿಣ ಶಿಕ್ಷೆ ನೀಡುವಂತೆ ಕಾನೂನು ತರಲು ಮನವೊಲಿಸಬೇಕೆಂದು ಮನವಿ ಮಾಡಿದರು. 1952ರಲ್ಲಿ ಆರ್ ಎಸ್ ಎಸ್ ತನ್ನ ಸಮಾವೇಶದಲ್ಲಿ ಕೈಗೊಂಡ ನಿರ್ಣಯದಂತೆ ಅದನ್ನು ಈಗ ಸರಿಯಾದ ರೀತಿ ಕಾರ್ಯಗತಗೊಳಿಸಲಿ,ಗೋ ಆದಾರಿತ ಕೃಷಿ,ದೇಸಿ ಧನಗಳ ಬಗ್ಗೆ ಆರ್ ಎಸ್ ಎಸ್ ಆಂದೋಲನ ನಡೆಸುತ್ತಿದೆ ಇದರ ಮೂಲಕವಾದರೂ ಸಂಪೂರ್ಣ ನಿಷೇಧವಾಗಲಿ ಎಂದರು. ದೇಶಾದ್ಯಂತ ಸಂಘ ಪರಿವಾರದ ತಳಮಟ್ಟದ ಕಾರ್ಯಕರ್ತರು ಗೋರಕ್ಷಣೆಗಾಗಿ ಜೀವಕೊಡುತ್ತಿದ್ದರೂ ಸಂಘ ಪರಿವಾರದ ನಾಯಕರು ಏಕೆ ಮೌನವಹಿಸಿದ್ದಾರೆ

# ನ್ಯಾಯಾಲಯಗಳಲ್ಲಿ ಕನ್ನಡ ಭಾಷಾ ಅನುಷ್ಠಾನ ರಾಜ್ಯ ಸಮಿತಿ ಉದ್ಘಾಟನಾ ಸಮಾರಂಭ

**ಬೆಂಗಳೂರು;** ಭಾರತೀಯ ಭಾಷಾ ಅಭಿಯಾನ, ಕರ್ನಾಟಕ ವತಿಯಿಂದ ರಾಜ್ಯದ ನ್ಯಾಯಾಂಗದಲ್ಲಿ ನ್ಯಾಯಾಲಯಗಳಲ್ಲಿ ಕನ್ನಡ ಭಾಷಾ ಅನುಷ್ಠಾನಕ್ಕಾಗಿ ರಾಜ್ಯ ಸಮಿತಿ ಉದ್ಘಾಟನಾ ಸಮಾರಂಭ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ, ಹೈಕೋರ್ಟ್ ನ ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಮಾತನಾಡಿ,ರಾಜ್ಯದ ಹೈಕೋರ್ಟ್ ಸೇರಿದಂತೆ ಬೇರೆ ನ್ಯಾಯಾಲಯಗಳಲ್ಲಿ 17ಸಾವಿರ ಪ್ರಕರಣಗಳು ಆನ್ ಲೈನ್ ಮೂಲಕ ಕನ್ನಡದಲ್ಲಿ ತೀರ್ಪು ಬಂದಿವೆ. ಕನ್ನಡದಲ್ಲಿ ಹೈಕೋರ್ಟ್ ಸೇರಿದಂತೆ ಕೆಳ ನ್ಯಾಯಾಲಯದ ವರೆಗೆ ತೀರ್ಪುಗಳು ಕನ್ನಡದಲ್ಲಿ ಬರುವ ಅಗತ್ಯವಿದೆ ಎಂದು ಹೇಳಿದರು.

ಹೈಕೋರ್ಟ್ ನ ನ್ಯಾಯಮೂರ್ತಿ ಆರ್ .ದೇವದಾಸ್ ಮಾತನಾಡಿ, ಈ ದೇಶದಲ್ಲಿ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ನ್ಯಾಯಾಲಯಗಳಲ್ಲಿ ತೀರ್ಪುಗಳ ವಾದ,ಪ್ರತಿವಾದಗಳು ನಡೆಯಬೇಕಾದರೆ ಕೇಂದ್ರ ಸರ್ಕಾರ ಇಲ್ಲವೇ ಸುಪ್ರೀಂಕೋರ್ಟ್ ನಿಂದ ಗೆಜೆಟ್ ನೋಟಿಫಿಕೇಶನ್ ಹೊರಡಿಸುವುದು ಅಗತ್ಯವಾಗಿದೆ ಜತೆಗೆ ಇಂದಿನ ಪೀಳಿಗೆಯ ವಕೀಲರು ಇಂಗ್ಲಿಷ್ ವ್ಯಾಮೋಹ ವ್ಯವಹಾರ ಕೈ ಬಿಟ್ಟು ಆಯಾ ಪ್ರಾದೇಶಿಕ ಭಾಷೆಯಲ್ಲಿ ವಾದ ನಡೆಸಿದರೆ ಕನ್ನಡ ಭಾಷೆ ನ್ಯಾಯಾಲಯದಲ್ಲಿ ಬಳಕೆಯಾಗಲು ಸಾಧ್ಯ ಎಂದರು.

ನವದೆಹಲಿಯ ರಾಷ್ಟ್ರೀಯ ಸಂಯೋಜಕ ವಿನೋದ. ಎ. ಮಾತನಾಡಿ, ಆಯಾ ರಾಜ್ಯಗಳಲ್ಲಿ ಪ್ರಾದೇಶಿಕ ಭಾಷೆಯಲ್ಲಿ ಕೋರ್ಟ್ ವ್ಯವಹಾರಗಳು ನಡೆಯುವಂತೆ ಭಾರತೀಯ ಭಾಷಾ ಅಭಿಯಾನ ಪ್ರಾರಂಭಿಸಲಾಗಿದೆ ಎಂದು ಹೇಳಿದರು.




ಕಾರ್ಯಕ್ರಮದ ಸಂಯೋಜಕ, ನಿರೂಪಕ ವಕೀಲ ಅನಿಲ್ ರೆಡ್ಡಿ ಮಾತನಾಡಿ,ಇಡೀ ದೇಶದಲ್ಲಿ ಪ್ರಾದೇಶಿಕ ಭಾಷೆಯಲ್ಲಿ ನ್ಯಾಯಾಲಯ ವ್ಯವಹಾರಗಳು, ವಾದ ಪ್ರತಿವಾದಗಳು ನಡೆಯಬೇಕೆಂಬ ಉದ್ದೇಶದಿಂದ ಕನ್ನಡ ಭಾಷೆ ನ್ಯಾಯಾಂಗದಲ್ಲಿ ಅನುಷ್ಠಾನ ಕುರಿತು ವಿಚಾರ ಸಂಕಿರಣ, ಅಭಿಯಾನ ಹಮ್ಮಿಕೊಳ್ಳಲಾಗಿದೆ, ಇದು ಮುಂದುವರೆಯಲಿದೆ ಎಂದು ಹೇಳಿದರು.

ವಿನೋದ್ ಎ.ರಾಷ್ಟ್ರೀಯ ಸಂಯೋಜಕರು, ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ್, ಹಿರಿಯ ವಕೀಲ ಸಿ.ಆರ್. ಗೋಪಾಲ ಸ್ವಾಮಿ,ಎಸ್.ಸುಶೀಲಾ,ರಾಜ್ಯ ವಕೀಲ ಪರಿಷತ್ ನ ಅಧ್ಯಕ್ಷ ಎಸ್.ಎಸ್.ಮಿಟ್ಟಲ್ ಕೋಡ, ಬೆಂಗಳೂರು ವಕೀಲರ ಸಂಘದ ಅಧ್ಯಕ್ಷ ವಿವೇಕ ಸುಬ್ಬಾರೆಡ್ಡಿ, ಬೆಂಗಳೂರು ವಕೀಲರ ಸಾಹಿತ್ಯ ಕೂಟ ಅಧ್ಯಕ್ಷ ಮಂಜುನಾಥ್ ಬಿ.ಗೌಡ,ಬೆಂಗಳೂರು ವಕೀಲರ ಸಾಹಿತ್ಯ ಕೂಟದ ನಿಕಟಪೂರ್ವ ಅಧ್ಯಕ್ಷ ಎಲ್. ಜಗದೀಶ್ ಮತ್ತಿತರರು ಭಾಗವಹಿಸಿ ನ್ಯಾಯಾಂಗದಲ್ಲಿ ಕನ್ನಡ ಅನುಷ್ಠಾನ ಕುರಿತು ವಿಷಯ ಮಂಡಿಸಿದರು



**ಮಹಾಲಕ್ಷ್ಮಿಪುರಂ ಮೋದಿ ಹಾಸ್ಪಿಟಲ್ ಹತ್ತಿರದಲ್ಲಿರುವ ದೊಡ್ಡಮನೆ ಅಪ್ಪು ಅಡ್ಡ ಹಾಗೂ ಲಯನ್ಸ್ ಕ್ಲಬ್ ವತಿಯಿಂದ ಆಯೋಜಿಸಿದ್ದ ನಟ ಪುನೀತ್ ರಾಜಕುಮಾರ್ ಅವರ 50ನೇ ಹುಟ್ಟುಹಬ್ಬ ಆಚರಣೆಯ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಭಾಗವಹಿಸಿ ಪುನೀತ್ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅನ್ನ ಸಂತರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಕಾರ್ಯಕ್ರಮದಲ್ಲಿ ಲಯನ್ಸ್ ಕ್ಲಬ್ ನ ಗೋಬಿ ನಾಗ, ನಾಗರಾಜ್, ಸಂತೋಷ್ ಬಿಜೆಪಿ ಮುಖಂಡರುಗಳಾದ ವೆಂಕಟೇಶ್ ಮೂರ್ತಿ ,ಬಿ ಡಿ ಶ್ರೀನಿವಾಸ್ ಮತ್ತಿತರದಿದ್ದರು.**

# ಗಾಂಧಿಬಜಾರಿನ ಶ್ರೀ ವ್ಯಾಸರಾಜ ಮಠದಲ್ಲಿ ಅನುಷಾ ಗಾಯನ



**ಬೆಂಗಳೂರು :** ಗಾಂಧಿಬಜಾರಿನಲ್ಲಿರುವ ಸೋಸಲೆ ಶ್ರೀ ವ್ಯಾಸರಾಜ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ವಿದ್ಯಾಶ್ರೀಶತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀವ್ಯಾಸರಾಜ ಗುರುಸಾರ್ವಭೌಮರ ಪೂರ್ವಾರಾಧನೆ ಪ್ರಯುಕ್ತ ಏರ್ಪಡಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿದುಷಿ ಶ್ರೀಮತಿ ಅನುಷಾ ರಾಘವೇಂದ್ರ ಅವರು ತಾರತಮ್ಯೋಕ್ತವಾಗಿ "ಗುರುಮಧ್ವರಾಯರಿಗೆ ನಮೋ ನಮೋ" ಎಂಬ ಗುರುಸ್ತುತಿಯೊಂದಿಗೆ ಕಾರ್ಯಕ್ರಮವನ್ನು ಆರಂಭಿಸಿ, "ಗಜಮುಖನೇ ಸಿದ್ಧಿದಾಯಕನೇ", "ಮಂತ್ರಾಲಯ ನಿವಾಸ ಉತ್ತಮ ಹಂಸ", "ವಾದಿರಾಜ ಮುನಿಪ" "ಜಯ ಜಯ ವೈಷ್ಣವ", "ಶಿವನೇ ನಾ ನಿನ್ನ ಸೇವಕನಯ್ಯ ", "ಜಯವಾಯು ಹನುಮಂತ", "ಬಾರೇ ನಮ್ಮನೀತನಕ", "ರಂಗ ಮನೆಗೆ ಬಾರೋ", "ಲೋಕಭರಿತನೋ ರಂಗ ಅನೇಕ ಚರಿತನೋ", "ಮನ್ನಿಸೋ ಶ್ರೀ ವೆಂಕಟೇಶ", "ತೊರೆದು ಜೀವಿಸಬಹುದೇ", "ನಾನೇನ ಮಾಡಿದೆನೋ ", "ಇಂದು ನಿನ್ನ ಮೊರೆಯ ಹೊಕ್ಕೆ ವೆಂಕಟೇಶನೇ" ಹೀಗೆ ಇನ್ನೂ ಹಲವಾರು ಅಪರೂಪದ ಹರಿದಾಸರ ಕೀರ್ತನೆಗಳನ್ನು ಪ್ರಸ್ತುತ ಪಡಿಸಿದರು. ಇವರ ಗಾಯನಕ್ಕೆ ಹಾರ್ಮೋನಿಯಂ ವಾದನದಲ್ಲಿ ಶ್ರೀ ಶ್ರೀಪಾದದಾಸ್ ಮತ್ತು ತಬಲಾ ವಾದನದಲ್ಲಿ ಶ್ರೀ ಗೋಪಾಲ ಗುಡಿಬಂಡೆ ಸಾಥ್ ನೀಡಿದರು.

# ಏ.2ರಂದು ಸುಪ್ರೀಂನಲ್ಲಿ ನಟ ದರ್ಶನ್ ಜಾಮೀನು ಪ್ರಶ್ನಿಸಿದ ಅರ್ಜಿ ವಿಚಾರಣೆ

**ನವದೆಹಲಿ:** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಜಾಮೀನು ಅರ್ಜಿ ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿ ವಿಚಾರಣೆಗೆ ಸುಪ್ರೀಂಕೋರ್ಟ್ ಒಪ್ಪಿಗೆ ನೀಡಿದೆ. ನಟ ದರ್ಶನ್‌ಗೆ ಜಾಮೀನು ನೀಡಿರುವುದನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿರುವ ಅರ್ಜಿ ವಿಚಾರಣೆ ಸುಪ್ರೀಂಕೋರ್ಟ್‌ನಲ್ಲಿ ಏಪ್ರಿಲ್ 2 ರಂದು ನಡೆಯಲಿದೆ. ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಸೇರಿ ಎಲ್ಲಾ ಆರೋಪಿಗಳಿಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿದ್ದು ಆರೋಪಿಗಳು ಜಾಮೀನು ಪಡೆದು ಹೊರಬಂದಿದ್ದಾರೆ. ಪೊಲೀಸರು ನಟ ದರ್ಶನ್ ಗೆ ಜಾಮೀನು ನೀಡಿರುವುದನ್ನು ಪ್ರಶ್ನಿಸಿ ಸುಪ್ರೀಂ ಗೆ ಅರ್ಜಿ ಸಲ್ಲಿಸಿದ್ದು, ಏ.2 ರಂದು ಅರ್ಜಿ ವಿಚಾರಣೆ ನಡೆಯಲಿದೆ.

# ವಾಹನ ಹಿಂಪಡೆಯಲು ಬಂದವನ ಮೇಲೆ ಹಲ್ಲೆ: ಪಿಎಸ್‌ಐ, ಸಿಬ್ಬಂದಿ ಅಮಾನತು

**ಬೆಂಗಳೂರು :** ಜಪ್ತಿಯಾಗಿದ್ದ ದ್ವಿಚಕ್ರ ವಾಹನ ಹಿಂಪಡೆಯಲು ಬಂದ ವ್ಯಕ್ತಿಯನ್ನ ಥಳಿಸಿ, ಹಲ್ಲೆಗೈದ ಆರೋಪದ ಕೇಳಿಬಂದ ಬೆನ್ನಲ್ಲೇ ವಿಜಯನಗರ ಸಂಚಾರ ಠಾಣೆಯ ಪಿಎಸ್‌ಐ ಶಾಂತರಾಮ್ ಹಾಗೂ ಸಿಬ್ಬಂದಿ ಸಿದ್ದಿಕಿಯನ್ನು ಅಮಾನತುಗೊಳಿಸಲಾಗಿದೆ.

ಈಶ್ವರ್ ಎಂಬ ದ್ವಿಚಕ್ರ ವಾಹನದ ಮಾಲೀಕನಿಗೆ ಥಳಿಸಿದ್ದ ಸಿಬ್ಬಂದಿಗಳಿಬ್ಬರನ್ನೂ ಅಮಾನತುಗೊಳಿಸಿ ಸಂಚಾರ ವಿಭಾಗದ ಜಂಟಿ ಆಯುಕ್ತ ಎಂ. ಎನ್. ಅನುಚೇತ್ ಆದೇಶಿಸಿದ್ದಾರೆ. ಮಾರ್ಚ್ 14ರಂದು ಜಿ. ಟಿ. ಮಾಲ್ ಬಳಿ ಡ್ರಿಂಕ್ ಅಂಡ್ ಡ್ರೈವ್ ತಪಾಸಣೆ ಮಾಡುವಾಗ ರಸ್ತೆಯಲ್ಲಿ ದ್ವಿಚಕ್ರ ವಾಹನ ಸವಾರ ಈಶ್ವರ್ ಪಾನಮತ್ತರಾಗಿರುವುದು ಪತ್ತೆಯಾಗಿತ್ತು. 'ನ್ಯಾಯಾಲಯದಲ್ಲಿ ದಂಡ ಪಾವತಿಸಿದರೆ 10 ಸಾವಿರ ರೂ. ಆದರೆ ಸ್ಥಳದಲ್ಲಿಯೇ 3 ಸಾವಿರ ರೂ. ನೀಡಿದರೆ ಬಿಟ್ಟು ಕಳಿಸುತ್ತೇವೆ ಎಂದು ಪಿಎಸ್‌ಐ ಮತ್ತು ಸಿಬ್ಬಂದಿ ಹೇಳಿದ್ದರು' ಎಂದು ಈಶ್ವರ್ ಆರೋಪಿಸಿದ್ದಾರೆ.

ಜೊತೆಗೆ ಆನ್‌ಲೈನ್‌ನಲ್ಲಿ ಹಣ ವರ್ಗಾಯಿಸಲು ಮುಂದಾದಾಗ ನಗದು ರೂಪದಲ್ಲಿಯೇ ನೀಡುವಂತೆ ಪೊಲೀಸರು ಒತ್ತಾಯಿಸಿದ್ದರು. ಇದರಿಂದಾಗಿ ತನ್ನ ಬಳಿ ನಗದು ಹಣವಿಲ್ಲ ತಾನು ನ್ಯಾಯಾಲಯದಲ್ಲಿಯೇ ದಂಡ ಪಾವತಿಸುವುದಾಗಿ ಹೇಳಿದ್ದೆ. ಈ ವೇಳೆ ಪೊಲೀಸರು ತನ್ನ ದ್ವಿಚಕ್ರ ವಾಹನ ಜಪ್ತಿ ಮಾಡಿ, ದಂಡದ ರಶೀದಿ ಕೊಟ್ಟು ಕಳುಹಿಸಿದ್ದರು ಎಂದು ಬೈಕ್ ಮಾಲೀಕ ತಿಳಿಸಿದ್ದಾರೆ.

ಮಾರನೇ ದಿನ ನ್ಯಾಯಾಲಯದಲ್ಲಿ ದಂಡದ ಹಣ ಹಾಗೂ ಇತರೆ ಸಂಚಾರ ಉಲ್ಲಂಘನೆಗಳ ದಂಡ ಸಹಿತ 13 ಸಾವಿರ ರೂ. ಪಾವತಿಸಿದ್ದ ಈಶ್ವರ್, ತಮ್ಮ ದ್ವಿಚಕ್ರ ವಾಹನ ಹಿಂಪಡೆಯಲು ವಿಜಯನಗರ ಸಂಚಾರ ಠಾಣೆ ಬಳಿ ಹೋಗಿದ್ದರು. ಈ ವೇಳೆ ಸ್ಥಳದಲ್ಲಿದ್ದ ಪಿಎಸ್‌ಐ ಶಾಂತರಾಮ್ ಹಾಗೂ ಸಿಬ್ಬಂದಿ ಸಿದ್ದಿಕಿ ಅವರು ಈಶ್ವರ್‌ನನ್ನು ಉದ್ದೇಶಿಸಿ ನಿಂದಿಸಲಾರಂಭಿಸಿದ್ದರಂತೆ. ಅದೇ ಸಂದರ್ಭದಲ್ಲಿ ಮಾತಿಗೆ ಮಾತು ಬೆಳೆದಾಗ ಈಶ್ವರ್‌ನನ್ನು ಠಾಣೆಯೊಳಗೆ ಕರೆದೊಯ್ದು ಹಿಗ್ಗಾಮುಗ್ಗಾ ಥಳಿಸಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಹಲ್ಲೆಯಿಂದ ಈಶ್ವರ್ ಠಾಣೆಯಲ್ಲೇ ಪ್ರಜ್ಞೆ ತಪ್ಪಿದ್ದಾನೆ. ತಕ್ಷಣ ಆಟೋ ಕರೆಸಿ ಆಸ್ಪತ್ರೆಗೆ ದಾಖಲಿಸಲು ಮುಂದಾದಾಗ ಘಟನೆಯನ್ನು ಗಮನಿಸುತ್ತಿದ್ದ ಸಾರ್ವಜನಿಕರು ಪೊಲೀಸರನ್ನು ತರಾಟೆ ತೆಗೆದುಕೊಂಡಿರುವುದು ವಿಡಿಯೋದಲ್ಲಿ ಸೆರೆಯಾಗಿತ್ತು. ಈ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿತ್ತು. ಬಳಿಕ ಈ ಘಟನೆಯ ಕುರಿತು ಪ್ರಾಥಮಿಕ ತನಿಖೆ ಕೈಗೊಂಡು ವರದಿ ಸಲ್ಲಿಸುವಂತೆ ಎಸಿಪಿಯವರಿಗೆ ಡಿಸಿಪಿ ಸೂಚನೆ ನೀಡಿದ್ದರು.

## ಮೊದಲ ಪುಟದಿಂದ

### ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಗೆ ನೋಂದಣಿ ಕಡ್ಡಾಯ

ದಿನದ 24 ಗಂಟೆಯೂ ಕಾರ್ಯನಿರ್ವಹಿಸುತ್ತಿವೆ. ಬೆಂಗಳೂರು ನಗರದಲ್ಲಿ ಮಹಿಳೆಯರ ರಕ್ಷಣೆಗಾಗಿ ಮಹಿಳಾ ಸಹಾಯವಾಣಿ 1091 ಮತ್ತು ವನಿತಾ ಸಹಾಯವಾಣಿ 22943225 ಕಾರ್ಯನಿರ್ವಹಿಸುತ್ತಿವೆ. ಜೊತೆಗೆ ಮಹಿಳಾ ದೌರ್ಜನ್ಯ ತಡೆಯಲು ರಾಣಿ ಚನ್ನಮ್ಮ ತಂಡ ರಚಿಸಿದ್ದು, ಮಹಿಳೆಯರಿಗೆ ಸ್ವಯಂ ರಕ್ಷಣೆ ಹಾಗೂ ಮಾರ್ಷಿಯಲ್ ಆರ್ಟ್ಸ್ ತರಬೇತಿ ನೀಡಲಾಗುತ್ತಿದೆ ಎಂದರು.

### ವಿಧೇಯಕ ಮಂಡನೆ

ಈ ತಿದ್ದುಪಡಿ ವಿಧೇಯಕವನ್ನು ಮಂಡಿಸಲಾಗಿದೆ ಎಂದರು. ಈ ತಿದ್ದುಪಡಿ ವಿಧೇಯಕದಲ್ಲಿ ಯಾವುದೇ ಬೀದಿಯವನ್ನು ಸಾರ್ವಜನಿಕ ಬೀದಿ ಎಂದು ಘೋಷಿಸಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ಬಿಬಿಎಂಪಿ ಪ್ರದೇಶದಲ್ಲಿರುವ ಖಾಸಗಿ ಬೀದಿಗಳ ಅಭಿವೃದ್ಧಿಯೂ ಸಾಧ್ಯವಾಗುತ್ತದೆ ಎಂದರು.ಭಾರತದ ಸಂವಿಧಾನದ 243ಫ ಅನುಚ್ಛೇಧದ ಅನುಸಾರ ಶುಲ್ಕ ದಂಡದ ದರಗಳನ್ನು ನಿಗದಿಪಡಿಸುವ ಅಧಿಕಾರವನ್ನು ಪಾಲಿಕೆಗೆ ಈ ವಿಧೇಯಕದ ಮೂಲಕ ನೀಡಲಾಗುತ್ತದೆ. ಗರಿಷ್ಠ ಮಿತಿಯನ್ನು ಕಡಿಮೆಗೊಳಿಸುವುದು, ಕಟ್ಟಡ ಲೈಸೆನ್ಸ್, ಪ್ರಾರಂಭ ಪ್ರಮಾಣ ಪತ್ರ ಮತ್ತು ಸ್ವಾಧೀನ ಪ್ರಮಾಣ ಪತ್ರಗಳಿಗಾಗಿ ಪರಿಶೀಲನಾ ಶುಲ್ಕದೊಂದಿಗೆ ಅನುರೂಪವಾದ ಶುಲ್ಕವನ್ನು ನಿಗದಿ ಮಾಡಲು ಈ ವಿಧೇಯಕವನ್ನು ಮಂಡಿಸಲಾಗಿದೆ.

### ಶಾಸಕರ ಗೌರವ ಮುಖ್ಯ

ಉತ್ತರವನ್ನು ಸೌಜನ್ಯಯುತವಾಗಿ ನೀಡಬೇಕು ಎಂದು ಹೇಳಿದರು.ಅಗೌರವದಿಂದ ನಡೆದುಕೊಳ್ಳಬಾರದು, ಯಾಕೆಂದರೆ ನಾವೆಲ್ಲ ಬದುಕೋದೇ ಗೌರವಕ್ಕಾಗಿ, ಅದೇ ಸಿಗದಿದ್ದರೆ ಹೇಗೆ? ಸರ್ಕಾರ ಯಾವತ್ತಿಗೂ ಶಾಸಕರ ಪರ ನಿಂತುಕೊಳ್ಳಬೇಕು ಎಂದು ಸ್ಪೀಕರ್ ಹೇಳಿದರು.

### ಬ್ರೌನ್‌ಶುಗರ್ ವಶ

ಆತನಿಂದ ಎರಡು ಮೊಬೈಲ್ ಫೋನ್ ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಸ್ಸಾಂ ರೈಫಲ್ಸ್ ಹೇಳಿಕೆ ತಿಳಿಸಿದೆ. ತೆಂಗೌಪಾಲ್ ಜಿಲ್ಲೆಯವನಾದ ವ್ಯಕ್ತಿಯನ್ನು ಪೊಲೀಸರಿಗೆ ಹಸ್ತಾಂತರಿಸಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ಅಕ್ಕಿ ಕೊಡುತ್ತೇವೆ

ಅಕ್ಕಿ ಇದೆ. ನಾವು ನಿರ್ಣಯ ಮಾಡಿದಂತೆ ಹೆಚ್ಚುವರಿ ಅಕ್ಕಿಗೆ ಹಣ ಕೊಟ್ಟೆವು. ಈಗ ಕೇಂದ್ರ ಸರ್ಕಾರ ನಮಗೆ ಅಕ್ಕಿ ಕೊಡಲು ಸಿದ್ಧವಿದೆ. ಹೀಗಾಗಿ ಏಪ್ರಿಲ್ ನಿಂದ ಹಣದ ಬದಲಾಗಿ 10 ಕೆಜಿ ಅಕ್ಕಿ ಕೊಡುತ್ತೇವೆ ಎಂದರು. ಸಿಎಂ ಬದಲಾವಣೆ ವಿಷಯ ನಮ್ಮ ಮುಂದಿಲ್ಲ. ಸಿಎಂ ಬದಲಾವಣೆ ಬಗ್ಗೆ ಹೈಕಮಾಂಡ್ ನಿರ್ಧಾರ ಮಾಡುತ್ತದೆ. ನಾವು ಏನು ಮಾತನಾಡಲ್ಲ ಎಂದು ಕೆಎಚ್ ಮುನಿಯಪ್ಪ ತಿಳಿಸಿದರು.

### ಭೂಮಿಯತ್ತ ಸುನೀತಾ ವಿಲಿಯಮ್ಸ್

ಗಗನಯಾತ್ರಿಗಳಿಗೆ ಭೂಮಿ ಮೇಲೆ ಒಗ್ಗಿಕೊಳ್ಳಲು ಬೇಕಾದ ಎಲ್ಲಾ ರೀತಿಯ ಸಹಾಯ ಮಾಡಲಿದೆ. ನೆಲದ ಮೇಲೆ ನಡೆಯಲು ಸಹಾಯ, ಆಹಾರ, ಅಗತ್ಯ ಔಷಧಗಳನ್ನು ಒದಗಿಸುವುದು, ಕಾಲುಗಳನ್ನು ಬಲಪಡಿಸುವ ವ್ಯಾಯಾಮ, ಕಾಲುಗಳು ತಮ್ಮ ನಿಯಂತ್ರಣಕ್ಕೆ ಬರುವವರೆಗೂ ಮೇಲ್ವಿಚಾರಣೆ ನಡೆಯಲಿದೆ. ನಮ್ಮ ಗಗನಯಾನಿಗಳನ್ನು ಯಶಸ್ವಿಯಾಗಿ ಕರೆತರುವ ಕೆಲಸ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಆರಂಭವಾಗಿದೆ. ಫ್ಲೋರಿಡಾದ ಕಡಲ ತೀರಕ್ಕೆ ಬರುವ ನಿರೀಕ್ಷೆಯಿದೆ. ನಾಸಾ ಮತ್ತು ಸ್ಪೇಸ್ ಎಕ್ಸ್ ಜಂಟಿ ಪ್ರಯತ್ನದ ಮೂಲಕ ವಾಪಸ್ ಕರೆತರುವ ಕಾರ್ಯಚರಣೆ ಇದಾಗಿದೆ ಎಂದು ನಾಸಾ ತಿಳಿಸಿದೆ.

### ಕುರಿತು ಚರ್ಚೆಗೆ ದೆಹಲಿ ಭೇಟಿ

ಎನ್ನುವ ಸಂದೇಶವಿದೆ. ಅಲ್ಲಿಗೆ ಹೋದಾಗ ಇದರ ಸತ್ಯಾಸತ್ಯತೆ ತಿಳಿಯುತ್ತದೆ. ಆದರೆ ನಾನು ಆಹ್ವಾನವನ್ನು ತಿರಸ್ಕರಿಸಬಾರದು ಎಂದು ಭೇಟಿ ಮಾಡಿ ಮಾತುಕತೆ ನಡೆಸುತ್ತೇನೆ" ಎಂದರು. "ಜೊತೆಗೆ ಇತರೇ ಇಲಾಖೆಗಳ ಸಚಿವರು, ಅರಣ್ಯ ಇಲಾಖೆಯ ಸಚಿವರನ್ನು ಸಮಯ ಸಿಕ್ಕರೆ ಭೇಟಿ ಮಾಡಿ ಚರ್ಚೆ ನಡೆಸಲಾಗುವುದು" ಎಂದು ಹೇಳಿದರು.

ಕಾಮಗಾರಿ ವೇಳೆ ವಿದ್ಯುತ್ ಕಂಬ ಬಿದ್ದು ಮಹಿಳೆಯರು ಮೃತಪಟ್ಟಿರುವ ವಿಚಾರದ ಬಗ್ಗೆ ಕೇಳಿದಾಗ, "ಕಾಮಗಾರಿ ಸ್ಥಳಗಳಲ್ಲಿ ಈ ರೀತಿಯ ಅವಘಡಗಳು ನಡೆಯದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸೂಚನೆ ನೀಡುತ್ತೇನೆ" ಎಂದು ತಿಳಿಸಿದರು.

### ತೆರವಿಗೆ ಮುಂದಾದ ಅಧಿಕಾರಿಗಳು

ಒತ್ತುವರಿಯನ್ನು ತೆರವು ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದ್ದಾರೆ.

ಈ ಪ್ರಕರಣ ಸಂಬಂಧ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ಎಸ್‌ಐಟಿ ತಂಡ ರಚನೆ ಮಾಡಿ ತನಿಖೆಗೆ ಆದೇಶ ಕೂಡ ಮಾಡಿದ್ದರು. ಅದರಂತೆ ಬಿಡದಿಯ ಕೇತಗಾನಹಳ್ಳಿಯ ಸರ್ವೆ ನಂಬರ್ 7, 8, 9, 10, 16, 17 ಮತ್ತು 79ರಲ್ಲಿ ಸರ್ವೆ ಕಾರ್ಯ ಕೂಡ ಮಾಡಿದ್ದರು.

ಸರ್ವೆಯಲ್ಲಿ ಸುಮಾರು 15 ಎಕರೆ ಸರ್ಕಾರಿ ಭೂಮಿ ಒತ್ತುವರಿ ಆಗಿರುವ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆ ಕಂದಾಯ ಇಲಾಖೆ ಹಾಗೂ ಸರ್ವೆ ಇಲಾಖೆಯಿಂದ ಜಂಟಿ ಸರ್ವೆ ನಡೆಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಇಂದು ಒತ್ತುವರಿ ತೆರವು ಕಾರ್ಯಕ್ಕೆ ಮುಂದಾದ ಕಂದಾಯ ಇಲಾಖೆ ಅಧಿಕಾರಿಗಳು ಹೆಚ್.ಡಿ. ಕುಮಾರಸ್ವಾಮಿ ತೋಟದ ಮನೆಯ ಸುತ್ತಮುತ್ತಲಿನ ಒತ್ತುವರಿ ಜಾಗ ತೆರವಿಗೆ ಸಿದ್ಧತೆ ನಡೆಸಿದ್ದಾರೆ. ಈಗಾಗಲೇ ಹೆಚ್‌ಡಿಕೆ ತೋಟದ ಮನೆ ಮುಂದೆ ಎರಡು ಜೆಸಿಬಿಗಳು ನಿಂತಿರುವುದು ಕಂಡುಬಂದಿದೆ.

### ಕಾಪಾಡುವಂತೆ ಸಿಎಂ ಮನವಿ

ಭಂಡಾರ ರಸ್ತೆಯ ಬಳಿಯ ಹಂಸಪುರಿ ಪ್ರದೇಶದಲ್ಲೂ ಕೂಡ ಹಿಂಸಾಚಾರ ಭುಗಿಲೆದ್ದಿತು. ಈ ಪ್ರದೇಶದಲ್ಲಿ ಒಂದು ಮನೆ ಮತ್ತು ಕ್ಲಿನಿಕ್ ಅನ್ನು ಧ್ವಂಸ ಮಾಡಲಾಗಿದೆ ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ. ಚಟ್ನಿಸ್ ಪಾರ್ಕ್‌ನಿಂದ ಶುಕ್ರವಾರಿ ತಾಲವೊ ರಸ್ತೆಯಲ್ಲಿ ಘಟನೆಯ ತೀವ್ರತೆ ಹೆಚ್ಚಿದ್ದು, ಗಲಭೆಕೋರರು ಕೆಲವು ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ. ಅಲ್ಲದೇ ಮನೆಗಳ ಮೇಲೂ ಕಲ್ಲು ತೂರಾಟ ನಡೆಸಿದ್ದಾರೆ.

ಮಹಲ್ ಪ್ರದೇಶ ಸೇರಿದಂತೆ ವಿವಿಧೆಡೆ ನಡೆದ ಹಿಂಸಾಚಾರ ಸಂಬಂಧ ಪೊಲೀಸರು 15 ಆರೋಪಿಗಳನ್ನು ಬಂಧಿಸಿದ್ದಾರೆ. ಕಾರ್ಯಾಚರಣೆ ವೇಳೆ ಡಿಸಿಪಿ ನಿಕೇತನ್ ಕದಮ್ ಅವರಿಗೆ ಗಂಭೀರ ಗಾಯವಾಗಿದೆ.

ಸೂಕ್ಷ್ಮ ಪ್ರದೇಶಗಳಲ್ಲಿ ಭದ್ರತೆ ಬಿಗಿಗೊಳಿಸಲಾಗಿದೆ. ತ್ವರಿತ ಪ್ರತಿಕ್ರಿಯೆ ತಂಡಗಳು (ಕ್ಯೂಆರ್‌ಟಿ), ಗಲಭೆ ನಿಯಂತ್ರಣ ಪೊಲೀಸರು ಮತ್ತು ರಾಜ್ಯ ಮೀಸಲು ಪೊಲೀಸ್ ಪಡೆ ಹಾಗೂ ವಿವಿಧ ಠಾಣೆಗಳಿಂದ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ಕೂಡ ಸ್ಥಳದಲ್ಲಿ ನಿಯೋಜಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದರು. ಸಿಎಂ, ಗಡ್ಕರಿ ಮನವಿ: ನಾಗ್ಪುರದಲ್ಲಿ ಹಿಂಸಾಚಾರ ಭುಗಿಲೆದ್ದ ಬೆನ್ನಲ್ಲೇ ಕ್ಷೇತ್ರದ ಜನರಿಗೆ ಶಾಂತಿ ಕಾಯ್ದುಕೊಳ್ಳುವಂತೆ, ಸಿಎಂ ದೇವೇಂದ್ರ ಫಡ್ನವೀಸ್ ಮತ್ತು ಕೇಂದ್ರ ಸಚಿವ ನಿತಿನ್ ಗಡ್ಕರಿ ಮನವಿ ಮಾಡಿದ್ದಾರೆ. ನಾಗ್ಪುರ ಶಾಂತಿ ಮತ್ತು ಸೌಹಾರ್ದತೆಗೆ ಹೆಸರುವಾಸಿಯಾಗಿದೆ. ಈ ನಗರದಲ್ಲಿ ಜಾತಿ ಮತ್ತು ಧರ್ಮದ ಆಧಾರದ ಮೇಲೆ ಜಗಳ ನಡೆಯುವುದಿಲ್ಲ. ನಾಗ್ಪುರದ ಜನರು ಆಡಳಿತದೊಂದಿಗೆ ಸಹಕರಿಸಿ ಶಾಂತಿ ಸ್ಥಾಪನೆಗೆ ಪ್ರಯತ್ನಿಸಬೇಕು ಎಂದು ಕೋರಿದ್ದಾರೆ.

### ಮೀಸಲಾತಿ ನೀಡಿ

ರಚನೆಯ ಸಂದರ್ಭದ ಚರ್ಚೆಯಲ್ಲಿ ಸ್ಪಷ್ಟವಾಗಿ ಹೇಳಿದ್ದಾರೆ. ಅಂಬೇಡ್ಕರ್ ಅವರ ಮೂಲತತ್ವ, ಸಂವಿಧಾನದ ಮೂಲತತ್ವಕ್ಕೆ ವಿರುದ್ದವಾಗಿ ಇರುವ ಮೀಸಲಾತಿ ನೀಡುತ್ತಿದ್ದಾರೆ. ಅಷ್ಟೇ ಅಲ್ಲದೇ ಸಮಾಜದಲ್ಲಿ ಕ್ಷೋಭೆ ಉಂಟು ಮಾಡಲು ಪ್ರಯತ್ನ ಮಾಡುತ್ತಿದ್ದಾರೆ. ಅವರಿಗೆ ಸಮಾಜ ಒಡೆದರೇನು, ಬಿಟ್ಟರೇನು ತಮ್ಮ ಮತಬ್ಯಾಂಕ್ ಗಟ್ಟಿಮಾಡಿಕೊಳ್ಳುವ ಕೆಲಸ ಮಾಡುತ್ತಿದ್ದಾರೆ. ಇದಕ್ಕೆ ಕಾಂಗ್ರೆಸ್ ಬರುವ ದಿನಗಳಲ್ಲಿ ದೊಡ್ಡ ಬೆಲೆ ಕಟ್ಟಬೇಕಾಗುತ್ತದೆ ಎಂದು ಹೇಳಿದರು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ವಿರುದ್ದ ಕಾಂಗ್ರೆಸ್ ಎರಡು ಬಾರಿ ಅತ್ಯಂತ ಶ್ರೀಮಂತ ಅಭ್ಯರ್ಥಿಗಳನ್ನು ಕಣಕ್ಕಿಳಿಸಿ ಅಂಬೇಡ್ಕರ್ ಅವರನ್ನು ಸೋಲಿಸಿದ್ದರು. ಅಲ್ಲದೇ ಅಂದಿನ ಪ್ರಧಾನಿ ಜವಾಹರಲಾಲ್ ನೆಹರೂ ಅವರೂ ಅಂಬೇಡ್ಕರ್ ಅವರ ವಿರುದ್ದ ಪ್ರಚಾರ ನಡೆಸಿದ್ದರು. ಸಾವರ್ಕರ್ ಅಂಬೇಡ್ಕರ್ ವಿರುದ್ದ ಪ್ರಚಾರ ಮಾಡಿದ್ದರಾ, ಅಂಬೇಡ್ಕರ್ ಅವರನ್ನು ಕಾಂಗ್ರೆಸ್ ಸೋಲಿಸಿದ್ದು ಜಗಜ್ಜಾಹೀರಾಗಿದೆ. ಸುಮ್ಮನೇ ಈಗ ಇತಿಹಾಸ ತಿರುಚುವ ಕೆಲಸ ಮಾಡಿ ತಮ್ಮ ಪಕ್ಷವನ್ನು ಉಳಿಸಿಕೊಳ್ಳುವ ಕೆಲಸ ಸಾಧುವು ಅಲ್ಲ, ಸಾರ್ಥಕತೆಯೂ ಅಲ್ಲ ಎಂದು ಹೇಳಿದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ತೋಟದ ಮನೆ ತೆರವು ವಿವಾದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕುಮಾರಸ್ವಾಮಿ ಅವರು ಈಗಾಗಲೇ ತಾವೇನು ತಪ್ಪು ಮಾಡಿಲ್ಲ ಎಂದು ಹೇಳಿದ್ದಾರೆ. ಅಲ್ಲದೇ ಈಗಿರುವ ಕಾಂಗ್ರೆಸ್ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಹೇಳಿದ್ದಾರೆ ಎಂದರು.

ಕುರ್ಚಿ ಗಟ್ಟಿಗಳಿಸಿಕೊಳ್ಳಲು ಆರ್‌ಎಸ್‌ಎಸ್ ಅಸ್ತ್ರ

ಆರ್‌ಎಸ್‌ಎಸ್ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಡಿರುವ ಆರೋಪದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಆರ್‌ಎಸ್‌ಎಸ್ ಹುಟ್ಟಿರುವುದೇ ಸೇವೆ ಮಾಡಲು, ಬ್ರಿಟೀಷರ ಕಾಲದಲ್ಲಿ ಕೆಳ ಮಟ್ಟದ ಜನರಿಗೆ ನ್ಯಾಯ ಸಿಗುತ್ತಿಲ್ಲ ಎಂದು ಹೇಳಿ ಅಂತ್ಯೋದಯ ವಿಚಾರ ಇಟ್ಟುಕೊಂಡು ಆರ್‌ಎಸ್‌ಎಸ್ ಹುಟ್ಟಿಕೊಂಡಿದೆ. ಸಿಎಂ ಸಿದ್ದರಾಮಯ್ಯ ಅವರು ಆರ್‌ಎಸ್‌ಎಸ್ ಬೈದರೆ ತಮ್ಮ ಮತ ಬ್ಯಾಂಕ್ ಗಟ್ಟಿಯಾಗುತ್ತದೆ ಎಂದು ತಿಳಿದು ಆರ್‌ಎಸ್‌ಎಸ್ ವಿರುದ್ದ ಆರೋಪ ಮಾಡುತ್ತಾರೆ. ಆರ್‌ಎಸ್‌ಎಸ್ ಏನು ಎಂದು ಸ್ವಾತಂತ್ರ್ಯ ಬಂದು ಎಪ್ಪತ್ತೇಳು, ಎಪ್ಪತ್ತೆಂಟು ವರ್ಷದಲ್ಲಿ ಇಡೀ ದೇಶಕ್ಕೆ ಗೊತ್ತಿದೆ. ಕಾಂಗ್ರೆಸ್ ನಾಯಕಿ ಇಂದಿರ ಗಾಂಧಿಯೇ ಆರ್‌ಎಸ್‌ಎಸ್‌ನ್ನು ಹೊಗಳಿದ್ದರು, ಕಾಂಗ್ರೆಸ್ ಮುಖಂಡರಗಿದ್ದ ಪ್ರಣಬ್ ಮುಖರ್ಜಿ ಅವರೇ ಆರ್‌ಎಸ್‌ಎಸ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ್ದಾರೆ. ಸಿದ್ದರಾಮಯ್ಯ ಅವರು ಮೂಲ ಕಾಂಗ್ರೆಸ್ಸಿಗರಲ್ಲ, ಅವರು ಹೊರಗಡೆಯಿಂದ ಬಂದವರು, ಯಾರು ಹೊರಗಡೆಯಿಂದ ಬಂದಿರುತ್ತಾರೊ ಅವರು ತಮ್ಮ ನಿಷ್ಠೆ ತೋರಿಸಲು ಪದೇ ಪದೇ ಮಾತನಾಡುತ್ತಾರೆ. ಹೀಗಾಗಿ ಸಿದ್ದರಾಮಯ್ಯ ಅವರು ತಮ್ಮ ನಾಯಕತ್ವ ಗಟ್ಟಿಗೊಳಿಸಿಕೊಳ್ಳಲು ಆರ್‌ಎಸ್‌ಎಸ್‌ನ್ನು ಅಸ್ತ್ರವಾಗಿ ಬಳಸುತ್ತಿದ್ದಾರೆ. ಆರ್. ಎಸ್ ಎಸ್ ಏನು ಎಂದು ಎಲ್ಲ ಜನರಿಗೂ ಗೊತ್ತಿದೆ ಎಂದು ಹೇಳಿದರು.

### ಗೂಂಡಾ ರಾಜ್ಯ ನಿರ್ಮಾಣ

ಯುವತಿ ಸ್ವಾತಿಯನ್ನು ಲವ್ ಜಿಹಾದ್ ಬಲೆಗೆ ಬೀಳಿಸಲಾಗಿತ್ತು. ನಂತರ ಕಿಡಿಗೇಡಿ ಯುವಕರು ಮದುವೆಯ ಪ್ರಸ್ತಾಪ ಮಾಡಿ ಆಕೆಯನ್ನು ನಂಬಿಸಿದ್ದರು. ಬಳಿಕ ಆಕೆಯನ್ನು ಪಾಳು ಬಿದ್ದ ಶಾಲೆಗೆ ಕರೆದುಕೊಂಡು ಹೋಗಿ ಕೇಸರಿ ಟವೆಲ್‌ನಲ್ಲಿ ಸಾಯಿಸಿದ್ದಾರೆ. ಈ ಪ್ರಕರಣದ ಎಫ್‌ಐಆರ್ ಆದ ಬಳಿಕವೂ ತಾಯಿಗೆ ಮಾಹಿತಿ ನೀಡದೆ ಪೊಲೀಸರು ಪ್ರಕರಣ ಮುಚ್ಚಿಹಾಕಿದ್ದಾರೆ. ಈ ಲವ್ ಜಿಹಾದ್ ಪ್ರಕರಣದಲ್ಲಿ ಪೊಲೀಸರು ನಿರ್ಲಕ್ಷ್ಯ ತೋರಿದ್ದಾರೆ. ನೇಹಾ ಲವ್ ಜಿಹಾದ್ ಘಟನೆಯಾದಾಗಲೇ ಸರ್ಕಾರ ಎಚ್ಚೆತ್ತುಕೊಂಡು ಕ್ರಮ ಕೈಗೊಳ್ಳಬೇಕಿತ್ತು. ಲವ್ ಜಿಹಾದ್ ನಡೆಯುತ್ತಿದ್ದರೂ ಅದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ ಎಂದು ದೂರಿದರು.

ಸ್ವಾತಿಯ ಕುಟುಂಬದ ಸ್ಥಿತಿ ಚೆನ್ನಾಗಿಲ್ಲ. ಅವರ ತಂದೆ ವಿದ್ಯುತ್ ಶಾಕ್ ತಗುಲಿ ತೀರಿಕೊಂಡಿದ್ದರು. ಸ್ವಾತಿ ಆಸ್ಪತ್ರೆಯಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದರು. ಹೋರಿ ಹಬ್ಬ ನಡೆದಾಗ ಅಲ್ಲಿಗೆ ಸ್ನೇಹಿತರ ಜೊತೆ ಹೋಗುತ್ತಿದ್ದರು. ಈಗ ಅವರ ಕುಟುಂಬ ಇನ್ನಷ್ಟು ಸಂಕಷ್ಟಕ್ಕೆ ಸಿಲುಕಿದೆ ಎಂದರು.

ಹಂಪಿ ಘಟನೆ : ಹಂಪಿಯಲ್ಲಿ ವಿದೇಶಿ ಮಹಿಳೆಯ ಮೇಲಿನ ಅತ್ಯಾಚಾರ ದೊಡ್ಡ ಸುದ್ದಿಯಾಗಿದೆ. ಮೂರು ಯುವಕರು ಒಡಿಶಾ ಮೂಲದ ಒಬ್ಬನನ್ನು ಸಾಯಿಸಿ, ಇಸ್ರೇಲ್ ಮಹಿಳೆ ಹಾಗೂ ಹೋಮ್‌ಸ್ಟೇ ಮಹಿಳೆ ಮೇಲೆ ಅತ್ಯಾಚಾರ ಮಾಡಿದ್ದಾರೆ. 60% ಗೂ ಅಧಿಕ ಪ್ರವಾಸಿಗರು ಇಸ್ರೇಲ್‌ನಿಂದ ರಾಜ್ಯಕ್ಕೆ ಬರುತ್ತಾರೆ. ಇಲ್ಲಿ ಸುರಕ್ಷತೆ ಇರುವ ಕಾರಣಕ್ಕೆ ವಿದೇಶಿಯರು ಭೇಟಿ ನೀಡುತ್ತಾರೆ. ಈ ಘಟನೆಯಿಂದಾಗಿ ಪ್ರವಾಸಿಗರು ಬರುತ್ತಿಲ್ಲ. ಇದರಿಂದಾಗಿ ಹಂಪಿಗೆ ಕೆಟ್ಟ ಹೆಸರು ಬರುವುದರ ಜೊತೆಗೆ, ಆರ್ಥಿಕತೆ ಕುಸಿದಿದೆ. ಇಷ್ಟೆಲ್ಲ ಆದ ನಂತರವೂ, ವಿದೇಶಿಯರು ನಮ್ಮನ್ನು ಹೊಗಳಿದ್ದಾರೆ ಎಂದು ರಾಜ್ಯಪಾಲರ ಭಾಷಣದಲ್ಲಿ ಹೇಳಿದ್ದಾರೆ ಎಂದರು.

ತಗ್ಗಿಸುವಂತಹ ಅಪರಾಧಿ ಚಟುವಟಿಕೆಗಳು ನಡೆಯುತ್ತಿದ್ದರೂ ಸರ್ಕಾರ ಯಾರನ್ನೂ ಬಂಧಿಸಿಲ್ಲ. ಇದರಿಂದಾಗಿ ಸರ್ಕಾರ ಬದುಕಿದೆಯೇ ಸತ್ತಿದೆಯೇ ಎಂಬ ಪ್ರಶ್ನೆ ಬರುತ್ತಿದೆ. ಹೇಳುವವರು, ಕೇಳುವವರು ಯಾರೂ ಇಲ್ಲದೆ ಗೂಂಡಾ ರಾಜ್ಯ ಸೃಷ್ಟಿಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾನೂನು ಸುವ್ಯವಸ್ಥೆ ಸರಿಯಾಗಿದೆ ಎಂದು ಸಮರ್ಥನೆ ಮಾಡಿಕೊಳ್ಳುತ್ತಾರೆ. ಇಂತಹ ಸ್ಥಿತಿಯನ್ನು ಸೃಷ್ಟಿಸಿದ ಸರ್ಕಾರದ ನಡೆಯನ್ನು ಖಂಡಿಸುತ್ತೇನೆ ಎಂದರು.

# ನಾವುಗಳು ಜಾತಿಯ ಮನಸ್ಥಿತಿಯಿಂದ ಹೊರ ಬಂದರೆ ಒಗ್ಗಟ್ಟಿನ ಬಲವಿದೆ



**ನಾಗಮಂಗಲ:** ಜಾತಿ ಮನಸ್ಥಿತಿಯಿಂದ ಹೊರಬಂದು ಹಿಂದೂಗಳು ಒಟ್ಟಾದರೆ ಭಾರತ ವಿಶ್ವಗುರುವಾಗುವುದರಲ್ಲಿ ಯಾವ ಸಂಶಯವೂ ಇಲ್ಲ ಎಂದು ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷರಾದ ಮಂಜುನಾಥ್.ಸಿ.ಎನ್ ಅಭಿಪ್ರಾಯಪಟ್ಟರು.

ಅವರು ನಾಗಮಂಗಲದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ವಿಶ್ವ ಹಿಂದುಪರಿಷದ್, ಬಜರಂಗದಳ, ದುರ್ಗಾವಾಹಿನಿ ವತಿಯಿಂದ ಮಂಡ್ಯದಲ್ಲಿ ಶ್ರೀರಾಮಾಂಜನೇಯ ಮಹೋತ್ಸವ ಸಮಿತಿಯಿಂದಬೃಹತ್ ಶೋಭಾಯಾತ್ರೆ ಹಾಗೂ ಹಿಂದೂ ಸಮಾವೇಶದ ಅಂಗವಾಗಿ ಪಟ್ಟಣದ ಸೌಮ್ಯಕೇಶವಸ್ವಾಮಿ ದೇವಾಲಯದ ಮುಂಭಾಗದಲ್ಲಿ ಭಿತ್ತಿಪತ್ರ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಅಧರ್ಮಿಯರಿಂದ ದಿನನಿತ್ಯ ಅನೇಕ ಸಮಸ್ಯೆಗಳನ್ನು ಹೆದುರಿಸುತ್ತಿರುವ ನಾವು ಒಟ್ಟಾಗದಿದ್ದರೆ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳಲಿದೆ ಹಿಂದೂಗಳಾದ ನಾವು ನಮ್ಮ ಸಂಸ್ಕೃತಿಯನ್ನು ಹೆಚ್ಚು ಪ್ರೀತಿಸಬೇಕು ಜಿಲ್ಲೆಯಲ್ಲಿ ನಡೆಯುತ್ತಿರುವ ಬೃಹತ್ ರಾಮಾಂಜನೇಯ ಮಹೋತ್ಸವದಲ್ಲಿ ನಮ್ಮ ತಾಲ್ಲೂಕಿನಿಂದ ಸಾವಿರಾರು ಸಂಖ್ಯೆಯಲ್ಲಿ ಹಿಂದೂಗಳು ಹೊರಡೋಣ ಎಂದು ಕರೆನೀಡಿದರು.

ಬಜರಂಗದಳದ ಮೈಸೂರು ವಿಭಾಗಸಂಯೋಜಕರಾದ ಬಸವರಾಜು ಜಿಲ್ಲೆಯಲ್ಲಿ ಪ್ರತೀ ದಿನ ಹಿಂದೂಗಳ ಮೇಲೆ ದಬ್ಬಾಳಿಕೆ ದೌರ್ಜನ್ಯ ನಡೆಯುತ್ತಲೇ ಇದೆ ಕೆರಗೋಡಿನ ಶ್ರೀ ಹನುಮ ಧ್ವಜ ಕೆಳಗಡೆ ಇಳಿಸಲಾಯಿತು, ನಾಗಮಂಗಲದಲ್ಲಿ ಗಣಪತಿಗೆ ಚಪ್ಪಲಿ ತೂರಿ ಹಿಂದುಗಳ ಮೇಲೆ ದಬ್ಬಾಳಿಕೆ ನಡೆಸಲಾಯಿತು. ವಕ್ಫ್ ಹೆಸರಿನಲ್ಲಿ ಹಿಂದುಗಳ ಭೂಮಿಯುನ್ನುಕಿತ್ತುಕೊಳ್ಳಲಾಗುತ್ತಿದೆ ನಾವು ಹಿಂದುಗಳು ಬಹುಸಂಖ್ಯಾತರಾಗಿದ್ದ ಮಾತ್ರಕ್ಕೆ ಸುರಕ್ಷಿತರಲ್ಲ ನಾವು ಜಾಗೃತರಾದರೆ ನಮ್ಮ ಸುರಕ್ಷತೆ ಆಡಗಿದೆ ಹಾಗಾಗಿ ಶ್ರೀರಾಮಾಂಜನೇಯ ಮಹೋತ್ಸವಕ್ಕೆ ಸಾಗರೋಪಾದಿಯಲ್ಲಿ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಕುಟುಂಬ ಸಮೇತರಾಗಿ ಪಾಲ್ಗೊಳ್ಳೋಣ ಎಂದು ತಿಳಿಸಿದರು. ಅರ್ಚಕರ ಸಂಘದ ಶ್ರೀಪ್ರಸನ್ನಶೈವ ಮಾತನಾಡಿ ನಮ್ಮಲ್ಲಿರುವ ಜಾತಿ ಪದ್ದತಿಯನ್ನು ನಮ್ಮ ಮನೆಗಳಲ್ಲಿ ಆಚರಿಸೋಣ ಇಂದು ಹಿಂದೂಗಳು ಒಟ್ಟಾಗುವ ಸಮಯ ಬಂದಿದೆ ನಾವೆಲ್ಲ ಜಿಲ್ಲೆಯಲ್ಲಿ ಹಿಂದೂಗಳಶಕ್ತಿ ಪ್ರದರ್ಶಿಸೋಣ ಎಂದು ತಿಳಿಸಿದರು.

ಈ ಸಮಯದಲ್ಲಿ ಪುರಸಭೆ ಸದಸ್ಯರಾದ ತಿಮ್ಮಪ್ಪ, ಅಶೋಕ್, ಆಯುರ್ವೇದ ವೈದ್ಯ ವಿಶ್ವನಾಥ್, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಕೆ.ಸೀತಾರಾಮ್, ಮಾಜಿ ಅಧ್ಯಕ್ಷರಾದ ಬಿ.ಹೆಚ್.ರವಿ, ಪ್ರೆಸ್ ಕ್ಲಬ್ ನ ಉಪ್ಪಾರಹಳ್ಳಿ ವೆಂಕಟೇಶ್, ಅರ್ಚಕ ಸುದರ್ಶನ್, ಜಿಲ್ಲಾ ವಿಶ್ವಹಿಂದೂ ಪರಿಷತ್ ಕಾರ್ಯದರ್ಶಿ ಪುಣ್ಯಕೋಟಿ ರಘು, ಚೇತನ್ ಚಂದ್ರ, ಕಾಲಿಸ್ ಮಹೇಶ್, ಉಪ್ಪಾರಹಳ್ಳಿ ರಾಘು, ರಾಜೇಶ್, ಪ್ರವೀಣ್ ತೊಗಾಡಿಯಾ, ಸಂತೋಷ್ ಸೇರಿದಂತೆ ಹಲವಾರು ಭಾಗಿಯಾಗಿದ್ದರು.

# ಮಂಚನಬೆಲೆ ಎಡದಂಡೆ ನಾಲೆಗೆ ಹರಿದ ನೀರು

**: ಶಾಸಕ ಇಕ್ಬಾಲ್ ಹುಸೇನ್ ಚಾಲನೆ**



**ರಾಮನಗರ:** ಸಾವಿರಾರು ಹೆಕ್ಟೇರ್ ಕೃಷಿ ಪ್ರದೇಶಕ್ಕೆ ಮಂಚನಬೆಲೆ ಜಲಾಶಯದ ಎಡ ದಂಡೆ ಕಾಲುವೆಗೆ ಎರಡು ದಶಕಗಳ ಬಳಿಕ ನೀರು ಹರಿಸುವ ಕಾರ್ಯಕ್ಕೆ ರಾಮನಗರ ಕ್ಷೇತ್ರ ಶಾಸಕ ಇಕ್ಬಾಲ್ ಹುಸೇನ್ ಚಾಲನೆ ನೀಡಿದರು.

ಮಂಚನಬೆಲೆ ಜಲಾಶಯದಲ್ಲಿ ನೀರನ್ನು ಲಿಫ್ಟ್ ಮಾಡುವ ಯಂತ್ರಕ್ಕೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಶಾಸಕ ಇಕ್ಬಾಲ್ ಹುಸೇನ್ ರವರು ಎಡದಂಡೆ ಕಾಲುವೆಗೆ ನೀರು ಹರಿಸಿದರು. ನಾಲೆಯಲ್ಲಿ ನೀರು ಹರಿಯುತ್ತಿರುವುದನ್ನು ಕಂಡು ಸಂತಸಗೊಂಡ ಗ್ರಾಮಸ್ಥರು ಇಕ್ಬಾಲ್ ಹುಸೇನ್ ಅವರಿಗೆ ರೇಷ್ಮೆ ಹಾರ ಹಾಕಿ ಅಭಿನಂದಿಸಿದರು. ಆನಂತರ ಶಾಸಕರು ನಾಲೆ ದಂಡೆ ಮೇಲೆ ಕಾಲ್ನಡಿಗೆಯಲ್ಲಿ ಸಾಗಿ ನೀರು ಹರಿಯುತ್ತಿರುವುದನ್ನು ವೀಕ್ಷಣೆ ನಡೆಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಚನಬೆಲೆ ಜಲಾಶಯದಿಂದ ಎಡದಂಡೆ ನಾಲೆಯಿಂದ ನೀರು ಹರಿಯುವುದನ್ನು ರೈತರ ಬಹು ವರ್ಷಗಳ ಕನಸಾಗಿತ್ತು. 20 ವರ್ಷಗಳಿಂದ ನಾಲೆಯಲ್ಲಿ ನೀರು ಹರಿಸಿರಲಿಲ್ಲ. ರೈತನ ಮಗನಾಗಿ ಮತ್ತು ರೈತನಾಗಿ ಆ ಕನಸನ್ನು ಸಾಕಾರಗೊಳಿಸುವ ಕೆಲಸ ಮಾಡಿರುವುದಕ್ಕೆ ಖುಷಿ ತಂದಿದೆ ಎಂದು ಹೇಳಿದರು.

ಕೋಟ್ಯಂತರ ರುಪಾಯಿ ಖರ್ಚು ಮಾಡಿ ನಾಲೆ ನಿರ್ಮಿಸಿದ್ದರು ಅದರ ಪ್ರಯೋಜನ ಪಡೆಯಲಿಲ್ಲ ಎಂಬ ಕೊರಗಿತ್ತು. ಅದು ನೀಗಿದ್ದು, ಇದರಿಂದ ಹೈನುಗಾರಿಕೆ, ರೇಷ್ಮೆ, ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿದೆ. ಅಲ್ಲದೆ ಅಂತರ್ಜಲವೂ ವೃದ್ಧಿಯಾಗಲಿದೆ ಎಂದು ತಿಳಿಸಿದರು.

ಈಗ ಎಡ ದಂಡೆ ನಾಲೆಯನ್ನು 20 ಕಿ.ಮೀ ವರೆಗೆ ಸ್ವಚ್ಛಗೊಳಿಸಲಾಗಿದ್ದು, ಅಲ್ಲಿವರೆಗೂ ನೀರು ಸರಾಗವಾಗಿ ಹರಿಯಲಿದೆ. ಮುಂದಿನ 15 ದಿನದೊಳಗೆ ಬಲದಂಡೆ ನಾಲೆಯನ್ನು ದುರಸ್ಥಿಗೊಳಿಸಿ ನೀರು ಬಿಡಲಾಗುವುದು. ಎಡದಂಡೆ ನಾಲೆಯಲ್ಲಿ ಪ್ರಾಯೋಗಿಕವಾಗಿ ನೀರು ಹರಿಸಲಾಗುತ್ತಿದೆ. ಕೈಲಾಂಚವರೆಗೂ ನೀರು ಹರಿಯುವುದರಲ್ಲಿ ಸಂಶಯವಿಲ್ಲ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಮಾಜಿ ಸಂಸದ ಡಿ.ಕೆ.ಸುರೇಶ್ ಈ ಕಾರ್ಯಕ್ಕೆ ಪ್ರೋತ್ಸಾಹ ನೀಡಿದರು. ಶಾಸಕ ಬಾಲಕೃಷ್ಣರವರ ಸಹಕಾರ ಮರೆಯುವಂತಿಲ್ಲ. ಮಂಚನಬೆಲೆ ಜಲಾಶಯದ ಎಡ ಮತ್ತು ಬಲ ದಂಡೆ ಕಾಲುವೆಗಳನ್ನು ನವೀಕರಣಗೊಳಿಸುವ ಸಂಬಂಧ ಕೇಂದ್ರ ಸರ್ಕಾರಕ್ಕೂ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಹೇಳಿದರು.

ಮೈಸೂರು – ಬೆಂಗಳೂರು ಎಕ್ಸ್ ಪ್ರೆಸ್ ವೇನಲ್ಲಿ ಕಾಲುವೆ ಬಂದ್ ಮಾಡಿದ್ದು, ಅಲ್ಲಿ ಕಾಲುವೆ ಮುಂದುವರೆಸಿ ನೀರು ಹರಿಸುತ್ತೇವೆ. ಜಲಾಶಯದ ನೀರನ್ನು ಮಾಗಡಿ ಹಾಗೂ ಬಿಡದಿ ಪಟ್ಟಣಕ್ಕೂ ಕುಡಿಯುವ ಉದ್ದೇಶಕ್ಕೂ ಪೂರೈಕೆ ಮಾಡಲಾಗುತ್ತಿದೆ. ಮೊದಲು ಕುಡಿಯುವ ನೀರಿಗೆ ಆದ್ಯತೆ ನೀಡಬೇಕಿದ್ದು, ಆನಂತರ ಕಟ್ಟು ಪದ್ಧತಿಯಲ್ಲಿ ನಾಲೆಯಲ್ಲಿ ನೀರು ಹರಿಸಲಾಗುವುದು ಎಂದು ಇಕ್ಬಾಲ್ ಹುಸೇನ್ ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಕೆ.ರಾಜು, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಗಾಣಕಲ್ ನಟರಾಜ್, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್, ಕೆಎಂಎಫ್ ಮಾಜಿ ಅಧ್ಯಕ್ಷ ಪಿ.ನಾಗರಾಜು, ನಗರಸಭೆ ಉಪಾಧ್ಯಕ್ಷೆ ಆಯಿಷಾ ಬಾನು, ಸುಗ್ಗನಹಳ್ಳಿ ಗ್ರಾಪಂ ಅಧ್ಯಕ್ಷೆ ಅರ್ಪಿತಾ, ಉಪಾಧ್ಯಕ್ಷ ಚಿಕ್ಕಸ್ವಾಮಿ, ಕಾಂಗ್ರೆಸ್ ಮುಖಂಡರಾದ ದೊಡ್ಡವೀರಯ್ಯ, ರೈಡ್ ನಾಗರಾಜ್, ರವಿ, ಆಂಜನಪ್ಪ, ಪಾರ್ಥ, ವಸಂತ, ವಾಸು ಮತ್ತಿತರರು ಇದ್ದರು.

# ಪುನೀತ್ ಹೆಸರು ಎಂದೆಂದಿಗೂ ಅಜರಾಮರ



**ಶಿಡ್ಲಘಟ್ಟ :** ತೆರೆಹಿಂದೆ ಎಲೆಮರೆ ಕಾಯಿಯ ಹಾಗೆ ಸಮಾಜ ಮೆಚ್ಚುವಂತಹ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದ ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರ ಹೆಸರು ಎಂದೆಂದಿಗೂ ಅಜರಾಮರವಾಗಿ ಉಳಿಯುತ್ತದೆ ಎಂದು ಆರಕ್ಷಕ ವೃತ್ತ ನಿರೀಕ್ಷಕ ಎಂ.ಶ್ರೀನಿವಾಸ್ ತಿಳಿಸಿದರು.

ನಗರದ ಅಶೋಕ ರಸ್ತೆಯಲ್ಲಿ ಸ್ನೇಹ ಯುವಕರ ಸಂಘದ ವತಿಯಿಂದ ಡಾ.ಪುನೀತ್ ರಾಜಕುಮಾರ್ ವೃತ್ತದಲ್ಲಿ,ಪವರ್ ಸ್ಟಾರ್ ಡಾ. ಪುನೀತ್ ರಾಜಕುಮಾರ್ ರವರ 50ನೇ ಹುಟ್ಟುಪ್ರಯುಕ್ತ ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ನಂತರ ಅವರು ಮಾತನಾಡಿದರು.

ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಎಲ್ಲರನ್ನೂ ಅಗಲಿ 4 ವರ್ಷಗಳು ಕಳೆದರೂ ಅವರ ನೆನಪು ಮಾತ್ರ ದಿನ ದಿನವೂ ಹಸಿರಾಗೇ ಇದೆ ಎಲ್ಲರಿಂದಲೂ ಅಷ್ಟು ಪ್ರೀತಿಗಳಿಸಿದ್ದ ಪುನೀತ್ ರನ್ನು ಮರೆಯಲು ಎದೆಂದಿಗೂ ಸಾಧ್ಯವೇ ಇಲ್ಲ ಎಂದು ಹೇಳಿದರು.

ನಗರಸಭೆ ಸದಸ್ಯರಾದ ಅನಿಲ್ ಕುಮಾರ್ ಮಾತನಾಡಿ,ನಟ ಪುನೀತ್ ರಾಜ್‌ಕುಮಾರ್ ಅವರು ಬದುಕಿದ್ದಾಗಲೇ ಸಾಕಷ್ಟು ಒಳ್ಳೆಯ ಕೆಲಸ ಮಾಡಿ ಹೋದವರು ,ಪುನೀತ್ ರಾಜ್ ಕುಮಾರ್ ನಿಧನ ನಂತರ ಅವರು ಮಾಡಿದ್ದ ಸಮಾಜಮುಖಿ ಕೆಲಸಗಳು ಸಾಕಷ್ಟು ಸುದ್ದಿ ಮಾಡಿದವು ಇದನ್ನು ಪರಿಗಣಿಸಿ ಕರ್ನಾಟಕ ರತ್ನ ಲಭಿಸಿದೆ ವೈಯಕ್ತಿಕ ಆದರ್ಶ ಗುಣಗಳನ್ನು ನಾವು ಪಾಲಿಸಬೇಕು ಎಂದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಮಂಜುನಾಥ್, ಸ್ನೇಹ ಯುವಕರ ಸಂಘದ ಗ್ಯಾಸ್ ಭರತ್,ನವೀನ್, ಉದಯ್,ರಮೇಶ,ಟೈಲರ್ ಶ್ರೀನಿವಾಸ್,ಪ್ರಕಾಶ್, ಶೇಖರ್,ಮಂಜುನಾಥ್, ಅಶೋಕ್, ಚಂದು, ಕನ್ನಡಪರ ಸಂಘಟನೆಗಳ ಸುರೇಶ್, ಸುನೀಲ್,ರೈತ ಸಂಘದ ಪ್ರತೀಶ್ ಮತ್ತಿತರರು ಹಾಜರಿದ್ದರು.

# ಪರೀಕ್ಷೆ ಎಂಬ ಆತಂಕ ಹಾಗು ಒತ್ತಡಕ್ಕೆ ಒಳಗಾಗಬೇಡಿ



**ಶಿಡ್ಲಘಟ್ಟ :** ಮಕ್ಕಳು ಹೆಚ್ಚು ಅಂಕ ಗಳಿಸಬೇಕೆಂದು ವಿನಾಕಾರಣ ಪೋಷಕರು ಒತ್ತಡ ಹಾಕದೆ, ಅವರಿಗಾಗಿ ಮನೆಯಲ್ಲಿ ಶಾಂತ ರೀತಿ, ಉತ್ತೇಜನಕಾರಿ ಹಾಗು ವಿಶ್ವಾಸದ ವಾತಾವರಣವನ್ನು ಅವರಿಗೆ ಮೂಡಿಸಬೇಕು ಎಂದು ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ತಹಶಿಲ್ದಾರ್ ಬಿ.ಎನ್.ಸ್ವಾಮಿ ಮನವಿ ಮಾಡಿದರು.

ನಗರದ ತಾಲ್ಲೂಕು ಕಛೇರಿಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಆರಂಭವಾಗಲಿರುವ ಹಿನ್ನೆಲೆಯಲ್ಲಿ ನಡೆದ ವಿವಿಧ ಇಲಾಖೆಗಳ ಸಮನ್ವಯ ಸಭೆಯಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಯಾವುದೇ ಕಾರಣಕ್ಕು ಪರೀಕ್ಷೆ ಎಂಬ ಆತಂಕ ಹಾಗು ಒತ್ತಡಕ್ಕೆ ಒಳಗಾಗದೆ ಶಾಂತ ಚಿತ್ತದಿಂದ ಪರೀಕ್ಷೆ ಎದುರಿಸಬೇಕು ಎಂದು ಹೇಳಿದರು.

ಮಾರ್ಚ್–21 ರಿಂದ ಏಪ್ರಿಲ್–4 ರವರೆಗೆ ಪರೀಕ್ಷೆಗಳು ನಡೆಯಲಿದ್ದು, ಈ ಪರೀಕ್ಷೆಗಳ ಶಿಸ್ತುಬದ್ಧ ಆಯೋಜನೆಗಾಗಿ ಎಲ್ಲಾ ಸಿದ್ಧತೆಗಳನ್ನು ಮಾಡಲಾಗುತ್ತಿದೆ, ವಿದ್ಯಾರ್ಥಿಗಳು ಸಮಚಿತ್ತದಿಂದ ಪರೀಕ್ಷೆ ಬರೆಯಲು ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಬೇಕು ಎಂದು ಅವರು ಸಲಹೆ ನೀಡಿದರು. ತಾಲ್ಲೂಕಿನಲ್ಲಿ ಒಟ್ಟು 10 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು, 1314 ಬಾಲಕರು ಮತ್ತು 1353 ಬಾಲಕಿಯರು ಸೇರಿ 2667 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಈ ಕೇಂದ್ರಗಳಲ್ಲಿ 110 ಕೊಠಡಿಗಳಲ್ಲಿ ಪರೀಕ್ಷೆ ನಡೆಯಲಿದ್ದು, ಪ್ರತಿ ಕೊಠಡಿಗೆ ಒಬ್ಬರಂತೆ 110 ಮೇಲ್ವಿಚಾರಕರನ್ನು ನೇಮಿಸಲಾಗಿದೆ,ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಬಳಕೆ ನಿಷೇಧಿಸಲಾಗಿದೆ ,ಮೇಲ್ವಿಚಾರಕರ ಮೊಬೈಲ್‌ಗಳೂ ಸೇರಿದಂತೆ ಎಲ್ಲರ ಮೊಬೈಲ್‌ಗಳನ್ನು ಸಂಗ್ರಹಿಸಲು 10 ಮಂದಿ ಮೊಬೈಲ್ ಸ್ವಾಧೀನ ಅಧಿಕಾರಿಗಳನ್ನು ನಿಯೋಜಿಸಲಾಗಿದೆ, ಇದರೊಂದಿಗೆ ಕಸ್ಟೋಡಿಯನ್, ಸ್ಥಳೀಯ ಜಾಗೃತ ದಳ, ವಿಚಕ್ಷಣ ದಳ ಸಿಬ್ಬಂದಿಗಳನ್ನು ಈಗಾಗಲೇ ನೇಮಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರ ಕುಮಾರ್, ಆರೋಗ್ಯ ಇಲಾಖೆ, ಖಜಾನೆ ಇಲಾಖೆ ಬೆಸ್ಕಾಂ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಬಿಬಿಎಂಪಿ ವ್ಯಾಪ್ತಿಯಲ್ಲಿ ಕಸದ ಸಮಸ್ಯೆ ನಿವಾರಣೆ: ತುಷಾರ್ ಗಿರಿನಾಥ್

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಉಲ್ಬಣವಾಗಿದ್ದ ಕಸದ ಸಮಸ್ಯೆಯನ್ನು ನಿವಾರಣೆ ಮಾಡಲಾಗಿದೆ ಎಂದು ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ರವರು ತಿಳಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳ ಕುರಿತು ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಮಿಟ್ಟಗಾನಹಳ್ಳಿ ಹಾಗೂ ಕಣ್ಣೂರು ಭೂಭರ್ತಿ ಪ್ರದೇಶದದಲ್ಲಿ ಕಸ ವಿಲೇವಾರಿ ಮಾಡುವ ವಿಚಾರವಾಗಿ ಸ್ಥಳೀಯರಿಂದ ಆಗಿದ್ದ ಸಮಸ್ಯೆಯನ್ನು ಬಹುತೇಕ ಬಗೆಹರಿಸಲಾಗಿದ್ದು, ಎಂದಿನಂತೆ ತ್ಯಾಜ್ಯ ವಿಲೇವಾರಿ ಕಾರ್ಯವನ್ನು ನಡೆಸಲಾಗುತ್ತಿದೆ ಎಂದು ಹೇಳಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ತ್ಯಾಜ್ಯಕ್ಕೆ ಸಂಬಂಧಿಸಿದಂತೆ ಮಿಶ್ರ ತ್ಯಾಜ್ಯವನ್ನು ಭೂಭರ್ತಿ ಘಟಕ, ಹಸಿ ತ್ಯಾಜ್ಯವನ್ನು ಸಂಸ್ಕರಣಾ ಘಟಕಗಳು ಹಾಗೂ ಒಣ ತ್ಯಾಜ್ಯವನ್ನು ಒಣ ತ್ಯಾಜ್ಯ ಸಂಗ್ರಹಣಾ ಘಟಕಗಳಿಗೆ ಕಳುಹಿಸಲಾಗುತ್ತಿದೆ ಎಂದು ತಿಳಿಸಿದರು.

ಘನತ್ಯಾಜ್ಯಕ್ಕಾಗಿ ಹೊಸ ಯೋಜನೆಯಂತೆ ಟೆಂಡರ್ ಕರೆಯಲಾಗಿತ್ತು. ಆ ಟೆಂಡರ್ ನಲ್ಲಿ ಭಾಗವಹಿಸುವಿಕೆ ಸಂಖ್ಯೆ ಕಡಿಮೆಯಿದ್ದ ಪರಿಣಾಮ, ಟೆಂಡರ್ ನಲ್ಲಿ ಭಾಗವಹಿಸದಿರಲು ಕಾರಣಗಳೇನು ಎಂಬುದನ್ನು ಗುರುತಿಸಲಾಗಿದೆ. ಇದೀಗ ಎಲ್ಲಾ ಅಂಶಗಳನ್ನು ಸೇರ್ಪಡೆ ಮಾಡಿ ಪುನರ್ ಟೆಂಡರ್ ಕರೆಯಲಾಗುತ್ತಿದೆ. ಅಲ್ಲದೆ ಘನತ್ಯಾಜ್ಯ ಸಮಗ್ರ ವಿಲೇವಾರಿಗಾಗಿ ಹೊಸದಾಗಿ ಜಾಗಗಳನ್ನು ಕೂಡಾ ಗುರುತಿಸಲಾಗಿದೆ ಎಂದರು.

ಮಿಟ್ಟಗಾನಹಳ್ಳಿ, ಕಣ್ಣೂರಿನ ಬಳಿ ಸ್ಥಳೀಯರು ಹಾಗೂ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆದಾರರ ನಡುವೆ ಕೆಲ ಭಿನ್ನಾಭಿಪ್ರಾಯಗಳಿಂದ ಕಸದ ಸಮಸ್ಯೆ ಉಂಟಾಗಿದ್ದು, ಬಹುತೇಕ ಸಮಸ್ಯೆಯನ್ನು ಬಗೆಹರಿಸಲಾಗಿದೆ. 500 ಕೋಟಿ ರೂ. ವೆಚ್ಚದಲ್ಲಿ ಗ್ರಾಮೀಣಾಭಿವೃದ್ಧಿ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಅಭಿವೃದ್ಧಿಗಾಗಿ ವ್ಯಯಿಸಬೇಕಿರುವ ಹಣದ ವಿಚಾರವಾಗಿ ಟೆಂಡರ್ ಮಾಡಿ ಕಾರ್ಯಾದೇಶ ನೀಡಿ ಶೀಘ್ರ ಕೆಲಸ ಪ್ರಾರಂಭಿಸಲಾಗುವುದು ಎಂದು ಹೇಳಿದರು. ಮಿಟ್ಟಗಾನಹಳ್ಳಿ, ಕಣ್ಣೂರಿನ ಬಳಿ ರಾತ್ರಿ ವೇಳೆ ಕಸ ವಿಲೇವಾರಿ ಮಾಡಲಾಗುತ್ತಿದ್ದು, ಹಗಲಿನಲ್ಲಿಯೂ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಇರುವ ಸಣ್ಣ–ಪುಟ್ಟ ಸಮಸ್ಯೆಗಳನ್ನು ಬಗೆಹರಿಸುವ ಸಲುವಾಗಿ ಜಿಲ್ಲಾ ಪಂಚಾಯ್ತಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಯು ಕೂಡಾ ಸ್ಥಳಕ್ಕೆ ಭೇಟಿ ನೀಡಿ ಇರುವ ಸಮಸ್ಯೆಗಳನ್ನು ಬಗೆಹರಿಸಲಿದ್ದಾರೆ ಎಂದು ಹೇಳಿದರು.

**ಲಿಚೆಟ್ ಸಂಸ್ಕರಣೆಗೆ ಕ್ರಮ:** ಮಿಟ್ಟಗಾನಹಳ್ಳಿ ಭೂಭರ್ತಿ ಘಟಕದಲ್ಲಿ 275 ಕೋಟಿ ಲೀಟರ್ ಲಿಚೆಟ್ ಸಂಗ್ರಹವಾಗಿದ್ದು, ಅದನ್ನು ಸಂಸ್ಕರಿಸಲು ಟೆಂಡರ್ ಕರೆದು 3 ರಿಂದ 4 ವರ್ಷಗಳಲ್ಲಿ ಸಮಸ್ಯೆ ಬಗೆಹರಿಸಲು ಕ್ರಮ ವಹಿಸಲಾಗುತ್ತಿದೆ. ಸದ್ಯ 100 ಕೆ.ಎಲ್.ಡಿ ಹಾಗೂ 25 ಕೆ.ಎಲ್.ಡಿ ಸಂಸ್ಕರಣ ಘಟಕಗಳಿದ್ದು, ಹೊಸದಾಗಿ 2000 ಕೆ.ಎಲ್.ಡಿ ಘಟಕವನ್ನು ಸ್ಥಾಪಿಸಲಾಗುವುದು. ಅದರ ಮೂಲಕ ಲಿಚೆಟ್ ಅನ್ನು ಸಂಸ್ಕರಿಸಲಾಗುವುದು. ಲಿಚೆಟ್ ಸಂಸ್ಕರಣೆಗಾಗಿ ಸರಾಸರಿ 474 ಕೋಟಿ ರೂ. ವ್ಯಯಿಸಲಾಗುತ್ತಿದೆ ಎಂದು ತಿಳಿಸಿದರು.

**ಸರ್ಕಾರಿ ಕಟ್ಟಡಗಳಿಗೆ ಓಟಿಎಸ್ ಸೌಲಭ್ಯ:** ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಸರ್ಕಾರದ ಕಟ್ಟಡಗಳು ಹಾಗೂ ಸರ್ಕಾರದ ಅಂಗ ಸಂಸ್ಥೆ (ಕಖಗ)ಗಳಿಗೆ 31ನೇ ಮಾರ್ಚ್ 2025 ರವರೆಗೆ ಒಂದು ಬಾರಿಯ ಪರಿಹಾರ ಯೋಜನೆ (ಓಟಿಎಸ್) ಅನ್ನು ಜಾರಿಗೆ ತರಲಾಗಿದೆ. ಈ ಸಂಬಂಧ ಎಲ್ಲಾ ಸರ್ಕಾರಿ ಕಟ್ಟಡಗಳು ಹಾಗೂ ಸರ್ಕಾರಿ ಅಂಗ ಸಂಸ್ಥೆಗಳು ಓಟಿಎಸ್ ಅಡಿಯಲ್ಲಿ ಆಸ್ತಿ ತೆರಿಗೆ ಪರಿಷ್ಕರಣೆ ಅನುಸಾರ ಪಾವತಿಸಬಹುದಾಗಿದೆ.

2019–20ನೇ ಸಾಲಿನಿಂದ ಬಾಕಿ ಇದ್ದಲ್ಲಿ ಶೂನ್ಯ ಬಡ್ಡಿ ಹಾಗೂ 100 ರೂ. ದಂಡ ಶುಲ್ಕ ಪಾವತಿಸುವುದರೊಂದಿಗೆ ಓಟಿಎಸ್ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ. ಎಲ್ಲಾ ಸರ್ಕಾರಿ ಕಟ್ಟಡಗಳು ಹಾಗೂ ಸರ್ಕಾರಿ ಅಂಗ ಸಂಸ್ಥೆಗಳು ಇದರ ಸದುಪಯೋಗವನ್ನು ಪಡೆದುಕೊಂಡು ಮಾರ್ಚ್ 31ರೊಳಗಾಗಿ ಬಾಕಿ ಆಸ್ತಿ ತೆರಿಗೆಯನ್ನು ಪಾವತಿಸಲು ಕೋರಿದೆ. ಓಟಿಎಸ್ ಸೌಲಭ್ಯ ಪಡೆಯದವರು ಏಪ್ರಿಲ್ 2025 ರಿಂದ ಆಸ್ತಿ ತೆರಿಗೆಯು ದುಪ್ಪಟು ಪಾವತಿಸಬೇಕಾಗಿರುತ್ತದೆ.

**ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಿ:** ಮಾನ್ಯ ಉಚ್ಚನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:38401/2014 ರ ದೈನಂದಿನ ನಿರ್ದೇಶನದಂತೆ, ಬಿಬಿಎಂಪಿ ವ್ಯಾಪ್ತಿಯಲ್ಲಿ ಒತ್ತುವರಿಯಾಗಿರುವಂತಹ ಕೆರೆಗಳ ಒತ್ತುವರಿಯನ್ನು ತೆರವುಗೊಳಿಸುವ ಕುರಿತು ಪಾಲಿಕೆ ಕೇಂದ್ರ ಕಛೇರಿಯ ನೌಕರರ ಭವನದ ಸಂಭಾಗಣದಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ 183 ಕೆರಗಳು ಬರಲಿದ್ದು, ಈ ಪೈಕಿ ಕಂದಾಯ ಇಲಾಖೆಯ ಭೂಮಾಪಕರು 168 ಕೆರೆಗಳಲ್ಲಿ ಸಮೀಕ್ಷೆ ಮಾಡಿರುತ್ತಾರೆ. ಈ ಪೈಕಿ 28 ಕೆರೆಗಳಲ್ಲಿ ಯಾವುದೇ ಒತ್ತುವರಿಯಾಗಿರುವುದಿಲ್ಲ ಎಂದು ವರದಿ ನೀಡಿದ್ದು, 26 ಕೆರೆಗಳಲ್ಲಿ ಸರ್ಕಾರಿ ಒತ್ತುವರಿಗಳಾಗಿರುವ ಕುರಿತು ಮಾಹಿತಿ ನೀಡಿರುತ್ತಾರೆ.

ಪಾಲಿಕೆ ವ್ಯಾಪ್ತಿಯಲ್ಲಿ ಒತ್ತುವರಿಯಾಗಿರುವ ಉಳಿದ 114 ಕೆರೆಗಳಿಗೆ ಸಂಬಂಧಿಸಿದಂತೆ ಆಯಾ ವಲಯ ವ್ಯಾಪ್ತಿಯ ಕಾರ್ಯಪಾಲಕ ಅಭಿಯಂತರರಿಗೆ ಜವಾಬ್ದಾರಿ ನೀಡಲಾಗಿದೆ. 114 ಕೆರೆಗಳ ಪೈಕಿ ವಲಯಗಳ ಕಾರ್ಯಪಾಲಕ ಅಧಿಕಾರಿಗಳಿಗೆ ಆಯಾ ವಲಯವಾರು ಕೆರೆಗಳ ನಕ್ಷೆ ನೀಡಲಾಗಿದೆ. ಅದರಂತೆ ಕೆರೆಗಳನ್ನು ಒತ್ತುವರಿ ಮಾಡಿರುವವರಿಗೆ ನೋಟೀಸ್ ಜಾರಿ ಮಾಡಿ, ತೆರವು ಕಾರ್ಯಾಚರಣೆ ನಡೆಸಲು ಸೂಚನೆ ನೀಡಿದರು.ಈ ವೇಳೆ ಅರಣ್ಯ, ಪರಿಸರ ಹಾಗೂ ಹವಾಮಾನ ವೈಪರೀತ್ಯ ವಿಭಾಗದ ವಿಶೇಷ ಆಯುಕ್ತರಾದ ಪ್ರೀತಿ ಗೆಹ್ಲೋಟ್, ವಲಯ ಆಯುಕ್ತರಾದ ಸತೀಶ್, ದಿಗ್ವಿಜಯ್ ಬೋಡ್ಕೆ, ಕೆರೆಗಳ ವಿಭಾಗದ ಮುಖ್ಯ ಅಭಿಯಂತರರಾದ ವಿಜಯ್ ಕುಮಾರ್ ಹರಿದಾಸ್, ಕಾರ್ಯಪಾಲಕ ಅಭಿಯಂತರು, ಕಂದಾಯ ವಿಭಾಗದ ಅಧಿಕಾರಿಗಳು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# ಕನ್ನಡ ಬೋಧಿಸದ ಕೇಂದ್ರ ಪಠ್ಯಕ್ರಮ ಇಲಾಖೆಗಳ ವಿರುದ್ಧ ಕ್ರಮಕ್ಕೆ ಮುಂದಾಗಿ

**ಬೆಂಗಳೂರು:** ನಗರದಲ್ಲಿಯೇ ಹೆಚ್ಚು ಖಾಸಗಿ ಕೇಂದ್ರ ಪಠ್ಯಕ್ರಮದ ಶಾಲೆಗಳು ಕನ್ನಡ ಭಾಷಾ ಬೋಧನೆಯನ್ನು ಕೈಗೊಳ್ಳದಿದ್ದರೂ ಶಿಕ್ಷಣ ಇಲಾಖೆ ಈ ಶಾಲೆಗಳ ವಿರುದ್ಧ ಯಾವುದೇ ಕ್ರಮಕ್ಕೆ ಮುಂದಾಗದಿರುವುದು ವಿಷಾದನೀಯ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಹೇಳಿದ್ದಾರೆ. ಈ ಕುರಿತಂತೆ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಿಗೆ ಪತ್ರ ಬರೆದಿರುವ ಅವರು, ಕನ್ನಡ ಅಭಿವೃದ್ಧಿ ಪ್ರಾಧಿಕಾರವೇ ಅಂತಹ ಕೆಲವು ಶಾಲೆಗಳ ಪಟ್ಟಿಯನ್ನು ಒದಗಿಸಿದೆ. ಇಲಾಖಾಧಿಕಾರಿಗಳು ತನಿಖೆ ಮಾಡಿದರೆ ಸತ್ಯ ತಿಳಿಯುತ್ತದೆ ಎಂದು ಹೇಳಿದ್ದಾರೆ. ಕಾಯ್ದೆ ಉಲ್ಲಂಘಿಸುವ ಶಾಲೆಗಳ ವಿರುದ್ಧ ಯಾವುದೇ ಕ್ರಮಕ್ಕೆ ಮುಂದಾಗದಿರುವ ಕನ್ನಡ ಭಾಷೆಯ ಬಗ್ಗೆ ಇಲಾಖೆ ತೋರುವ ಅಗೌರವವಷ್ಟೇ ಅಲ್ಲ ನೆಲದ ಕಾನೂನಿನ ಉಲ್ಲಂಘನೆಯೂ ಆಗಿರುತ್ತದೆ. ಈ ಬಗ್ಗೆ ಇಲಾಖೆ ಎಚ್ಚೆತ್ತುಕೊಳ್ಳಬೇಕಿದೆ ಎಂದಿದ್ದಾರೆ. ಶಿಕ್ಷಣ ಇಲಾಖೆಯ ಸಚಿವರ ಅಧ್ಯಕ್ಷತೆಯಲ್ಲಿ 2020ರಲ್ಲಿ ರಚನೆಯಾಗಿರುವ ಸಮಿತಿಯ ಸಭೆಯನ್ನು ಕೂಡಲೇ ಕರೆಯಬೇಕೆಂದು ಆಗ್ರಹಿಸಿದ್ದಾರೆ.

# ಕರ್ನಾಟಕ ಹ್ಯೂಮನ್ ರಿಸೋರ್ಸ್ ಸರ್ವೀಸ್ ಪ್ರೊವೈಡರ್ಸ್ ಕಾಂಟ್ರಾಕ್ಟರ್ಸ್ ಅಸೋಸಿಯೇಷನ್ ಅಸ್ತಿತ್ವಕ್ಕೆ




**ಬೆಂಗಳೂರು:** ರಾಜ್ಯ, ಕೇಂದ್ರ ಸರ್ಕಾರಿ, ಸಾರ್ವಜನಿಕ, ಅರೆ ಸಾರ್ವಜನಿಕ, ಐಟಿ,ಬಿಟಿ. ಎಂ.ಎನ್.ಸಿ, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಒಳಗೊಂಡಂತೆ ಖಾಸಗಿ ವಲಯದ ಎಲ್ಲ ಉದ್ಯಮಗಳಿಗೆ ಎಲ್ಲಾ ವೃಂದದ ಮಾನವ ಸಂಪನ್ಮೂಲ ಸೇವೆಯನ್ನು ಹೊರಗುತ್ತಿಗೆ ಮುಖಾಂತರ ಒದಗಿಸುತ್ತಿರುವ ವಲಯದಲ್ಲಿ ಇದೀಗ "ಕರ್ನಾಟಕ ಮಾನವ ಸಂಪನ್ಮೂಲ ಸೇವೆ ಒದಗಿಸುವ ಗುತ್ತಿಗೆದಾರರ ರಾಜ್ಯ ಮಟ್ಟದ ಸಂಘ "ಅಸ್ಥಿತ್ವಕ್ಕೆ ಬಂದಿದೆ.

ವ್ಯವಹಾರಿಕವಾಗಿ ಉದ್ಯಮ ಬೆಳವಣಿಗೆ ಅಭಿರುದ್ಧಿ / ಹಿತಾಸಕ್ತಿ ವಿವಿಧ ಧ್ಯೇಯೋದ್ದೇಶ /ಬೇಡಿಕೆಗಳನ್ನು ಈಡೇರಿಸಿಕೊಳ್ಳಲು ಮತ್ತು ಏಜೆನ್ಸಿ ಮುಖಾಂತರ ಕೆಲಸ ನಿರ್ವಹಿಸುತಿರುವ ಹೊರಗುತ್ತಿಗೆ ಮತ್ತು ನೇರ ಉದ್ಯೋಗಿಗಳ ವೆಲ್ಫೇರ್ ಸೇರಿದಂತೆ ರಾಜ್ಯಕ್ಕೆ ಸೇರಿದ ಅಸಂಘಟಿತ ಗುತ್ತಿಗೆದಾರ, ಏಜೆನ್ಸಿ ಸಂಸ್ಥೆಗಳ, ಮಾಲೀಕರುಗಳನ್ನು ಒಟ್ಟುಗೂಡಿಸುವ ಉದ್ದೇಶವನ್ನು ಸಂಘ ಹೊಂದಿದೆ ಎಂದು ತಿಳಿಸಿದರು.

ರಾಜ್ಯ, ಹೊರರಾಜ್ಯ, ವಿದೇಶಗಳು ಸೇರಿದಂತೆ ಈ ಕ್ಷೇತ್ರದಲ್ಲಿ 50 ಲಕ್ಷಕ್ಕೂ ಅಧಿಕ ಜನರಿಗೆ ಹೊರಗುತ್ತಿಗೆ ಮೂಲಕ ಲಕ್ಷಾಂತರ ಜನರಿಗೆ ನೇರ ಉದ್ಯೋಗ ಒದಗಿಸಿ ಕೋಟ್ಯಾಂತರ ಕುಟುಂಬಗಳಿಗೆ ಆರ್ಥಿಕವಾಗಿ ನೆರವಾಗಿದ್ದು, ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸರ್ಕಾರಕ್ಕೆ ಪರೋಕ್ಷವಾಗಿ ಬೆಂಬಲ ನೀಡುತ್ತಿದೆ. ಹಾಗು ರಾಜ್ಯ ಹೊರ ರಾಜ್ಯ ಮತ್ತು ವಿದೇಶಗಳಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುತ್ತಿರುವ ಇಂತಹ ಮಹತ್ವದ ಸಂಸ್ಥೆಗೆ ಮೊದಲ ಅಧ್ಯಕ್ಷರಾಗಿ ಮಂಡ್ಯ ಮೂಲದ ಬೆಂಗಳೂರಿನ ಮಹಾಲಿಂಗಪ್ಪ ಮಹಾಲಿಂಗೇಗೌಡ ಮುದ್ದನಘಟ್ಟ ಆಯ್ಕೆಯಾಗಿದ್ದಾರೆ.

ನೂತನ ಸಂಘದಲ್ಲಿ ಉಪಾಧ್ಯಕ್ಷರಾಗಿ ಶಿವಮೊಗ್ಗದ ಸುರೇಶ್ ಕೆ ಬಾಳೆಗುಂಡಿ,ಮೈಸೂರಿನ ಎಂ ನಾಗರಾಜು ಮತ್ತು ಪ್ರಧಾನ ಕಾರ್ಯದರ್ಶಿಯಾಗಿ ಬೆಂಗಳೂರಿನ ರಾಘವೇಂದ್ರ ರೆಡ್ಡಿ ಅವರನ್ನು ಆಯ್ಕೆ ಮಾಡಲಾಗಿದೆ.

ಖಜಾಂಚಿಯಾಗಿ ದಾವಣಗೆರೆಯ ಬಿ ಎಸ್ ರಾಜಶೇಖರ್, ಜಂಟಿ ಕಾರ್ಯದರ್ಶಿಗಳಾಗಿ ಗುಲ್ಬರ್ಗದ ಯಲ್ಲಪ್ಪ ಬಿ ಕಂದಕೂರ, ಬೆಂಗಳೂರಿನ ದಯಾನಂದ ಟಿ ಆರ್, ಸಂಘಟನಾ ಕಾರ್ಯದರ್ಶಿಗಳಾಗಿ ಬೆಂಗಳೂರಿನ ಶಿವಕುಮಾರ್, ರಾಜಪ್ಪ ಟಿ, ಗೋಪಾಲ ಡಿ, ಬಾಗಲಕೋಟೆಯ ಗಣಪತಿ ಬಿ ಹೋಟಾಕರ್ ಅವರುಗಳು ಆಯ್ಕೆಯಾಗಿದ್ದಾರೆ.

ಕಾರ್ಯಕಾರಿ ಸಮಿತಿ ಸದಸ್ಯರಾಗಿ ಬೆಂಗಳೂರಿನ ಅಶ್ವಿನ್ ಕುಮಾರ್ ಎ, ಕೆ ಭದ್ರೇಗೌಡ, ಗಂಗಾಧರ ಟಿ ಎನ್, ನಾಗಪ್ಪ ,ಪದ್ಮನಾಭ ರೆಡ್ಡಿ, ರವಿ ಶಂಕರ್ ಎಸ್, ವಿಜಯಪುರದ ಭುಟಾಲೆಪ್ಪ ಮನ್ನೂರ, ಧಾರವಾಡ ದ ನಾಗಪ್ಪ ಗುರುಬಸಪ್ಪ ಬಿದರಿ ,ಚಿತ್ರದುರ್ಗದ ಚೇತನ್ ಕುಮಾರ್ ಆರ್, ಶಿವಮೊಗ್ಗದ ಗಿರಿಜ, ಮೈಸೂರಿನ ಶಿವಣ್ಣ, ಶಂಕರೇಗೌಡ ಕೆ ಎಸ್,ಎಂ ಶಶಿಕಾಂತ ರಾಮನಗರದ ಪುಟ್ಟ ಸ್ವಾಮಿ ಹೆಚ್ ಟಿ ಆಯ್ಕೆಯಾಗಿದ್ದಾರೆ

# ವಕ್ಫ್ ಬೋರ್ಡ್ ಆಸ್ತಿಗಳ ಸಂರಕ್ಷಣೆಗೆ ಆದ್ಯತೆ



**ಬೆಂಗಳೂರು:** ವಕ್ಫ್ ಬೋರ್ಡ್ ಆಸ್ತಿಯನ್ನು ಅಲ್ಪ ಸಂಖ್ಯಾತ ಮುಸ್ಲಿಂ ಸಮುದಾಯದ ಶೈಕ್ಷಣಿಕ ಅಭಿವೃದ್ಧಿಗಳಿಗೆ ಬಳಸಿಕೊಳ್ಳಲಾಗುವುದು ಎಂದು ನೂತನ ವಕ್ಫ್ ಬೋರ್ಡ್ ಅಧ್ಯಕ್ಷ ಗುಲ್ಬರ್ಗದ ಹಜರತ್ ಖ್ವಾಜಾ ಬಂದ ನವಾಜ್ ದರ್ಗಾದ ಸೈಯದ್ ಮಹಮ್ಮದ್ ಅಲಿ ಹುಸೇನಿ ತಿಳಿಸಿದರು.

ಬೆಂಗಳೂರಿನಲ್ಲಿ ತಮ್ಮನ್ನು ಬೇಟಿಯಾದ ಸುದ್ದಿಗಾರರ ಜತೆ ಮಾತನಾಡಿದ ಅವರು, ಪ್ರಾಥಮಿಕ ಶಿಕ್ಷಣದಿಂದ ಕೌಶಲ್ಯಯುತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವುದು ನಮ್ಮ ಪ್ರಮುಖ ಗುರಿಯಾಗಿದೆ,ವಕ್ಫ್ ಬೋರ್ಡ್ ಆಸ್ತಿಯನ್ನು ಸಂರಕ್ಷಿಸುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ,ರಾಜ್ಯದ ಅನೇಕ ವಕ್ಫ್ ಬೋರ್ಡ್ ಆಸ್ತಿಗಳನ್ನು ಬೇರೆಯವರ ಪಾಲಾಗಿದೆ.ಯಾರೇ ವಕ್ಫ್ ಆಸ್ತಿಯನ್ನು ಕಬಳಿಸಿದ್ದರೆ ಕಾನೂನು ವ್ಯಾಪ್ತಿಯಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಬೇಕು,ದಾಖಲೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ಕಳೆದ ಎರಡು ದಿನಗಳ ಹಿಂದೆ ವಕ್ಫ್ ಬೋರ್ಡ್ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಮಹಮ್ಮದ್ ಅಲಿ ಹುಸೇನಿ ಕಲಬುರಗಿಯ ಹಜರತ್ ಖ್ವಾಜಾ ಬಂದೇನವಾಜ್ ದರ್ಗಾದ ವ್ಯಾಪ್ತಿಯ ಕಾಲೇಜುಗಳ ಉಪ ಕುಲಪತಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

# ಎನ್‌ಎಸ್‌ಎಸ್ ಅತ್ಯುತ್ತಮ ಘಟಕ ಪ್ರಶಸ್ತಿ ಪ್ರಧಾನ

**ಶಿಡ್ಲಘಟ್ಟ** : 2022–23 ನೇ ಸಾಲಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ(ಎನ್.ಎಸ್.ಎಸ್) ಮೂಲಕ ಸಲ್ಲಿಸಿರುವ ಅನುಪಮ ಸೇವೆಯನ್ನು ಪರಿಗಣಿಸಿ ಕರ್ನಾಟಕ ರಾಜ್ಯ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ನೀಡುವ ಎನ್.ಎಸ್.ಎಸ್. ರಾಜ್ಯ ಮಟ್ಟದ ಅತ್ಯುತ್ತಮ ಘಟಕ ಪ್ರಶಸ್ತಿಗೆ ಯಲಹಂಕ ಉಪನಗರದ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜು ಮತ್ತು ರಾಜ್ಯದ ಅತ್ಯುತ್ತಮ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಪ್ರಶಸ್ತಿಗೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಕೇಶವಾರ ಗ್ರಾಮದ ಮಂಜುಳ ಮತ್ತು ಶ್ರೀನಿವಾಸ್ ಅವರ ಪುತ್ರ, ಯಲಹಂಕ ಉಪನಗರದ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ನವೀನ್ ಕುಮಾರ್. ಕೆ.ಎಸ್‌ಗೆ ಪ್ರಧಾನ ಮಾಡಲಾಯಿತು.

ಅತ್ಯುತ್ತಮ ಘಟಕ ಪ್ರಶಸ್ತಿಯುನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್.ಎನ್.ವೆಂಕಟೇಶ್ ರವರು ಸ್ವೀಕರಿಸಿದರು, ಬೆಂಗಳೂರಿನ ರಾಜಭವನದಲ್ಲಿ ನಡೆದ ಪ್ರತಿಷ್ಠಿತ ಸಮಾರಂಭದಲ್ಲಿ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಪ್ರಶಸ್ತಿಗಳನ್ನು ಪ್ರದಾನ ಮಾಡಿದ್ದಾರೆ.

ಪ್ರಶಸ್ತಿ ಸ್ವೀಕರಿಸಿದ ನಂತರ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್.ಎನ್.ವೆಂಕಟೇಶ್ ಅವರು ಈ ಸಾಧನೆಯ ಬಗ್ಗೆ ಅಪಾರ ಹೆಮ್ಮೆ ವ್ಯಕ್ತಪಡಿಸಿ, ನಮ್ಮ ಎನ್‌ಎಸ್‌ಎಸ್ ಘಟಕದ ಸಾಧನೆ ಅತ್ಯಂತ ಶ್ಲಾಘನೀಯವಾಗಿದೆ,ಈ ಯಶಸ್ಸಿನ ಸಂಪೂರ್ಣ ಶ್ರೇಯಸ್ಸು ಪ್ರೊ.ನವೀನ್ ಮತ್ತು ಅವರ ತಂಡಕ್ಕೆ ಸಲ್ಲುತ್ತದೆ ನವೀನ್ ಅವರ ಕಠಿಣ ಪರಿಶ್ರಮ ಮತ್ತು ನಿಷ್ಠೆಯನ್ನು ನಾವು ಹೃತ್ಪೂರ್ವಕವಾಗಿ ಮೆಚ್ಚುತ್ತೇವೆ ನಮ್ಮ ಸಂಸ್ಥೆಯಲ್ಲಿ ಇಂತಹ ಪ್ರತಿಬದ್ಧತೆಯೊಂದಿಗೆ ಕಾರ್ಯನಿರ್ವಹಿಸುವ ಅಧ್ಯಾಪಕರು ಇದ್ದಾರೆಂಬುದು ನಮಗೆ ಹೆಮ್ಮೆ ಎಂದು ಹೇಳಿದರು.

ಕಾರ್ಯಕ್ರಮಾಧಿಕಾರಿ ಪ್ರೊ.ನವೀನ್ ಕುಮಾರ್.ಕೆ.ಎಸ್. ಮಾತನಾಡಿ ಈ ಸಾಧನೆಯು ನಮ್ಮ ನಿಷ್ಠಾವಂತ ಎನ್. ಎಸ್.ಎಸ್. ಸ್ವಯಂಸೇವಕರ ಒಗ್ಗೂಡಿದ ಪ್ರಯತ್ನ ಮತ್ತು ಪ್ರಾಂಶುಪಾಲರ ಮೇಲುಸ್ತುವಾರಿ, ಸಂಸ್ಥೆಯ ಆಡಳಿತ ಮಂಡಳಿ, ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಬೆಂಬಲದ ಫಲವಾಗಿದೆ. ನಮ್ಮನ್ನು ಪ್ರೇರೇಪಿಸಿದ ಎಲ್ಲಾ ಮಾರ್ಗದರ್ಶಕರ ಉತ್ತೇಜನಕ್ಕೆ ನಾನು ಕೃತಜ್ಞನಾಗಿದ್ದೇನೆ, ನಾವು ಇನ್ನಷ್ಟು ಸಮರ್ಪಣಾ ಭಾವನೆ ಹಾಗೂ ಉತ್ಸಾಹದೊಂದಿಗೆ ಸೇವೆಸಲ್ಲಿಸಲು ಪ್ರೇರಿತರಾಗುತ್ತೇವೆ ಎಂದರು.



ನಾವು ಎನ್.ಎಸ್.ಎಸ್.ನ ಮೌಲ್ಯಗಳನ್ನು ಅಳವಡಿಸಿಕೊಂಡು, ಸಮಾಜಕ್ಕೆ ಅರ್ಥಪೂರ್ಣವಾಗಿ ಕೊಡುಗೆ ನೀಡುವ ನಮ್ಮ ಪ್ರಯತ್ನವನ್ನು ಮುಂದುವರಿಸುತ್ತೇವೆ ಎಂದು ಹೇಳಿದರು.

ಪ್ರಾಂಶುಪಾಲ ಡಾ.ಎಸ್.ಎನ್.ವೆಂಕಟೇಶ್ ಹಾಗೂ ಕಾರ್ಯಕ್ರಮಾಧಿಕಾರಿ ನವೀನ್ ಕುಮಾರ್.ಕೆ.ಎಸ್ ರವರ ಈ ಸಾಧನೆಗೆ ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಅಧ್ಯಕ್ಷರಾದ ಶ್ರೀ.ಎನ್.ಆರ್ ಪಂಡಿತಾರಾಧ್ಯ ರವರು, ಗೌರವ ಪ್ರಧಾನ ಕಾರ್ಯದರ್ಶಿಗಳಾದ ನಾಡೋಜ ಡಾ. ವೂಡೇ ಪಿ. ಕೃಷ್ಣ ರವರು, ಎನ್‌ಎಸ್‌ಎಸ್ ಪ್ರಾಂತೀಯ ನಿರ್ದೇಶಕ ಶ್ರೀ ಡಿ ಕಾರ್ತಿಕೇಯನ್ ರವರು, ರಾಜ್ಯ ಎನ್‌ಎಸ್‌ಎಸ್ ಅಧಿಕಾರಿ ಪ್ರತಾಪ್ ಲಿಂಗಯ್ಯ ರವರು, ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಲಿಂಗರಾಜ ಗಾಂಧಿ ರವರು, ಸಂಯೋಜನಾಧಿಕಾರಿ ಡಾ. ಹೆಚ್. ಜಿ. ಗೋವಿಂದೇಗೌಡ ರವರು, ಕಾಲೇಜು ಆಡಳಿತ ಮಂಡಳಿ, ಬೋಧಕ ಬೋಧಕೇತರ ಸಿಬ್ಬಂದಿಗಳು, ಎನ್‌ಎಸ್‌ಎಸ್ ಸ್ವಯಂಸೇವಕರು, ವಿದ್ಯಾರ್ಥಿಗಳು, ಪೋಷಕರು ಮತ್ತು ಕುಟುಂಬಸ್ಥರು, ಕೇಶವಾರ ಗ್ರಾಮಸ್ಥರು ಅಭಿನಂದನೆ ಮತ್ತು ಹರ್ಷ ವ್ಯಕ್ತಪಡಿಸಿದ್ದಾರೆ.

ಮತ್ತೊಂದು ವಿಶೇಷವೆಂದರೆ, ನವೀನ್ ಕುಮಾರ್ ರವರು ವಿದ್ಯಾರ್ಥಿ ದಿಸೆಯಲ್ಲೂ ಸಹ ಕರ್ನಾಟಕ ರಾಜ್ಯ ಸರ್ಕಾರದ 2016–17 ನೇ ಸಾಲಿನ ಎನ್.ಎಸ್.ಎಸ್ ಅತ್ಯುತ್ತಮ ಸ್ವಯಂಸೇವಕ ಪ್ರಶಸ್ತಿ ಪಡೆದಿದ್ದರು, ತಾವು ವಿದ್ಯಾಭ್ಯಾಸ ಮಾಡಿದಂತಹ ಪದವಿ ಕಾಲೇಜಿನಲ್ಲಿಯೇ ವಾಣಿಜ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿ ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಯಾಗಿ ಪ್ರಾರಂಭದ ದಿನಗಳಿಂದಲೂ ಸಹ ಕ್ರಿಯಾಶೀಲತೆ, ಬದ್ಧತೆ, ಪ್ರಾಮಾಣಿಕತೆ, ಚೈತನ್ಯಶೀಲತೆ, ಕಾರ್ಯತತ್ಪರತೆಯಿಂದ ಕಾರ್ಯನಿರ್ವಹಿಸಿ ಮತ್ತೊಮ್ಮೆ ಪ್ರಶಸ್ತಿ ಪಡೆದಿರುವುದು ಸಂತಸದ ಸಂಗತಿ. ಕರ್ನಾಟಕದಲ್ಲಿ ರಾಜ್ಯ ಸರ್ಕಾರದ ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಎರಡು ಬಾರಿ ಪಡೆದಿರುವ ವ್ಯಕ್ತಿ ನವೀನ್ ಎಂಬುದು ಮತ್ತೊಂದು ಹೆಗ್ಗಳಿಕೆ.

# ಅದ್ದೂರಿ ಡಿ.ವಿ.ಗುಂಡಪ್ಪರವರ 138ನೇ ಜನ್ಮ ದಿನಾಚರಣೆ

**ಮುಳಬಾಗಿಲು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೋಲಾರ ಮತ್ತು ಡಾ.ಡಿ.ವಿ.ಜಿ ಪ್ರತಿಷ್ಠಾನ (ರಿ) ಮತ್ತು ಕನ್ನಡ ಸಾಹಿತ್ಯ ಪರಿಷತ್ತು ಕೋಲಾರ ಜಿಲ್ಲೆ ರವರ ಸಹಯೋಗದೊಂದಿಗೆ ಕರ್ನಾಟಕ ರತ್ನ ಮಂಕು ತಿಮ್ಮನ ಕಗ್ಗ ಖ್ಯಾತಿಯ ಡಾ. ಡಿ.ವಿ.ಗುಂಡಪ್ಪ ರವರ 138 ನೇ ಜನ್ಮ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲಾಯಿತು, ಮುಳಬಾಗಿಲು ನಗರದ ರಾಜ ಬೀದಿಗಳಲ್ಲಿ ನಗರಸಭೆ ಯಿಂದ ಆಯೋಜಿಸಿದ ಡಾ.ಡಿ.ಜಿ.ಗುಂಡಪ್ಪನವರ ಚಿನ್ನದ ರಥವನ್ನು ಜಾನಪದ ಸಂಸ್ಕೃತಿಕ ಕಲಾ ತಂಡಗಳಿಂದ ಮೆರವಣಿಗೆ ಮಾಡಲಾಯಿತು,

ಮುಳಬಾಗಿಲಿನ ಶಾಸಕರಾದ ಸಮೃದ್ಧಿ ವಿ.ಮಂಜುನಾಥ್ ರವರು ಶಾಲೆಯ ಡಿ.ಜಿ.ವಿ ಪುತ್ಥಳಿಗೆ ಮಾಲಾರ್ಪಣೆ ಮಾಡುವುದರ ಮೂಲಕ ಹಾಗೂ ಡಿ.ಜಿ.ವಿ ರಥಕ್ಕೆ ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ಮಾಡನಾಡಿದ ಶಾಸಕರು ಡಿ.ಜಿ.ವಿ ನಮ್ಮ ಮುಳಬಾಗಿಲಿನ ಖ್ಯಾತ ಕವಿ ಎಂದು ಹೇಳುವುದೇ ನಮೆಲ್ಲರ ಹೆಮ್ಮೆಯ ವಿಷಯ ಹಾಗೂ ಅತಿ ಶೀಘ್ರದಲ್ಲಿ ನಗರದ ಡಿ.ವಿ.ಜಿ ವೃತ್ತದಲ್ಲಿ ಡಿ.ವಿ.ಜಿ ರವರ ಪ್ರತಿಮೆಯನ್ನು ಸ್ಥಾಪಿಸಲಾಗುವುದು, ಈ ಕನಸುನ್ನು ನನಸ್ಸು ಮಾಡುವುದು ನನ್ನ ಕರ್ತವ್ಯ ಎಂದು ಹೇಳಿದರು.

ಈ ಸದರಿ ಕಾರ್ಯಕ್ರಮದಲ್ಲಿ ಶ್ರೀ ಎಂ.ಆರ್ ರವಿ ರವರು ಜಿಲ್ಲಾಧಿಕಾರಿಗಳು ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ಡಿವಿಜಿಯುವರ ಸಾಹಿತ್ಯ ವ್ಯಕ್ತಿತ್ವವನ್ನು ಗಟ್ಟಿಗೊಳಿಸುವಂತಹದು.ನಮ ಜಿಲ್ಲೆಯ ಅನಘ್ಯ 9 ಸಾಹಿತ್ಯ ರತ್ನಗಳು ಮಾಸ್ತಿ,ಡಿವಿಜಿ ಮತ್ತು ಸರ್ ಎಂ.ವಿಶ್ವೇಶ್ವರಯ್ಯ ನವರು. ಇಂಥ ಕಾರ್ಯಕ್ರಮಗಳನ್ನು ಹೆಚ್ಚು ಹೆಚ್ಚು ರೂಪಿಸುವುದರ ಮೂಲಕ ವಿದ್ಯಾರ್ಥಿಗಳನ್ನು ಸಾಹಿತ್ಯದ ಕಡೆಗೆ ಸೆಳೆಯಬೇಕು ಮತ್ತು ಅವರನ್ನು ಸಹೃದಯರನ್ನಾಗಿ ಮಾಡಬೇಕೆಂದು ಕರೆ ನೀಡಿದರು.



ಡಿವಿಜಿ ಬಗ್ಗೆ ವಿಶೇಷ ಉಪನ್ಯಾಸ ನಡೆದ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರು ,ಉಪನ್ಯಾಸಕರಾದ ಜೆಜಿ ನಾಗರಾಜ ಅವರು ಡಿವಿಜಿಯವರು ನಡೆಕಾರರು ಮತ್ತು ನುಡಿಕಾರರು ಇವತ್ತು ಅದಕ್ಕೆ ಕಿಂಚಿತ್ತು ವ್ಯತ್ಯಾಸವಾಗದಂತೆ ಬದುಕನ್ನು ರೂಪಿಸಿಕೊಂಡು ಮಾದರಿಯಾಗಿ ಬದುಕಿದವರು. ತಮಿಳುನಾಡಿನಿಂದ ಮಾಸ್ತಿ ಕುಟುಂಬ ಡಿವಿಜಿ ಕುಟುಂಬ ಕೋಲಾರ ಜಿಲ್ಲೆಯ ಮುಳಬಾಗಿಲುನಲ್ಲಿ ನೆಲೆಸಿ ಕನ್ನಡ ಸಾಹಿತ್ಯ ರಚಿಸುವುದರ ಮೂಲಕ ಕೋಲಾರ ಜಿಲ್ಲೆಯನ್ನು ರಾಷ್ಟ್ರಮಟ್ಟಕ್ಕೆ ಪರಿಚಯಿಸಿದವರು. ಎಸ್ ಎಸ್ ಎಲ್ ಸಿ ಫೇಲ್ ಆಗಿ ಕನ್ನಡದಲ್ಲಿ ಶ್ರೇಷ್ಠವಾದ ಅರವತ್ತಾರು ಕೃತಿಗಳನ್ನು ,ಇಂಗ್ಲೀಷಲ್ಲಿ ಏಳು ಕೃತಿಗಳನ್ನು ರಚಿಸಿರುತ್ತಾರೆ. ಹಾಗೆಯೆ ಪತ್ರಕರ್ತರಾಗಿ ಪತ್ರಕರ್ತರ ಸಂಘವನ್ನು ಸಂಸ್ಥಾಪನೆ ಮಾಡಿದ ಖ್ಯಾತಿ ಇವರಿಗೆ ಸಲ್ಲುತ್ತದೆ. ಇವರು ಸ್ವಾಭಿಮಾನ, ಸರಳತೆ ,ದಾರ್ಶನಿಕತೆ ನೈತಿಕತೆಯ ಮೌಲ್ಯಗಳ ಮೂಲಕ ಜೀವನವನ್ನು ಕಟ್ಟಿಕೊಂಡು ಮಾದರಿಯಾಗಿ ಬದುಕಿದವರು ಇಂಥ ಮಾದರಿ ಬದುಕುಗಳು ನಮಗೆ ಬೇಕಾಗಿದೆ ಎಂದು ತಿಳಿಸಿದರು.

ತಾಲೂಕು ದಂಡಾಧಿಕಾರಿಗಳಾದ ವಿ ಗೀತ ಅವರು ಡಿವಿಜಿ ಕುರಿತು ಮಾತನಾಡಿದರು . ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಗೋಪಾಲಗೌಡರು ಕಾರ್ಯಕ್ರಮವನ್ನು ಕುರಿತು ಪ್ರಾಸ್ತಾವಿಕವಾಗಿ ಪರಿಚಯಿಸಿದರು. ಕಾರ್ಯಕ್ರಮದಲ್ಲಿ ಪೌರಾಯುಕ್ತರಾದ ವಿ ಶ್ರೀಧರ್ ಹಾಗೂ ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ ಡಾ.ಸರ್ವೇಶ್ , ತಾಲ್ಲೂಕಿನ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಜಗದೀಶ್ ರವರು ಹಾಗೂ ಮುಳಬಾಗಿಲು ಕನ್ನಡ ಪರ ಒಕ್ಕೂಟದ ಅಧ್ಯಕ್ಷ ಕೇಸರಿ ಶಂಕರ್, ಡಿ.ವಿ.ಜಿ ಕನ್ನಡ ಸಂಘದ ಅಧ್ಯಕ್ಷರಾದ ಮಧು ಸೂದನ್ . ಕನ್ನಡ ಸಾಹಿತ್ಯ ಪರಿಷತ್‌ನಗರ ಅಧ್ಯಕ್ಷರು ಮುರಳಿ. ಸರ್ಕಾರಿ ಡಿ.ವಿ.ಜಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಸೋಣಪ್ಪ ಹಾಗೂ ಶಾಲೆ ಶಿಕ್ಷಕ ವೃಂದದವರು ಹಾಜರಿದ್ದರು. ಕಾರ್ಯಕ್ರಮದಲ್ಲಿ ಡಿವಿಜಿ ಶಾಲೆಯ ಮಕ್ಕಳು ವಿವಿಧ ರೀತಿಯ ಸಾಂಸ್ಕೃತಿಕ ಚಟುವಟಿಕೆಗಳನ್ನು ವೇದಿಕೆಯಲ್ಲಿ ರೂಪಿಸಿದರು.

# 6.89 ಕೋಟಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವರಿಂದ ಚಾಲನೆ



**ದೇವನಹಳ್ಳಿ:** ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿ ವ್ಯಾಪ್ತಿಯ ಐಬಸಾಪುರ, ಯಲಿಯೂರು ,ನಲ್ಲೂರು, ಬೆಟ್ಟಕೋಟೆ, ಬೂದಿಗೆರೆ, ಚನ್ನಹಳ್ಳಿ ಸೇರಿದಂತೆವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನ, ಎಸ್.ಸಿ.ಪಿ–ಟಿ.ಎಸ್. ಪಿ ಅನುದಾನ, ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿ ಯೋಜನೆಗಳಡಿ ಸುಮಾರು 6.89 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ರವರು ಚಾಲನೆ ನೀಡಿದರು.

ಚನ್ನರಾಯಪಟ್ಟಣ ಹೋಬಳಿಯ ಐಬಾಸಪುರ ಗ್ರಾಪಂ ವ್ಯಾಪ್ತಿಯಲ್ಲಿ 112.5 ಲಕ್ಷ ವೆಚ್ಚದ 7 ಕಾಮಗಾರಿ, ಚನ್ನರಾಯಪಟ್ಟಣ ಗ್ರಾಪಂ ವ್ಯಾಪ್ತಿಯಲ್ಲಿ 95 ಲಕ್ಷ ವೆಚ್ಚದ 05 ಕಾಮಗಾರಿ, ಯಲಿಯೂರು ಗ್ರಾಪಂ ವ್ಯಾಪ್ತಿಯಲ್ಲಿ 50 ಲಕ್ಷದ 04 ಕಾಮಗಾರಿ, ನಲ್ಲೂರು ಗ್ರಾಪಂ ವ್ಯಾಪ್ತಿಯಲ್ಲಿ 87 ಲಕ್ಷದ 07 ಕಾಮಗಾರಿ, ಬೆಟ್ಟ ಕೋಟೆ ಗ್ರಾಪಂ ವ್ಯಾಪ್ತಿಯಲ್ಲಿ 30 ಲಕ್ಷ ವೆಚ್ಚದ 03 ಕಾಮಗಾರಿ, ಗಂಗವಾರ ಚೌಡಪ್ಪನಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ 17 ಲಕ್ಷ ವೆಚ್ಚದ 02 ಕಾಮಗಾರಿ, ಬೂದಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 131 ಲಕ್ಷ ವೆಚ್ಚದ 12 ಕಾಮಗಾರಿ, ಚನ್ನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 187 ಲಕ್ಷ ಮೊತ್ತದ 08 ಕಾಮಗಾರಿ ಸೇರಿ ಒಟ್ಟು 689.5 ಲಕ್ಷ ಮೊತ್ತದ 48 ಕಾಮಗಾರಿಳನ್ನು ಒಳಗೊಂಡ ವಿವಿಧ ಸಿಸಿ ರಸ್ತೆ, ಕಾಂಕ್ರೀಟ್ ರಸ್ತೆ, ಚರಂಡಿ, ಸಮುದಾಯ ಭವನ, ಚೆಕ್ ಡ್ಯಾಂ ನಿರ್ಮಾಣ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿದರು.

ತಾಲ್ಲೂಕಿನ ವಿಜಯಪುರ ಪಟ್ಟಣ ಮತ್ತು ಬೂದಿಗೆರೆ ಗ್ರಾಮದಲ್ಲಿ ಕರಗ ಮಹೋತ್ಸವದ ಪ್ರಯುಕ್ತ ದೇವಾಲಯಕ್ಕೆ ಭೇಟಿ ನೀಡಿ ದರ್ಶನ ಪಡೆದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷರಾದ ಚನ್ನಹಳ್ಳಿ ರಾಜಣ್ಣ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಲಕ್ಷ್ಮೀ ನಾರಾಯಣಪ್ಪ, ತಾಲೂಕು ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಸಿ. ಜಗನ್ನಾಥ್ ,ದೇವನಹಳ್ಳಿ ತಹಸೀಲ್ದಾರ್ ಬಾಲಕೃಷ್ಣ, ಇಒ ಶ್ರೀನಾಥ್ ಗೌಡ, ಬೂದಿಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ವರಲಕ್ಷ್ಮಿ ,ಉಪಾಧ್ಯಕ್ಷರುಮತ್ತು ಸದಸ್ಯರು ಮುಖಂಡರುಗಳಾದ ಗಣೇಶಪ್ಪ ,ಪಿ.ಸೀನಪ್ಪ, ಶ್ರೀನಿವಾಸ್ ಗೌಡ, ಲಕ್ಷ್ಮಣ್ ಮೂರ್ತಿ, ಮಂದಾರ ಮುನಿರಾಜು, ಲಕ್ಷ್ಮಣ್ ಗೌಡ, ಕಂಡಕ್ಟರ್ ನಾರಾಯಣ ಸ್ವಾಮಿ, ರಾಮಾಂಜನಿ ದಾಸ್ ,ವೆಂಕಟಪ್ಪ ,ತತ್ತಮಂಗಲ ರಮೇಶ್, ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಮಚಂದ್ರಪ್ಪ ಮತ್ತು ಮಹಿಳಾ ಘಟಕದ ಅಧ್ಯಕ್ಷೆ ಮಂಜುಳಾ ವೆಂಕಟೇಶ್ ಸೇರಿದಂತೆ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾದ್ಯಾಕ್ಷರು, ಸದಸ್ಯರು, ಜನಪ್ರತಿನಿಧಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# 13 ಸರ್ಕಾರಿ ಶಾಲೆ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಣೆ



**ಕೊರಟಗೆರೆ** : ಅಭಿಮಾನಿಗಳ ಆರಾಧ್ಯ ದೈವ ಕರ್ನಾಟಕ ರತ್ನ ಪವರ್ ಸ್ಟಾರ್ ಡಾ. ಪುನೀತ್ ರಾಜಕುಮಾರ್ 50ನೇ ವರ್ಷದ ಜನ್ಮದಿನದ ಪ್ರಯುಕ್ತ 13 ಸರ್ಕಾರಿ ಶಾಲಾ ಮಕ್ಕಳಿಗೆ ಕಲಿಕಾ ಸಾಮಗ್ರಿಗಳು ಹಾಗೂ ಸಿಹಿ ವಿತರಣೆ ಮಾಡಿದ ಅಪ್ಪು ಅಭಿಮಾನಿಗಳು.

ಪುನೀತ್ ರಾಜಕುಮಾರ್ ನಡೆದು ಬಂದ ಹಾದಿಯಲ್ಲಿ ಅವರ ಅಭಿಮಾನಿಗಳು ಮುಂದೆ ಸಾಗುತ್ತಿರುವುದು ಬಹಳಷ್ಟು ಸಂತಸದ ವಿಷಯವಾಗಿದೆ.

ತಾಲ್ಲೂಕಿನ ಹೊಳವನಹಳ್ಳಿ ಹೋಬಳಿಯ ಬೈಚಪುರ ಗ್ರಾಮ ಪಂಚಾಯತಿ ಸದಸ್ಯ ವೆಂಕಟರೆಡ್ಡಿ ಹಾಗೂ ಗ್ರಾಮದ ಅಪ್ಪು ಅಪ್ಪಟ ಅಭಿಮಾನಿಗಳಿಂದ ಕರ್ನಾಟಕ ರತ್ನ ಅಭಿಮಾನಿಗಳ ಆರಾಧ್ಯ ದೈವ ಬೆಟ್ಟದ ಹೂವು ಡಾ. ಪುನೀತ್ ರಾಜಕುಮಾರ್ ಜನುಮದಿನದ ಪ್ರತಿ ವರ್ಷವು ಇಂತಹ ಒಂದಲ್ಲ ಒಂದು ರೀತಿಯ ವಿಶೇಷ ಕಾರ್ಯಕ್ರಮಗಳನ್ನ ಆಯೋಜನೆ ಅಪ್ಪು ಅಭಿಮಾನಿಗಳು ಮಾಡುತ್ತಿದ್ದಾರೆ..

ರಾಜ್ಯದ ಎಲ್ಲಾ ಪ್ರತಿ ಹಳ್ಳಿ ಹಳ್ಳಿಗಳಲ್ಲೂ ಅಪ್ಪು ಹುಟ್ಟು ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸುತ್ತಾರೆ ಅಷ್ಟೇ ಅಲ್ಲ ದೇಶದ ನಾನಾ ಭಾಗಗಳಲ್ಲಿ ಪುನೀತ್ ರಾಜಕುಮಾರ್ ಅವರ ಜನ್ಮದಿನದ ಆಚರಣೆ ಮಾಡುತ್ತಿದ್ದಾರೆ ಇದೇ ತಾನೇ ಒಬ್ಬ ನಟನಿಗೆ ಸಿಗಬೇಕಾದ ಗೌರವ ಎಂದರೆ ತಪ್ಪಾಗಲಾರದು. ಪ್ರತಿಯೊಬ್ಬ ಕನ್ನಡಿಗರ ಹೃದಯದಲ್ಲಿ ನೆಲೆಸಿರುವ ಪುನೀತ್..

ಅಭಿಮಾನಿಗಳ ಆರಾಧ್ಯ ದೈವ ಕರ್ನಾಟಕ ರತ್ನ ಪವರ್ ಸ್ಟಾರ್ ಪುನೀತ್ ರಾಜಕುಮಾರ್ ಅವರ ಮಾರ್ಗದಲ್ಲಿ ನಡೆಯುವುದೇ ನಮ್ಮೆಲ್ಲರ ಪುಣ್ಯ ಅವರು ನಮ್ಮ ಮನಸ್ಸಿನಲ್ಲಿ ಎಂದೆಂದಿಗೂ ಅಜರಾಮರ ಅವರ ನೆನಪಿಗಾಗಿ ಪ್ರತಿ ವರ್ಷ ಒಂದಲ್ಲ ಒಂದು ರೀತಿಯ ಸರ್ಕಾರಿ ಶಾಲೆ ಮಕ್ಕಳ ವಿದ್ಯಾಭ್ಯಾಸಕ್ಕೆ ಉಪಯೋಗವಾಗುವ ಕಲಿಕಾ ಸಾಮಗ್ರಿಗಳನ್ನು ಇನ್ನಿತರ ಕೆಲಸಗಳನ್ನು ಸಹಾಯದ ಸಹಕಾರ ನೀಡುತ್ತಾ ಬಂದಿದ್ದೇವೆ ಎಂದು ಅಪ್ಪು ಅಪ್ಪಟ ಅಭಿಮಾನಿ ಬೈಚಾಪುರ ಗ್ರಾಮ ಪಂಚಾಯತಿ ಸದಸ್ಯ ವೆಂಕಟರೆಡ್ಡಿ ತಿಳಿಸಿದರು.

ಬೈಚಾಪುರ ಗ್ರಾಮ ಪಂಚಾಯಿತಿಯ ಎಲ್ಲ ಸದಸ್ಯರು ಅಧ್ಯಕ್ಷರು ಉಪಾಧ್ಯಕ್ಷರು ಒಟ್ಟಿಗೆ ಸೇರಿ ಕನ್ನಡದ ಮೇರು ನಟ ಕರ್ನಾಟಕ ರತ್ನ ಪುನೀತ್ ರಾಜಕುಮಾರ್ ಅವರ ಹುಟ್ಟು ಹಬ್ಬವನ್ನು ಬಹಳ ಅರ್ಥ ಪೂರ್ಣವಾಗಿ ಆಚರಣೆ ಮಾಡಿಕೊಂಡು ಬಂದಿದ್ದಾರೆ.

ಪುನೀತ್ ರಾಜಕುಮಾರ್ ಕನ್ನಡ ಚಲನಚಿತ್ರ ರಂಗದಲ್ಲಿ ಒಬ್ಬ ಬಹಳ ಹೆಸರು ಮಾಡಿದ ವ್ಯಕ್ತಿ ಅದೆಷ್ಟೋ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ಸಹಕಾರ ಮಾಡಿದ ವ್ಯಕ್ತಿ. ಅವರ ವ್ಯಕ್ತಿತ್ವದಿಂದ ಬಹಳಷ್ಟು ಬಲಾಗುತ್ತಿದ್ದೇನೆ.ಅವರ ಸಮಾಜಮುಖಿ ಕೆಲಸ ಕಾರ್ಯಗಳನ್ನು ಇಂದಿನ ಯುವ ಪೀಳಿಗೆ ಮುನ್ನಡೆಸಬೇಕು ಎಂದರು..

ಇದೇ ಸಂದರ್ಭದಲ್ಲಿ ಬೈಚಾಪುರ ಸರ್ಕಾರಿ ಶಾಲೆಯ ಶಿಕ್ಷಕರು ವಿದ್ಯಾರ್ಥಿಗಳು ಗ್ರಾಮದ ಮುಖ್ಯಸ್ಥರು ಮುಖಂಡರು ಗ್ರಾಮ ಪಂಚಾಯತಿಯ ಅಧ್ಯಕ್ಷರು ಸದಸ್ಯರು, ಅಪ್ಪು ಅಭಿಮಾನಿಗಳು ಹಾಜರಿದ್ದರು..

# ಪುನರ್ ವಿಗ್ರಹ ಪ್ರತಿಷ್ಠಾಪನಾ ಮತ್ತು ಕಳಶಾರಾಧನೆ

**ಮುಳಬಾಗಿಲು:** ತಾಲ್ಲೂಕಿನ ಹೆಬ್ಬಣಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಂಗವಾದಿ ಗ್ರಾಮದಲ್ಲಿ ಪುರಾತನ ದೇವಾಲಯಗಳಲ್ಲಿ ಒಂದಾದ ಶ್ರೀ ಸತ್ಯಭಾಮ ಸಮೇತ ಶ್ರೀ ವೇಣು ಗೋಪಾಲಸ್ವಾಮಿ ಪುನರ್ ವಿಗ್ರಹ ಪ್ರತಿಷ್ಠಾಪನಾ ಮತ್ತು ಕಳಶಾರಾಧನೆ ಕಾರ್ಯಕ್ರಮ ಬಹಳ ಅದ್ದೂರಿಯಾಗಿ ನಡೆಯಿತು.



ಈ ದೇವಾಲಯವು ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಸುಮಾರು ವರ್ಷಗಳ ಇತಿಹಾಸ ಇರುವ ಈ ದೇವಾಲಯವನ್ನು ಪುನರ್ ಪ್ರತಿಷ್ಠಾಪನೆ ಮಾಡಲಾಗಿತ್ತು ನಂತರ ಇತ್ತೀಚಿಗೆ ಈ ವೇಣುಗೋಪಾಲಸ್ವಾಮಿ ದೇವಾಲಯವನ್ನು ನವೀಕರಿಸಿ ವಿಗ್ರಹ ಪ್ರತಿಷ್ಠಾಪನೆ ಮತ್ತು ಕಳಶ ಆರಾಧನೆ ಕಾರ್ಯಕ್ರಮವನ್ನು ಸಾವಿರಾರು ಭಕ್ತಾದಿಗಳು ಬಂದು ದೇವರ ದರ್ಶನ ಪಡೆದು ದೇವರ ಕೃಪೆಗೆ ಪಾತ್ರಾಗುತ್ತಿದ್ದಾರೆ. ಈ ಕಾರ್ಯಕ್ರಮದಲ್ಲಿ ಮೊದಲಿಗೆ ಕುಂಕುಮಾರ್ಚನೆ, ವಾಸ್ತುಹೋಮ, ಮಹಾ ಕುಂಭಸ್ಥಾಪನೆ, ಕುಂಭ ಮಂಡಲ ಆರಾಧನೆ, ಶಾಂತಿ ಹೋಮ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಮಾಡಲಾಯಿತು. ನಂತರ ಗೋಪೂಜೆ, ಸುಮಂಗಳಿಪೂಜೆ, ಈ ಕಾರ್ಯಕ್ರಮಗಳನ್ನು ಊರಿನ ಮುಖಂಡರು ಹಾಗೂ ಬಂದಿರುವ ಎಲ್ಲಾ ಭಕ್ತಾದಿಗಳಿಗೂ ನೆರವೇರಿಸಿ, ಹಾಗೂ ಈ ತಾಲೂಕಿನ ಜನತೆಗೂ ಒಳ್ಳೇದು ಮಾಡಲಿ ತಾಲೂಕಿನಲ್ಲಿ ಒಳ್ಳೆಯ ಮಳೆ ಬೆಳೆಯಾಗಿ ಜನರು ಸುಖ ಶಾಂತಿಯಿಂದ ಜೀವನ ಸಾಗಿಸಲೆಂದು ದೇವರಲ್ಲಿ ಪ್ರಾರ್ಥಿಸಿದರು.

ದೇವರಿಗೆ ನಾನಾ ಬಗೆಯ ಹೂಗಳಿಂದ ಹಾಗೂ ಆಭರಣಗಳಿಂದ ಅಲಂಕಾರ ಮಾಡಲಾಗಿತ್ತು, ದೇವರ ವಿಗ್ರಹಕ್ಕೆ ಪಂಚಾಮೃತ ಅಭಿಷೇಕ ಕುಂಭಾಭಿಷೇಕ ವಿಶೇಷ ಹೂವಿನ ಅಲಂಕಾರ ಹೋಮ , ಹೋಮಗಳು, ನೂತನ ಭೂ ಸ್ಪರ್ಶ, ಮಹಾಮಂಗಳಾರತಿ, ಮಹಾಪ್ರಸಾದ ವಿನಯದ ನಡೆಯಿತು.

ಈ ಪುನರ್ ಪ್ರತಿಷ್ಠಾಪನಾ ಕಾರ್ಯಕ್ರಮವನ್ನು ಮುಖಂಡರು ಬಂದು ಚಾಲನೆ ನೀಡಿದರು. ಶ್ರೀ ರುಕ್ಮಿಣಿ ಸತ್ಯಭಾಮ ಸಮೇತ ಶ್ರೀ ವೇಣು ಗೋಪಾಲ ಸ್ವಾಮಿ ಪುನರ್ ವಿಗ್ರಹ ಪ್ರತಿಷ್ಠಾಪನಾ ಮತ್ತು ಕಳಶಾರಾಧನೆ ಅದ್ದೂರಿಯಾಗಿ ನಡೆಯಿತು.

ಈ ಒಂದು ಕಾರ್ಯಕ್ರಮದಲ್ಲಿ ರಸಮಂಜರಿ ಕಾರ್ಯಕ್ರಮವನ್ನು ಆಯೋಜಿಸಿದ್ದು ಈ ಕಾರ್ಯಕ್ರಮಕ್ಕೆ ತಾಲೂಕಿನ ಶಾಸಕರಾದ ಸಮೃದ್ಧಿ ವಿ.ಮಂಜುನಾಥ್ ಬಂದು ಚಾಲನೆ ನೀಡಿರುವುದು ವಿಶೇಷವಾಗಿದೆ. ಈ ಸಂದರ್ಭದಲ್ಲಿ ಜೆಡಿಎಸ್ ತಾಲೂಕು ಅಧ್ಯಕ್ಷರಾದ ಕಾಡೇನಹಳ್ಳಿ ನಾಗರಾಜ್, ಕಾರ್ಯದರ್ಶಿಗಳಾದ ನಲ್ಲೂರು ರಘುಪತಿಗೌಡ, ಜಿ.ಪಂ.ಮಾಜಿ ಸದ್ಯಸರಾದ ಸಾಮೇಗೌಡ, ಜೆಡಿಎಸ್ ಮುಖಂಡರಾದ ಎಂ.ಗೊಲ್ಲಹಳ್ಳಿ ಪ್ರಭಾಕರ್, ಚಂದ್ರಹಾಸ್, ನಗವಾರ ಸತ್ಯಣ್ಣ, ಸಿಮೆಂಟ್ ಗೋಪಾಲ್, ಕೊತ್ತೂರು ವೆಂಕಟರಾಮಪ್ಪ, ಶ್ರೀನಿವಾಸ್, ಹರಿ, ಮುನಿಯಪ್ಪ, ಹೆಬ್ಬಣಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಭಾಸ್ಕರ್, ನಾಗಾರ್ಜುನ, ಊರಿನ ಹಿರಿಯ ಮುಖಂಡರು, ದೇವಾಲಯದ ಕಾರ್ಯಕಾರಿ ಸಮಿತಿ, ಊರಿನ ಪ್ರಮುಖರು,ಯುವಕರು ಮತ್ತು ಬಂಗವಾದಿ ಗ್ರಾಮದ ಸಾವಿರಾರು ಭಕ್ತಾದಿಗಳು, ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಭಕ್ತಾದಿಗಳು ಭಾಗವಹಿಸಿದ್ದರು.

# 2.66 ಕೋಟಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವರಿಂದ ಚಾಲನೆ

**ದೇವನಹಳ್ಳಿ:** ತಾಲ್ಲೂಕಿನ ಕಸಬಾ ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನ, ಶಾಸಕರ ಕ್ಷೇತ್ರಾಭಿವೃದ್ಧಿ ಅನುದಾನದಡಿ ಸುಮಾರು 2.66 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ರವರು ಚಾಲನೆ ನೀಡಿದರು.

ಕಸಬಾ ಹೋಬಳಿಯ ಜಾಲಿಗೆ ಗ್ರಾಪಂ ವ್ಯಾಪ್ತಿಯಲ್ಲಿ 50 ಲಕ್ಷ ಮೊತ್ತದ 05 ಕಾಮಗಾರಿ, ಆಲೂರು ದುದ್ದನಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ 103.82 ಲಕ್ಷ ಮೊತ್ತದ 10 ಕಾಮಗಾರಿ, ಬಿದಲೂರು ಗ್ರಾಪಂ ವ್ಯಾಪ್ತಿಯಲ್ಲಿ 57



ಲಕ್ಷದ 07 ಕಾಮಗಾರಿ, ಆವತಿ ಗ್ರಾಪಂ ವ್ಯಾಪ್ತಿಯಲ್ಲಿ 56 ಲಕ್ಷ ಮೊತ್ತದ 07 ಕಾಮಗಾರಿ ಸೇರಿ ಒಟ್ಟು 266.82 ಲಕ್ಷ ಮೊತ್ತದ 29 ಕಾಮಗಾರಿಳನ್ನು ಒಳಗೊಂಡ ಕಾಂಕ್ರೀಟ್ ರಸ್ತೆ, ಚರಂಡಿ, ಸಮುದಾಯ ಭವನ, ಬಸ್ ನಿಲ್ದಾಣ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಬಯಪ ಅಧ್ಯಕ್ಷರಾದ ಶಾಂತಕುಮಾರ್, ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಜಗನ್ನಾಥ, ದೇವನಹಳ್ಳಿ ತಹಸೀಲ್ದಾರ್ ಬಾಲಕೃಷ್ಣ, ಇಒ ಶ್ರೀನಾಥ್ ಗೌಡ ಸೇರಿದಂತೆ, ಆಯಾ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾದ್ಯಾಕ್ಷರು, ಸದಸ್ಯರು, ಜನಪ್ರತಿನಿಧಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ತಮಿಳುನಾಡು: ಅಣ್ಣಾಮಲೈ, ತಮಿಳಿಸೈ ಸೌಂದರ್ಯರಾಜನ್ ಪೊಲೀಸ್ ವಶಕ್ಕೆ

**ಚೆನ್ನೈ:** ತಮಿಳುನಾಡಿನಲ್ಲಿ ಬಹುಕೋಟಿ ರೂಪಾಯಿ ಮೌಲ್ಯದ ಮದ್ಯ ಹಗರಣ ನಡೆದಿದೆ ಎಂದು ಆರೋಪಿಸಿ ಸೋಮವಾರ ಪ್ರತಿಭಟನೆಗೆ ಮುಂದಾಗಿದ್ದ ತಮಿಳುನಾಡು ಬಿಜೆಪಿ ಅಧ್ಯಕ್ಷ ಕೆ.ಅಣ್ಣಾಮಲೈ ಮತ್ತು ಪಕ್ಷದ ಬೆಂಬಲಿಗರನ್ನು ಪೊಲೀಸರು ವಶಕ್ಕೆ ಪಡೆದರು.

ತಮಿಳುನಾಡಿನ ಚಿಲ್ಲರೆ ಮದ್ಯ ಮಾರಾಟ ನಿಗಮದಲ್ಲಿ 1,000 ಕೋಟಿ ರೂ ಮೌಲ್ಯದ ಅಕ್ರಮ ನಡೆದಿದೆ ಎಂಬ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಜಾರಿ ನಿರ್ದೇಶನಾಲಯ(ಇ.ಡಿ.) ತನಿಖೆ ನಡೆಸುತ್ತಿದೆ.

ಸರ್ಕಾರಿ ಸ್ವಾಮ್ಯದ ಟಿಎಎಸ್ ಎಂಎಸಿ ಅವ್ಯವಹಾರಗಳಲ್ಲಿ ಭಾಗಿಯಾಗಿರುವ ಆರೋಪವಿದೆ. ಈ ಹಿನ್ನೆಲೆಯಲ್ಲಿ ಟಿಎಎಸ್‌ಎಂ ಎಸಿಯನ್ನು ಗುರಿಯಾಗಿಸಿ ಬಿಜೆಪಿ ರಾಜ್ಯದೆಲ್ಲೆಡೆ ಪ್ರತಿಭಟನೆಗೆ ಕರೆ ನೀಡಿತ್ತು. ಅದರಂತೆ ಇಂದು ಪ್ರತಿಭಟನೆಗೆ ಮುಂದಾದಾಗ ಅಣ್ಣಾಮಲೈ ಮತ್ತು ಪಕ್ಷದ ನಾಯಕರನ್ನು ಪೊಲೀಸರು ವಶಕ್ಕೆ ಪಡೆದರು.

ತೆಲಂಗಾಣ ಮತ್ತು ಪುದುಚೇರಿ ಮಾಜಿ ರಾಜ್ಯಪಾಲೆ ತಮಿಳಿಸೈ ಸೌಂದರ್ಯರಾಜನ್ ಅವರನ್ನೂ ಕೂಡ ಬಿಗಿ ಪೊಲೀಸ್ ಭದ್ರತೆಯನ್ನು ಅವರ ನಿವಾಸದಿಂದಲೇ ಪೊಲೀಸರು ವಶಕ್ಕೆ ಪಡೆದರು. ಈ ವೇಳೆ ಮಾತನಾಡಿದ ಸೌಂದರ್ಯ ರಾಜನ್, "ಪೊಲೀಸರು ನನ್ನ ನಿವಾಸದಿಂದಲೇ ನನ್ನನ್ನು ವಶಕ್ಕೆ ಪಡೆದರು. ನಾನು ಏಕಾಂಗಿಯಾಗಿ ಹೋಗುವುದಿಲ್ಲ. ಎಲ್ಲರೂ ನನ್ನ ಜೊತೆ ಬರಬೇಕೆಂದು ಬಯಸುತ್ತೇನೆ" ಎಂದರು.

ಮಹಿಳಾ ಮೋರ್ಚಾ ಮುಖ್ಯಸ್ಥೆ ಮತ್ತು ಕೊಯಮತ್ತೂರಿನ ದಕ್ಷಿಣ ಕ್ಷೇತ್ರದ ಶಾಸಕಿ ವನತಿ ಶ್ರೀನಿವಾಸನ್, ವಿನೋಜ್ ಪಿ.ಸೆಲ್ವಂ ಮತ್ತು ಅಮರ್ ಪ್ರಸಾದ್ ರೆಡ್ಡಿ ಸೇರಿದಂತೆ ಅನೇಕರನ್ನು



ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪೊಲೀಸರು ವಶಕ್ಕೆ ಪಡೆಯುವುದಕ್ಕೂ ಮುನ್ನ ಮಾತನಾಡಿದ ಅಣ್ಣಾಮಲೈ, "ಟಿಎಎಸ್‌ಎಂಎಸಿ (ತಮಿಳುನಾಡು ಸ್ಟೇಟ್ ಮಾರ್ಕೆಟಿಂಗ್ ಕಾರ್ಪೊರೇಷನ್)ನಲ್ಲಿ 1,000 ಕೋಟಿ ರೂ ಅಕ್ರಮ ನಡೆದಿದೆ. ಈ ಅಕ್ರಮವನ್ನು ಖಂಡಿಸಿ ಬಿಜೆಪಿ ಪ್ರತಿಭಟನೆ ಮುಂದುವರೆಸಲಿದೆ" ಎಂದು ತಿಳಿಸಿದರು.

"ದೆಹಲಿ ಮತ್ತು ಚಂಡೀಗಢದ ರೀತಿಯಲ್ಲಿಯಲ್ಲೇ ರಾಜ್ಯದಲ್ಲೂ ಕೂಡ ಭಾರಿ ಪ್ರಮಾಣದಲ್ಲಿ ಮದ್ಯ ಹಗರಣ ನಡೆದಿದೆ. ಡಿಎಂಕೆ ಸರ್ಕಾರ ಸಾರ್ವಜನಿಕರ ಗಮನವನ್ನು ಈ ಹಗರಣದಿಂದ ಬೇರೆಡೆ ತಿರುಗಿಸುವ ನಿಟ್ಟಿನಲ್ಲಿ ರೂಪಾಯಿ ಸಿಂಬಲ್‌ನಂತಹ ಅನಗತ್ಯ ವಿಷಯಗಳೆಡೆಗೆ ವಿಷಯಾಂತರ ಮಾಡುತ್ತಿದೆ" ಎಂದು ಅವರು ಆರೋಪಿಸಿದ್ದಾರೆ.

**1000 ಕೋಟಿ ರೂ. ಅಕ್ರಮ:**

ತಮಿಳುನಾಡು ರಾಜ್ಯ ಮಾರುಕಟ್ಟೆ ನಿಗಮದಲ್ಲಿ 1,000 ಕೋಟಿ ರೂ. ಮೊತ್ತದ ಅಕ್ರಮಗಳು ನಡೆದಿದೆ ಎಂದು ಕೆ. ಅಣ್ಣಾಮಲೈ ಆರೋಪಿಸಿದ್ದಾರೆ. ಈ ವಿಷಯದ ಬಗ್ಗೆ ಬಿಜೆಪಿ ತನ್ನ ಪ್ರತಿಭಟನೆಗಳನ್ನು ಮುಂದುವರಿಸಲಿದೆ ಎಂದು ಪ್ರತಿಪಾದಿಸಿದ್ದಾರೆ.

ಟೆಂಡರ್ ಪ್ರಕ್ರಿಯೆಗಳಲ್ಲಿ ಕುಶಲತೆ ಮತ್ತು ವಿವಿಧ ಡಿಸ್ಟಿಲರಿ ಕಂಪನಿಗಳ ಮೂಲಕ 1,000 ಕೋಟಿ ರೂ. ಮೊತ್ತದ ಲೆಕ್ಕವಿಲ್ಲದ ನಗದು ವಹಿವಾಟು ಸೇರಿದಂತೆ ಟಿಎಎಸ್‌ಎಂಎಸಿ ಕಾರ್ಯಾಚರಣೆಗಳಲ್ಲಿ ಬಹು ಅಕ್ರಮಗಳನ್ನು ಬಹಿರಂಗಪಡಿಸಿರುವುದಾಗಿ ಜಾರಿ ನಿರ್ದೇಶನಾಲಯ ಈ ಹಿಂದೆ ಘೋಷಿಸಿತ್ತು.

ED ಪ್ರಕಾರ, ಮಾರ್ಚ್ 6ರಂದು ಉದ್ಯೋಗಿಗಳ ಮನೆಗಳು, ಡಿಸ್ಟಿಲರಿಗಳ ಕಾರ್ಪೊರೇಟ್ ಕಚೇರಿಗಳು ಮತ್ತು ಟಿಎಎಸ್‌ಎಂಎಸಿ ಸೌಲಭ್ಯಗಳ ಮೇಲೆ ನಡೆಸಿದ ದಾಳಿಯ ಸಮಯದಲ್ಲಿ ಸಾಕ್ಷ್ಯಗಳನ್ನು ಸಂಗ್ರಹಿಸಲಾಗಿದೆ. ಈ ಭ್ರಷ್ಟಾಚಾರ ಕೃತ್ಯಗಳಲ್ಲಿ ಲಂಚದ ಹಣವೂ ಸೇರಿದೆ ಎಂದು ಇಡಿ ಆರೋಪಿಸಿದೆ.

# ಔರಂಗಜೇಬನ ವೈಭವೀಕರಣದ ವಿರುದ್ಧ ಕಠಿಣ ಕ್ರಮ ಕೈಗೊಳ್ಳುತ್ತೇವೆ

**ಮುಂಬೈ:** ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಇಂದು ಭಿವಂಡಿಯಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ದೇವಾಲಯವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಔರಂಗಜೇಬನ ಸಮಾಧಿಯನ್ನು ವೈಭವೀಕರಿಸುವುದರ ವಿರುದ್ಧ ತೀಕ್ಷ್ಣವಾದ ಹೇಳಿಕೆ ನೀಡಿದ ಅವರು, ಸಾವಿರಾರು ಜನರ ದುಃಖಕ್ಕೆ ಕಾರಣವಾದ ಆಡಳಿತಗಾರನ ಸಮಾಧಿಯನ್ನು ಸಂರಕ್ಷಿಸುವ ಅಗತ್ಯವನ್ನು ಪ್ರಶ್ನಿಸಿದರು. ನಾವು ಮಹಾರಾಷ್ಟ್ರವು ಛತ್ರಪತಿ ಶಿವಾಜಿ ಮಹಾರಾಜರ ಪರಂಪರೆಯನ್ನು ಗೌರವಿಸಬೇಕು ಎಂದು ಹೇಳಿದರು. ಔರಂಗಜೇಬನ ಸಮಾಧಿಯನ್ನು ನಿರ್ವಹಿಸುವ ಜವಾಬ್ದಾರಿಯನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಹೊರುವುದು ದುರದೃಷ್ಟಕರ ಎಂದು ಫಡ್ನವಿಸ್ ಹೇಳಿದರು. ಔರಂಗಜೇಬನನ್ನು ವೈಭವೀಕರಿಸುವ ಪ್ರಯತ್ನವನ್ನು ಬಲವಾಗಿ ವಿರೋಧಿಸಲಾಗುವುದು ಮತ್ತು ಹತ್ತಿಕ್ಕಲಾಗುವುದು ಎಂದು ಫಡ್ನವೀಸ್ ಮಹಾರಾಷ್ಟ್ರದ ಜನರಿಗೆ ಭರವಸೆ ನೀಡಿದರು. ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರ ಈ ಹೇಳಿಕೆಯು ರಾಜ್ಯಾದ್ಯಂತ ವ್ಯಾಪಕ ಪ್ರತಿಭಟನೆಗಳನ್ನು ಹುಟ್ಟುಹಾಕಿದ್ದು, ಬಜರಂಗದಳ ಸೇರಿದಂತೆ ಹಿಂದೂ ಸಂಘಟನೆಗಳು ಛತ್ರಪತಿ ಸಂಭಾಜಿನಗರ (ಔರಂಗಾಬಾದ್) ನಲ್ಲಿರುವ ಔರಂಗಜೇಬನ ಸಮಾಧಿಯನ್ನು ತೆಗೆದುಹಾಕಬೇಕೆಂಬ ಬೇಡಿಕೆಯನ್ನು ತೀವ್ರಗೊಳಿಸಿವೆ. ಕೊಲ್ಲಾಪುರದಲ್ಲಿ ಪ್ರತಿಭಟನಾಕಾರರು ಟೆಂಪೋದಲ್ಲಿ ಅಣಕು ಸಮಾಧಿಯನ್ನು ಹೊತ್ತುಕೊಂಡು ಸುತ್ತಿಗೆಯಿಂದ ನಾಶಪಡಿಸುವ ಮೂಲಕ ಸಾಂಕೇತಿಕ ಪ್ರತಿಭಟನೆ ನಡೆಸಿದರು. ಈ ಆಂದೋಲನವು ಪೊಲೀಸರೊಂದಿಗೆ ಘರ್ಷಣೆಗೆ ಕಾರಣವಾಯಿತು, ಪೊಲೀಸರು ಮಧ್ಯಪ್ರವೇಶಿಸಿ ಸಾಂಕೇತಿಕ ಸಮಾಧಿಯನ್ನು ಸಾಗಿಸುತ್ತಿದ್ದ ವಾಹನವನ್ನು ವಶಪಡಿಸಿಕೊಂಡರು. ಹೆಚ್ಚುತ್ತಿರುವ ಅಶಾಂತಿಗೆ ಪ್ರತಿಕ್ರಿಯೆಯಾಗಿ, ಖುಲ್ದಾಬಾದ್ ಪಟ್ಟಣದಲ್ಲಿರುವ ಔರಂಗಜೇಬನ ಸಮಾಧಿಯ ಸುತ್ತಲೂ ಭದ್ರತೆಯನ್ನು ಗಮನಾರ್ಹವಾಗಿ ಬಿಗಿಗೊಳಿಸಲಾಗಿದೆ, ಪೊಲೀಸರು ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಈ ಸ್ಥಳದ ಮುಖ್ಯ ದ್ವಾರದಲ್ಲಿ ಕಬ್ಬಿಣದ ಬ್ಯಾರಿಕೇಡ್‌ಗಳನ್ನು ಸ್ಥಾಪಿಸಲಾಗಿದೆ. ಯಾವುದೇ ಅಹಿತಕರ ಘಟನೆಗಳನ್ನು ತಡೆಗಟ್ಟಲು ಕೆಲವು ಪ್ರದೇಶಗಳಲ್ಲಿ ವಾಹನ ಸಂಚಾರವನ್ನು ಸಹ ನಿರ್ಬಂಧಿಸಲಾಗಿತ್ತು. ಎಂದು ಸಪ್ಕಲ್ ಭಾನುವಾರ ಹೇಳಿದ್ದರು.

# ಸಿಎಸ್‌ಆರ್ ಹಗರಣದಲ್ಲಿ 48,386 ಜನರಿಂದ 281 ಕೋಟಿ ರೂ. ಸಂಗ್ರಹ

**ತಿರುವನಂತಪುರಂ:** ಸಿಸಿಎಸ್‌ಆರ್ ನಿಧಿಯನ್ನು ಬಳಸಿಕೊಂಡು ಅರ್ಧದಷ್ಟು ಬೆಲೆಗೆ ಸ್ಕೂಟರ್‌ಗಳನ್ನು ನೀಡುವುದಾಗಿ ಭರವಸೆ ನೀಡಿ ವಂಚಕರು 48,386 ಜನರಿಂದ 281.43 ಕೋಟಿ ರೂ. ಗಳನ್ನು ಸಂಗ್ರಹಿಸಿದ್ದು, 16,348 ಜನರಿಗೆ ಮಾತ್ರ ವಾಹನಗಳನ್ನು ನೀಡಿದ್ದಾರೆ ಹಾಗೂ ಈ ಬಗ್ಗೆ 386 ಪ್ರಕರಣಗಳ ತನಿಖೆ ನಡೆಯುತ್ತಿದೆ ಎಂದು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಸೋಮವಾರ ವಿಧಾನಸಭೆಯಲ್ಲಿ ಹೇಳಿದ್ದಾರೆ.

ಸಿಎಸ್‌ಆರ್ ಹಗರಣದ ತನಿಖೆಯ ಸ್ಥಿತಿಗತಿಯ ಬಗ್ಗೆ ಸಿಪಿಐ (ಎಂ) ಶಾಸಕ ಮುರಳಿ ಪೆರುನೆಲ್ಲಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಪಿಣರಾಯಿ ವಿಜಯನ್, ಮಾರ್ಚ್ 12 ರವರೆಗೆ ಹಗರಣಕ್ಕೆ ಸಂಬಂಧಿಸಿದಂತೆ ಪೊಲೀಸರು 1,343 ಪ್ರಕರಣಗಳನ್ನು ದಾಖಲಿಸಿದ್ದಾರೆ ಎಂದು ವಿಧಾನಸಭೆಗೆ ತಿಳಿಸಿದರು.

ಈ ಪೈಕಿ 665 ಪ್ರಕರಣಗಳನ್ನು ಎಡಿಜಿಪಿ (ಅಪರಾಧ) ಮೇಲ್ವಿಚಾರಣೆಯಲ್ಲಿ ವಿಶೇಷ ತನಿಖಾ ತಂಡದ ನೇತೃತ್ವ ವಹಿಸಿರುವ ಎರ್ನಾಕುಲಂನ ಅಪರಾಧ ವಿಭಾಗದ ಅಧೀಕ್ಷಕರಿಗೆ ಹಸ್ತಾಂತರಿಸಲಾಗಿದೆ ಎಂದು ಸಿಎಂ ಹೇಳಿದರು.

ಸುಳ್ಳು ಭರವಸೆ ನೀಡಿ ಸಾವಿರಾರು ಜನರಿಗೆ ವಂಚನೆ: ಸಿಎಸ್‌ಆರ್ ನಿಧಿಯನ್ನು ಬಳಸಿಕೊಂಡು ಅರ್ಧ ಬೆಲೆಗೆ ದ್ವಿಚಕ್ರ ವಾಹನಗಳು ಮತ್ತು ಲ್ಯಾಪ್ ಟಾಪ್‌ಗಳನ್ನು ನೀಡುವುದಾಗಿ ಸುಳ್ಳು ಭರವಸೆ ನೀಡಿ ಸಾವಿರಾರು ಜನರನ್ನು ವಂಚಿಸಿದ ಪ್ರಕರಣದ ಬಗ್ಗೆ ಸಿಎಂ ವಿಜಯನ್ ಮಾಹಿತಿ ನೀಡಿದರು.



ಪ್ರಮುಖ ಆರೋಪಿಗಳಿಂದ ಹಲವಾರು ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಅವರ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಆರು ಮಂದಿಯ ಬಂಧನ: ಪ್ರಕರಣಕ್ಕೆ ಸಂಬಂಧಿಸಿದಂತೆ ಆನಂದು ಕೃಷ್ಣನ್, ರವಿ ಪನ್ನಕ್ಕಲ್, ಬಶೀರ್ ಪಿ.ಪಿ, ರಿಯಾಸ್, ಮೊಹಮ್ಮದ್ ಶಫಿ ಮತ್ತು ಕೆ.ಎನ್.ಆನಂದ್ ಕುಮಾರ್ ಎಂಬ ಆರು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಸದ್ಯ ತನಿಖೆ ಪ್ರಾರಂಭವಾಗಿರುವ 386 ಪ್ರಕರಣಗಳ ಮಾಹಿತಿಯ ಪ್ರಕಾರ, ಅರ್ಧದಷ್ಟು ಬೆಲೆಗೆ ಸ್ಕೂಟರ್ ಗಳನ್ನು ನೀಡುವುದಾಗಿ ಭರವಸೆ ನೀಡಿ 48,386 ಜನರಿಂದ ಒಟ್ಟು 281.43 ಕೋಟಿ ರೂ. ಸಂಗ್ರಹಿಸಲಾಗಿದೆ. ಆದರೆ, ಕೇವಲ 16,348 ಜನರಿಗೆ ಮಾತ್ರ ದ್ವಿಚಕ್ರ ವಾಹನಗಳನ್ನು ನೀಡಲಾಗಿದೆ.

ಅದೇ ರೀತಿ ರಿಯಾಯಿತಿ ದರದಲ್ಲಿ ಲ್ಯಾಪ್ ಟಾಪ್ ನೀಡುವ ನೆಪದಲ್ಲಿ 36,891 ಜನರಿಂದ 9.22 ಕೋಟಿ ರೂ.ಗಳನ್ನು ಸಂಗ್ರಹಿಸಲಾಗಿದ್ದು, ಕೇವಲ 29,897 ಜನರಿಗೆ ಮಾತ್ರ ಲ್ಯಾಪ್‌ಟಾಪ್ ನೀಡಲಾಗಿದೆ. ಇದಲ್ಲದೇ 56,082 ವ್ಯಕ್ತಿಗಳಿಗೆ ಹೊಲಿಗೆ ಯಂತ್ರಗಳನ್ನು ನೀಡುವುದಾಗಿ 23.24 ಕೋಟಿ ರೂ.ಗಳನ್ನು ಸಂಗ್ರಹಿಸಲಾಗಿದೆ. ಆದರೆ ಕೇವಲ 53,478 ಯಂತ್ರಗಳನ್ನು ಮಾತ್ರ ವಿತರಿಸಲಾಗಿದೆ. ಹಗರಣದ ಪ್ರಮುಖ ಆರೋಪಿ ಮತ್ತು ಆತನ ಕಂಪನಿಗಳು 23 ಬ್ಯಾಂಕ್ ಖಾತೆಗಳನ್ನು ಹೊಂದಿದ್ದವು ಎಂದು ತನಿಖೆಯಿಂದ ತಿಳಿದುಬಂದಿದೆ. ನ್ಯಾಯಾಲಯದ ಆದೇಶದ ಪ್ರಕಾರ ಅವರ ಮೂರು ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಕ್ರಮಗಳನ್ನು ಪ್ರಾರಂಭಿಸಲಾಗಿದೆ ಎಂದು ಪಿಣರಾಯಿ ವಿಜಯನ್ ಹೇಳಿದರು.

# ನಾಲ್ವರು ಭಾರತೀಯ ಮಹಿಳಾ ಸಾಧಕಿಯರಿಗೆ ನ್ಯೂಯಾರ್ಕ್‌ನಲ್ಲಿ ಗೌರವ




**ನ್ಯೂಯಾರ್ಕ್:** ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಭಾರತೀಯ ಮೂಲದ ನಾಲ್ವರು ಮಹಿಳೆಯರನ್ನು ಕಾನ್ಸುಲೇಟ್ ಜನರಲ್ ಆಫ್ ಇಂಡಿಯಾ ಮತ್ತು ಫೆಡರೇಶನ್ ಆಫ್ ಇಂಡಿಯನ್ ಅಸೋಸಿಯೇಷನ್ಸ್ (ಎಫ್‌ಐಎ) ಅಭಿನಂದಿಸಿವೆ.

ಭಾರತೀಯ ಮೂಲದ ನಾಲ್ವರು ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ನೀಡಿದ ಕೊಡುಗೆಗಳಿಗಾಗಿ ಅವರನ್ನು ಗೌರವಿಸಲಾಗಿದೆ ಎಂದು ವರದಿಯಾಗಿದೆ.

ಜೆಪಿ ಮೋರ್ಗಾನ್ ನ ಸಲಹಾ ಮತ್ತು ವಿಲೀನ ಮತ್ತು ಸ್ವಾಧೀನಗಳ ಜಾಗತಿಕ ಮುಖ್ಯಸ್ಥೆ ಅನು ಅಯ್ಯಂಗಾರ್, ಎ-ಸೀರಿಸ್ ಮ್ಯಾನೇಜ್ ಮೆಂಟ್ ಮತ್ತು ಇನ್ವೆಸ್ಟ್ ಮೆಂಟ್ ನ ಸಿಇಒ ಮತ್ತು ಸಂಸ್ಥಾಪಕಿ ಅಂಜುಲಾ ಆಚಾರ್ಯ, ಎಲ್ ಡಿಪಿ ವೆಂಚರ್ಸ್ ನ ಸಿಇಒ ಮತ್ತು ಸಂಸ್ಥಾಪಕಿ ಮತ್ತು ಮಹಿಳಾ ಉದ್ಯಮಶೀಲತಾ ದಿನಾಚರಣೆ ಸಂಸ್ಥೆಯ ಸಂಸ್ಥಾಪಕಿ ವೆಂಡಿ ಡೈಮಂಡ್ ಮತ್ತು ಸಿಎನ್‌ಬಿಸಿಯ ವರದಿಗಾರ್ತಿ ಮತ್ತು ನಿರೂಪಕಿ ಸೀಮಾ ಮೋದಿ ಅವರನ್ನು ನ್ಯೂಯಾರ್ಕ್ ನಲ್ಲಿರುವ ಭಾರತೀಯ ಕಾನ್ಸುಲೇಟ್ ಜನರಲ್ ಗೌರವಿಸಿದೆ.

ಕಳೆದ ವಾರ ನಡೆದ 7 ನೇ ವಾರ್ಷಿಕ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಫೆಡರೇಶನ್ ಆಫ್ ಇಂಡಿಯನ್ ಅಸೋಸಿಯೇಷನ್ಸ್ (ಎಫ್‌ಐಎ) ಸಹಯೋಗದೊಂದಿಗೆ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದು, ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಕೊಡುಗೆ ನೀಡಿದ ಅಸಾಧಾರಣ ಮಹಿಳೆಯರನ್ನು ಗೌರವಿಸಲಾಯಿತು.

# ಖಲಿಸ್ತಾನಿ ಚಟುವಟಿಕೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ ರಾಜನಾಥ್

**ನವದೆಹಲಿ:** ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಅಮೆರಿಕದ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಸೋಮವಾರ ಮಾತುಕತೆ ನಡೆಸಿದ್ದಾರೆ.

ಈ ಸಂದರ್ಭದಲ್ಲಿ ಅಮೆರಿಕದಲ್ಲಿ ಖಲಿಸ್ತಾನಿ ಸಂಘಟನೆ SFJ (ಸಿಖ್ ಫಾರ್ ಜಸ್ಟೀಸ್) ನಡೆಸುತ್ತಿರುವ ಭಾರತ ವಿರೋಧಿ ಚಟುವಟಿಕೆಗಳ ವಿಷಯವನ್ನು ರಾಜನಾಥ್ ಸಿಂಗ್ ಪ್ರಸ್ತಾಪಿಸಿದ್ದಾರೆ. ಈ ವೇಳೆ ಭಾರತವು ತನ್ನ ಕಳವಳಗಳನ್ನು ವ್ಯಕ್ತಪಡಿಸಿತು ಮತ್ತು ಕಾನೂನುಬಾಹಿರ ಸಂಘಟನೆಯ ವಿರುದ್ಧ ಕಠಿಣವಾದ ಕ್ರಮ ಕೈಗೊಳ್ಳುವಂತೆ ಅಮೆರಿಕ ಸರ್ಕಾರವನ್ನು ಮನವಿ ಮಾಡಿದ್ದಾರೆ.

ಕಳೆದ ವರ್ಷ ನವೆಂಬರ್‌ನಲ್ಲಿ ಗುರುಪತ್ವಂತ್ ಸಿಂಗ್ ಪನ್ನೂನ್ ಅವರನ್ನು ಕೊಲ್ಲುವ ಪಿತೂರಿಯಲ್ಲಿ ಮತ್ತೊಬ್ಬ ಭಾರತೀಯ ಸರ್ಕಾರಿ ಅಧಿಕಾರಿಯೊಂದಿಗೆ ಭಾಗಿಯಾಗಿದ್ದಾರೆ ಎಂಬ ಆರೋಪದ ಮೇಲೆ ಭಾರತೀಯ ಪ್ರಜೆ ನಿಖಿಲ್ ಗುಪ್ತಾ ಅವರ ಮೇಲೆ ಅಮೆರಿಕದ ಪ್ರಾಸಿಕ್ಯೂಟರ್‌ಗಳು ಆರೋಪ ಹೊರಿಸಿದ್ದರಿಂದ ಖಈಎ ಬಗ್ಗೆ ರಾಜನಾಥ್ ಸಿಂಗ್ ಕಳವಳ ವ್ಯಕ್ತಪಡಿಸಿದ್ದಾರೆ. ಗುರುಪತ್ವಂತ್ ಸಿಂಗ್ ಪನ್ನೂನ್ ಮೇಲಿನ ಹತ್ಯೆ ಯತ್ನದಲ್ಲಿ ಭಾರತ ಯಾವುದೇ ಪಾತ್ರ ವಹಿಸಿಲ್ಲ ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ. ಸರ್ಕಾರ ಈ ಪ್ರಕರಣದ ಬಗ್ಗೆ ಉನ್ನತ ಮಟ್ಟದ ತನಿಖೆಯನ್ನು ಪ್ರಾರಂಭಿಸಿದೆ.

ಡೊನಾಲ್ಡ್ ಟ್ರಂಪ್ ಸರ್ಕಾರದ ಉನ್ನತ ಅಧಿಕಾರಿಯೊಬ್ಬರು ಭಾರತಕ್ಕೆ ನೀಡಿದ ಮೊದಲ ಉನ್ನತ ಮಟ್ಟದ ಭೇಟಿಯಲ್ಲಿ ಎರಡೂವರೆ ದಿನಗಳ ಪ್ರವಾಸದಲ್ಲಿ ತುಳಸಿ ಗಬ್ಬಾರ್ಡ್ ಭಾನುವಾರ ಮುಂಜಾನೆ ರಾಷ್ಟ್ರ ರಾಜಧಾನಿ ದೆಹಲಿಗೆ ಆಗಮಿಸಿದರು. ನಿನ್ನೆ ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್‌ಎಸ್‌ಎ) ಅಜಿತ್ ದೋವಲ್ ಅವರನ್ನು ಭೇಟಿಯಾದ ತುಳಸಿ ಸೋಮವಾರ ಭಾರತ ದೆಹಲಿಯಲ್ಲಿ ಆಯೋಜಿಸಿದ್ದ ಜಾಗತಿಕ ಗುಪ್ತಚರ ಮುಖ್ಯಸ್ಥರ ಸಮಾವೇಶದಲ್ಲಿ ಭಾಗವಹಿಸಿದ ನಂತರ ರಾಜನಾಥ್ ಸಿಂಗ್ ಅವರೊಂದಿಗಿನ ಮಾತುಕತೆ ನಡೆಸಿದರು.

ಈ ಸಮಾವೇಶದಲ್ಲಿ ಅಮೆರಿಕ, ಕೆನಡಿಯನ್ ಮತ್ತು ಯುಕೆ ಪ್ರತಿನಿಧಿಗಳು ಭಾಗವಹಿಸಿದ್ದರು. ಕಳೆದ ತಿಂಗಳು ವಾಷಿಂಗ್ಟನ್ ಡಿಸಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ತುಳಸಿ ಗಬ್ಬಾರ್ಡ್ ಅವರನ್ನು ಭೇಟಿಯಾಗಿದ್ದರು.

ಖಲಿಸ್ತಾನ್ ಪರ ಗುಂಪುಗಳು ಸೇರಿದಂತೆ ವಿದೇಶಿ ನೆಲದಿಂದ



ಕಾರ್ಯನಿರ್ವಹಿಸುತ್ತಿರುವ ಭಾರತ ವಿರೋಧಿ ಅಂಶಗಳ ಬಗ್ಗೆ ಭಾರತದ ಕಡೆಯಿಂದ ಕಳವಳಗಳು ವ್ಯಕ್ತವಾಗಿದ್ದವು. ರಷ್ಯಾ-ಉಕ್ರೇನ್ ಯುದ್ಧ ಮತ್ತು ಮಧ್ಯಪ್ರಾಚ್ಯ ಸಂಘರ್ಷಗಳಂತಹ ಜಾಗತಿಕ ಸವಾಲುಗಳ ಕುರಿತು ಸಮಾವೇಶದಲ್ಲಿ ಚರ್ಚೆಗಳು ನಡೆದವು. ತುಳಸಿ ಗಬ್ಬಾರ್ಡ್ ಅವರ ಬಹು-ರಾಷ್ಟ್ರ ಪ್ರವಾಸವು ಜಪಾನ್, ಥೈಲ್ಯಾಂಡ್ ಮತ್ತು ಫ್ರಾನ್ಸ್ ದೇಶಗಳನ್ನು ಒಳಗೊಂಡಿದೆ.

# ಭೂಗತ ಪಾತಕಿ ಛೋಟಾ ರಾಜನ್ ಖುಲಾಸೆ

**ನವದೆಹಲಿ:** 2011ರಲ್ಲಿ ಭೂಗತ ಪಾತಕಿ ದಾವೂದ್ ಇಬ್ರಾಹಿಂ ಸಹೋದರ ಇಕ್ಬಾಲ್ ಕಸ್ಕರ್ ನ ಚಾಲಕನ ಹತ್ಯೆ ಪ್ರಕರಣದಲ್ಲಿ ದರೋಡೆಕೋರ ಛೋಟಾ ರಾಜನ್ ನನ್ನು ಇಂದು ಮುಂಬೈನ ವಿಶೇಷ ನ್ಯಾಯಾಲಯವು ಖುಲಾಸೆಗೊಳಿಸಿದೆ.

ಮಹಾರಾಷ್ಟ್ರ ಸಂಘಟಿತ ಅಪರಾಧ ನಿಯಂತ್ರಣ ಕಾಯ್ದೆ (ಮೋಕಾ) ಅಡಿಯಲ್ಲಿ ಗೊತ್ತುಪಡಿಸಲಾದ ವಿಶೇಷ ನ್ಯಾಯಾಧೀಶ ಎ.ಎಂ. ಪಾಟೀಲ್ ಛೋಟಾ ರಾಜನ್ ಅವರನ್ನು ಖುಲಾಸೆಗೊಳಿಸಿದ್ದಾರೆ. ಪ್ರಸ್ತುತ ದೆಹಲಿಯ ತಿಹಾರ್ ಜೈಲಿನಲ್ಲಿರುವ ಛೋಟಾ ರಾಜನ್ ನನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು.ಈ ಪ್ರಕರಣದಲ್ಲಿ ಅವರನ್ನು ಖುಲಾಸೆಗೊಳಿಸಲಾಗಿದೆ ಎಂದು ನ್ಯಾಯಾಲಯ ತಿಳಿಸಿದೆ.

"ಯಾವುದೇ ಅಪರಾಧ ಅಥವಾ ಪ್ರಕರಣದಲ್ಲಿ ಅವರ ಅಗತ್ಯವಿಲ್ಲದಿದ್ದರೆ ಛೋಟಾ ರಾಜನ್ ಅವರನ್ನು ತಕ್ಷಣ ಬಿಡುಗಡೆ ಮಾಡಬೇಕು" ಎಂದು ನ್ಯಾಯಾಲಯ ಹೇಳಿದೆ. ಮೇ 17, 2011ರಂದು ದಕ್ಷಿಣ ಮುಂಬೈನಲ್ಲಿ ಇಬ್ಬರು ವ್ಯಕ್ತಿಗಳು ಆರಿಫ್ ಅಬುನಾಕರ್ ಸಯ್ಯದ್ ಎಂಬುವವರ ಮೇಲೆ ಗುಂಡು ಹಾರಿಸಿದರು. ಸಯ್ಯದ್ ಪರಾರಿಯಾಗಿರುವ ದರೋಡೆಕೋರ ದಾವೂದ್ ಇಬ್ರಾಹಿಂನ ಕಿರಿಯ ಸಹೋದರ ಇಕ್ಬಾಲ್ ಹಸನ್ ಶೇಖ್ ಇಬ್ರಾಹಿಂ ಶೇಖ್ ಕಸ್ಕರ್ ಅವರ ಚಾಲಕ ಮತ್ತು ಅಂಗರಕ್ಷಕರಾಗಿದ್ದರು.

ಪೊಲೀಸರ ಪ್ರಕಾರ, ಭಾರತೀಯ ದಂಡ ಸಂಹಿತೆ, ಒಉಔಅ ಮತ್ತು ಶಸ್ತ್ರಾಸ್ತ್ರ ಕಾಯ್ದೆಯಡಿ ಕೊಲೆ ಮತ್ತು ಕ್ರಿಮಿನಲ್ ಪಿತೂರಿಗಾಗಿ ಛೋಟಾ ರಾಜನ್ ಅವರ ಸೂಚನೆಯ ಮೇರೆಗೆ ಈ ಕೊಲೆ ನಡೆದಿದೆ. ಪತ್ರಕರ್ತ ಜ್ಯೋತಿರ್ಮಯ್ ಡೇ ಅವರ ಹತ್ಯೆಗೆ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವುದರಿಂದ ರಾಜನ್ ಜೈಲಿನಲ್ಲಿಯೇ ಇದ್ದಾರೆ. ಛೋಟಾ ರಾಜನ್ ಇತರ ಕ್ರಿಮಿನಲ್ ಪ್ರಕರಣಗಳಲ್ಲಿಯೂ ವಿಚಾರಣೆಯನ್ನು ಎದುರಿಸುತ್ತಿದ್ದಾರೆ.

# ಭಾರತಕ್ಕೆ ನ್ಯೂಜಿಲ್ಯಾಂಡ್ ಪ್ರಧಾನಿ; ಉಭಯ ರಾಷ್ಟ್ರಗಳ ವ್ಯಾಪಾರಾಭಿವೃದ್ಧಿಗೆ ಹೆಚ್ಚಿನ ಒತ್ತು

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಆಹ್ವಾನದ ಮೇಲೆ ಭಾರತಕ್ಕೆ ಆಗಮಿಸಿರುವ ನ್ಯೂಜಿಲ್ಯಾಂಡ್ ಪ್ರಧಾನಿ ಕ್ರಿಸ್ಟೋಫರ್ ಲೂಕ್ಸನ್ ಜೊತೆಗೆ ವ್ಯಾಪಾರ, ಹೂಡಿಕೆ ಸೇರಿದಂತೆ ಹಲವು ವಿಚಾರಗಳ ಕುರಿತು ಪ್ರಧಾನಿ ಚರ್ಚೆ ನಡೆಸಿದರು.



ಮಾರ್ಚ್ 16ರಿಂದ 20ರವರೆಗೆ ಐದು ದಿನಗಳ ಕಾಲ ಇವರ ಭೇಟಿಯಲ್ಲಿ ಇಂದು ಪ್ರಧಾನಿ ಮೋದಿ ಎರಡು ದೇಶಗಳ ನಡುವಿನ ಸಮಗ್ರ ಮತ್ತು ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡುವುದಾಗಿ ತಿಳಿಸಿದರು. ನ್ಯೂಜಿಲ್ಯಾಂಡ್ ಪ್ರಧಾನಿಯೊಂದಿಗಿನ ಮಾತುಕತೆ ಬಳಿಕ ಜಂಟಿಯಾಗಿ ಮಾಧ್ಯಮಗಳಿಗೆ ಮಾತನಾಡಿದ ಅವರು, ಎರಡು ದೇಶದ ನಡುವೆ ಸುಸ್ಥಿರ ವ್ಯಾಪಾರ ಮತ್ತು ಹೂಡಿಕೆಗೆ ಎರಡು ದೇಶದ ನಾಯಕರು ಸ್ವಾಗತಿಸುತ್ತೇವೆ ಎಂದರು

ಮುಕ್ತ ವ್ಯಾಪಾರ ಒಪ್ಪಂದದ ಮಾತುಕತೆಯನ್ನು ಸ್ವಾಗತಿಸಿದ ಪ್ರಧಾನಿ, ಆಳ ಆರ್ಥಿಕತೆ ಏಕೀಕರಣ ಸಾಧಿಸಲು ಸಮತೋಲಿತ, ಮಹತ್ವಾಕಾಂಕ್ಷೆ, ಸಮಗ್ರತೆಯ ಮತ್ತು ಪರಸ್ಪರ ಪ್ರಯೋಜನಕಾರಿ ಎಂದರು. ಇದೇ ವೇಳೆ, ಜಾಗತಿಕ ಸವಾಲುಗಳ ಕುರಿತು ಮಾತನಾಡಿದ ಅವರು ಭಯೋತ್ಪಾದನೆ ಕುರಿತು ಕಾಳಜಿ ಕುರಿತು ವ್ಯಕ್ತಪಡಿಸಿದರು. ಎರಡು ದೇಶಗಳು ಇದರ ದಾಳಿಗೆ ಒಳಗಾಗಿದ್ದು, ಎಲ್ಲ ರೀತಿಯ ಭಯೋತ್ಪಾದನೆಗಳು ಸ್ವೀಕಾರಾರ್ಹವಲ್ಲ. ಅದು 2019ರ ಕ್ರೈಸ್ ಚರ್ಚ್ ದಾಳಿ ಇರಲಿ , ಮುಂಬೈನ 26/11 ದಾಳಿ ಇರಲಿ. ಭಯೋತ್ಪಾದನೆ ಬಗ್ಗೆ ಎರಡು ದೇಶದ ಅಭಿಪ್ರಾಯ ಒಂದೇ ಆಗಿದೆ. ಭಯೋತ್ಪಾದನೆ ಪಿತೂರಿ ವಿರುದ್ಧ ಅಗತ್ಯ ಕಠಿಣ ಕ್ರಮ ನಡೆಸಬೇಕು ಎಂದು ಒತ್ತಿ ಹೇಳಿದರು.

ಇಂಡೋ- ಫೆಸಿಫಿಕ್ ಸಾಗರ ಉಪ ಕ್ರಮದಲ್ಲಿ ನ್ಯೂಜಿಲ್ಯಾಂಡ್ ಭಾಗಿತ್ವವನ್ನು ಸ್ವಾಗತಿಸಿದ ಮೋದಿ, ಶಾಂತಿ ಮತ್ತು ಈ ಪ್ರದೇಶದಲ್ಲಿ ಸ್ಥಿರತೆ ನಿರ್ವಹಣೆಯಲ್ಲಿ ಆಸಕ್ತಿಗಳನ್ನು ಹಂಚಿಕೊಂಡಿದ್ದಾಗಿ ತಿಳಿಸಿದರು.

ಎರಡು ದೇಶಗಳು ವ್ಯಾಪಾರ, ಹೂಡಿಕೆ, ರಕ್ಷಣೆ ಮತ್ತು ಭದ್ರತೆಯಲ್ಲಿನ ಸಹಯೋಗ ದ್ವಿಪಕ್ಷೀಯ ಸಂಬಂಧಗಳನ್ನು ಬಲಗೊಳಿಸುವಲ್ಲಿ ಒಪ್ಪಿರುವುದಾಗಿ ತಿಳಿಸಿದರು. ನ್ಯೂಜಿಲ್ಯಾಂಡ್ ಪ್ರಧಾನಿ ಲೂಕ್ಸನ್, ಸಚಿವರು, ಹಿರಿಯ ಅಧಿಕಾರಿಗಳು, ಉದ್ಯಮಿಗಳು, ಮಾಧ್ಯಮ ಮತ್ತು ನ್ಯೂಜಿಲ್ಯಾಂಡ್ ಭಾರತದ ರಾಯಭಾರಿ ಸಮುದಾಯದ ಸದಸ್ಯರನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗದೊಂದಿಗೆ ಭಾರತಕ್ಕೆ ಆಗಮಿಸಿದ್ದಾರೆ. ಭಾರತದ ಪ್ರಧಾನಿ ನರೇಂದ್ರ ಮೋದಿ ಕೂಡ ಕಳೆದ ಆಗಸ್ಟ್‌ನಲ್ಲಿ ಯಶಸ್ವಿ ನ್ಯೂಜಿಲ್ಯಾಂಡ್ ಪ್ರವಾಸ ಕೈಗೊಂಡಿದ್ದರು .

# ಮಹಾಲೇಖಪಾಲರ ನೇಮಕ ಪ್ರಕ್ರಿಯೆ ಪ್ರಶ್ನಿಸಿ ಪಿಐಎಲ್

**ನವದೆಹಲಿ:** ಕಾರ್ಯಾಂಗ ಮತ್ತು ಪ್ರಧಾನ ಮಂತ್ರಿಗಳು ಮಾತ್ರ ಸೇರಿಕೊಂಡು ಭಾರತದ ಮಹಾಲೇಖಪಾಲರನ್ನು ನೇಮಕ ಮಾಡುವ ಪ್ರಸ್ತುತ ಪದ್ಧತಿಯು ಅಸಾಂವಿಧಾನಿಕ ಎಂದು ಘೋಷಿಸಬೇಕೆಂದು ಕೋರಿ ಸಲ್ಲಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಂಬಂಧಿಸಿದಂತೆ ಸರ್ವೋಚ್ಚ ನ್ಯಾಯಾಲಯವು ಸೋಮವಾರ ಕೇಂದ್ರ ಸರಕಾರದ ಪ್ರತಿಕ್ರಿಯೆಯನ್ನು ಕೋರಿದೆ. ಸೆಂಟರ್ ಫಾರ್ ಪಬ್ಲಿಕ್ ಇಂಟರೆಸ್ಟ್ ಲಿಟಿಗೇಷನ್ ಹೆಸರಿನ ಎನ್‌ಜಿಒ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಎನ್. ಕೋಟಿಶ್ವರ್ ಸಿಂಗ್ ಅವರ ಪೀಠವು ಕೇಂದ್ರ ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿದೆ. ಎನ್‌ಜಿಒ ಪರವಾಗಿ ಹಾಜರಾದ ವಕೀಲ ಪ್ರಶಾಂತ್ ಭೂಷಣ್, ಇಲ್ಲಿ ಸಿಎಜಿ ಸಂಸ್ಥೆಯ ಸ್ವಾತಂತ್ರ್ಯದ ಬಗ್ಗೆ ಪ್ರಶ್ನೆ ಉದ್ಭವಿಸಿದೆ ಮತ್ತು ಬಿಜೆಪಿ ಅಧಿಕಾರದಲ್ಲಿರುವ ಮಹಾರಾಷ್ಟ್ರದಂಥ ರಾಜ್ಯಗಳ ಸಿಎಜಿ ಲೆಕ್ಕಪರಿಶೋಧನೆಯನ್ನು ಸ್ಥಗಿತಗೊಳಿಸಲಾಗುತ್ತಿದೆ ಎಂದು ಆರೋಪಿಸಿದರು. ಪ್ರಧಾನಿ, ವಿರೋಧ ಪಕ್ಷದ ನಾಯಕ ಮತ್ತು ಭಾರತದ ಮುಖ್ಯ ನ್ಯಾಯಮೂರ್ತಿಗಳನ್ನು ಒಳಗೊಂಡ ಸ್ವತಂತ್ರ ಮತ್ತು ತಟಸ್ಥ ಆಯ್ಕೆ ಸಮಿತಿಯೊಂದಿಗೆ ಸಮಾಲೋಚಿಸಿ ಮತ್ತು ಪಾರದರ್ಶಕ ರೀತಿಯಲ್ಲಿ ರಾಷ್ಟ್ರಪತಿಗಳು ಮಹಾಲೇಖಪಾಲರನ್ನು ನೇಮಕ ಮಾಡುವುದನ್ನು ಕಡ್ಡಾಯಗೊಳಿಸಲು ನ್ಯಾಯಾಲಯ ನಿರ್ದೇಶನ ನೀಡುವಂತೆ ಪಿಐಎಲ್‌ನಲ್ಲಿ ಕೋರಲಾಗಿದೆ.ಸಿಎಜಿ ನೇಮಕಾತಿಯ ನಿಯಮಗಳು ಮಾಹಿತಿ ಆಯೋಗಗಳು ಮತ್ತು ಕೇಂದ್ರ ವಿಚಕ್ಷಣಾ ಆಯೋಗ ಸೇರಿದಂತೆ ಇತರ ಸಂಸ್ಥೆಗಳ ನೇಮಕಾತಿಯಂತೆಯೇ ಇರಬೇಕು ಎಂದು ಅದು ಹೇಳಿದೆ.

# ತೆಲಂಗಾಣ ಟನಲ್ ಕುಸಿತ: 7 ಮಂದಿಗೆ ಮುಂದುವರೆದ ಶೋಧ

**ನಾಗರ್‌ಕುರ್ನೂಲ್(ತೆಲಂಗಾಣ):** ತೆಲಂಗಾಣದ ಎಸ್‌ಎಲ್‌ಬಿಸಿ ಟನಲ್ ಕುಸಿದ ಸ್ಥಳದಲ್ಲಿ 24ನೇ ದಿನದ ರಕ್ಷಣಾ ಕಾರ್ಯಾಚರಣೆ ಸಾಗಿದ್ದು, ನಾಪತ್ತೆಯಾದ 7 ಮಂದಿ ಕಾರ್ಮಿಕರಿಗೆ ಹುಡುಕಾಟ ತೀವ್ರಗೊಳಿಸಲಾಗಿದೆ.

ಶ್ರೀಶೈಲಂ ಎಡದಂಡೆ ಕಾಲುವೆಯ ಟನಲ್‌ನ ಒಳ ಪ್ರದೇಶ ಭಾಗಶಃ ಕುಸಿದಿದ್ದು, ಡಿ1 ಮತ್ತು ಡಿ2 ಸ್ಥಳದಲ್ಲಿ ಕಣ್ಮರೆಯಾಗಿರುವ ವ್ಯಕ್ತಿಗಳಿರುವ ಸಾಧ್ಯತೆ ಇದೆ. ಇದಕ್ಕಾಗಿ ಮತ್ತಷ್ಟು ಸಿಬ್ಬಂದಿ ರಕ್ಷಣಾ ಕಾರ್ಯದಲ್ಲಿ ಭಾಗಿಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ದಕ್ಷಿಣ ಕೇಂದ್ರ ರೈಲ್ವೆ, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ರಾಜ್ಯದ ಗಣಿ ಸಿಂಗರೇಣಿ ಕಾಲೀರಿಸ್, ಖಂಖಿ ಮೈನರ್ಸ್ ಹಾಗೂ ಇತರ ಸಿಬ್ಬಂದಿ ಅಗತ್ಯ ಸಾಧನಗಳೊಂದಿಗೆ ಶೋಧದಲ್ಲಿ ಭಾಗಿಯಾಗಿದ್ದಾರೆ. ರಕ್ಷಣಾ ಕಾರ್ಯಕ್ಕೆ ವಿವಿಧ ಕ್ಷೇತ್ರದ ತಜ್ಞರಿಂದ ಮಾಹಿತಿ ಪಡೆದಿದ್ದು, ಸುಧಾರಿತ ತಂತ್ರಜ್ಞಾನದ ಬಳಕೆ ಮಾಡಲಾಗಿದೆ.

ಟಿಬಿಎಂ ಆಪರೇಟರ್ ಗುರ್‌ಪ್ರೀತ್ ಸಿಂಗ್ ಅವರ ಮೃತದೇಹ ಮಾರ್ಚ್ 9ರಂದು ಸಿಕ್ಕಿದ್ದು, ಪಂಜಾಬ್‌ನಲ್ಲಿರುವ ಕುಟುಂಬಕ್ಕೆ ಒಪ್ಪಿಸಲಾಗಿದೆ. ಇನ್ನೂ 7 ಮಂದಿಗೆ ಹುಡುಕಾಟ ನಡೆಯುತ್ತಿದೆ



ಕ್ರೀಡೆ - ಸಿನಿಮಾ
ಮುಸ್ಸಂಜೆ



# 'ಎಂದೆಂದಿಗೂ ನಮ್ಮ ಹೃದಯದಲ್ಲಿ'

ಮಾರ್ಚ್ 17.... ರಾಜ್ಯಾದ್ಯಂತ ದಿವಂಗತ ನಟ ಪುನೀತ್ ರಾಜ್‌ಕುಮಾರ್ ಅವರ 50ನೇ ಜನ್ಮ ದಿನೋತ್ಸವದ ಸಂಭ್ರಮ ಮನೆ ಮಾಡಿದೆ.

ತಮ್ಮ ಅಮೋಘ ಅಭಿನಯ, ಸರಳ ವ್ಯಕ್ತಿತ್ವದಿಂದ ಕನ್ನಡಿಗರ ಮನಗೆದ್ದಿದ್ದ 'ಬೆಟ್ಟದ ಹೂ' 2021ರ ಅಕ್ಟೋಬರ್ 29ರಂದು ಹಠಾತ್ ಹೃದಯಾಘಾತದಿಂದ ಮುದುಡಿತಾದರೂ, ಕನ್ನಡಿಗರೆದೆಯಲ್ಲಿ ಭದ್ರ ಸ್ಥಾನ ಪಡೆದುಕೊಂಡಿದ್ದಾರೆ. ರಾಜ್ಯಾದ್ಯಂತ ಅಭಿಮಾನಿಗಳು ತಮ್ಮದೇ ಆದ ರೀತಿಯಲ್ಲಿ ನಗುಮೊಗದ ಒಡೆಯನ ಜನ್ಮದಿನವನ್ನು ಆಚರಿಸುತ್ತಿದ್ದಾರೆ. ಮಡದಿ ಅಶ್ವಿನಿ ಪುನೀತ್ ರಾಜ್‌ಕುಮಾರ್, ಅಪ್ಪು ಬಗ್ಗೆ ಹೃದಯಸ್ಪರ್ಶಿ ಬರಹಗಳನ್ನು ಹಂಚಿಕೊಂಡಿದ್ದಾರೆ.

'ಎಂದೆಂದಿಗೂ ನಮ್ಮ ಹೃದಯದಲ್ಲಿ'

ಪತ್ನಿ, ನಿರ್ಮಾಪಕಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಸೋಷಿಯಲ್ ಮೀಡಿಯಾದಲ್ಲಿ ಮನಮುಟ್ಟುವ ಪೋಸ್ಟ್ ಶೇರ್ ಮಾಡಿದ್ದಾರೆ. ಅಪ್ಪು ಫೋಟೋವೊಂದರ ಮೇಲೆ, ಎಂದೆಂದಿಗೂ ನಮ್ಮ ಹೃದಯದಲ್ಲಿ, ಅಪ್ಪು ಅವರ 50ನೇ ಹುಟ್ಟುಹಬ್ಬದ ಸವಿನೆನಪಿನಲ್ಲಿ ಎಂದು ಬರೆದುಕೊಂಡಿದ್ದಾರೆ. ಮುಂದುವರೆದು, "1975–2025, ಅಪ್ಪು ಅವರ 50ನೇ ಹುಟ್ಟುಹಬ್ಬದ ಸವಿನೆನಪಿನಲ್ಲಿ. ಇಂದು ಅಪ್ಪು ಅವರು ಅನೇಕರೊಂದಿಗೆ ಹಂಚಿಕೊಂಡ ಕ್ಷಣಗಳು ಹಾಗೂ ಆನಂದವನ್ನು ನಾನು ಪ್ರೀತಿಯಿಂದ ನೆನಪಿಸಿಕೊಳ್ಳುತ್ತೇನೆ. ಎಲ್ಲರೊಂದಿಗೆ ಇಟ್ಟಿದ್ದ ಒಡನಾಟ ಮತ್ತು ನೆನಪುಗಳು ಅವರು ಪ್ರತಿಯೊಬ್ಬರಿಗೂ ಎಷ್ಟು ಅರ್ಥಪೂರ್ಣರು ಎಂಬುದನ್ನು ತೋರಿಸುತ್ತದೆ.

ಜೀವನದಲ್ಲಿ ಮತ್ತು ಪರದೆ ಮೇಲೆ ಅವರು ನಿರ್ವಹಿಸಿದ ಎಲ್ಲಾ ಪಾತ್ರಗಳಲ್ಲಿ ಅವರು ಬಿಟ್ಟ ಅಳಿಸಲಾಗದ ಪ್ರಭಾವ ನಮಗೆ ಎಂದೆಂದಿಗೂ ಸ್ಫೂರ್ತಿಯಾಗಿರುತ್ತದೆ ಎಂದು ಬರೆದುಕೊಂಡಿದ್ದಾರೆ. ಈ ಪೋಸ್ಟರ್‌ಗೆ, 'ಅಪ್ಪು ಅವರ 50ನೇ ಹುಟ್ಟುಹಬ್ಬದ ಸವಿನೆನಪಿನಲ್ಲಿ. ಎಂದೆಂದಿಗೂ ನಮ್ಮ ಹೃದಯದಲ್ಲಿ' ಎಂಬ ಕ್ಯಾಪ್ಶನ್ ಕೊಟ್ಟಿದ್ದಾರೆ.

ಅಶ್ವಿನಿ ಅವರ ಈ ಪೋಸ್ಟ್ ಸಾಮಾಜಿಕ ಜಾಲತಾಣಗಳಲ್ಲಿ ಮೆಚ್ಚುಗೆ ಸ್ವೀಕರಿಸುತ್ತಿದೆ. ಅಭಿಮಾನಿಗಳು ತಮ್ಮ ಅಭಿಪ್ರಾಯ ಹಂಚಿಕೊಳ್ಳುತ್ತಿದ್ದಾರೆ. ಕಮೆಂಟ್ ಸೆಕ್ಷನ್‌ನಲ್ಲಿ ಫ್ಯಾನ್ ಓರ್ವರು, 'ತಲೆಬಾಗಿ ಹೇಳುವೆ, ಕನ್ನಡಕ್ಕೊಬ್ಬರೇ ಪುನೀತ್ ರಾಜಕುಮಾರ್' ಎಂದು ಬರೆದುಕೊಂಡಿದ್ದಾರೆ.

ಅಪ್ಪಟ ಅಭಿಮಾನಿಯೋರ್ವರು ಪ್ರತಿಕ್ರಿಯಿಸಿ, "ದೊಡ್ಮನೆಯ ಕಲಾ ಸಂತತಿಯ ಕೀರ್ತಿಶೇಷನರಾದ ಯೂತ್ ಐಕಾನ್ ಕನ್ನಡದಅನರ್ಘ್ಯ ರತ್ನ ಅಮರ ಜೀವಿ ಡಾ.ಪುನೀತರಾಜಕುಮಾರ ಅಣ್ಣನವರಿಗೆ ಜನ್ಮದಿನದ ಗೌರವ ನಮನಗಳು. ದೇವ್ರ ಬಗ್ಗೆ ಎಷ್ಟೇ ಹೇಳಿದ್ರೂ ಕಡಿಮೆ. ಹಳ್ಳಿಯಿಂದ ಸಿಟಿವರೆಗೂ ಅಪ್ಪು ಅಜರಾಮರ. ಸಕಲರಲ್ಲಿ ಬೆರೆಯುವ ಭಾವಜೀವಿ ಮಾನವೀಯತೆಯ ಶಿಖರ, ನಗು ಮುಖದ ಮಗು ಮನದ ಸರಳ ಸಹಜ. ಪ್ರಬುದ್ಧ ನಟನೆಯ ಜೊತೆಗೆ ಕಂಠಸಿರಿಯ ವಿಶಿಷ್ಟ ಛಾಪುವಿನಿಂದ ಸಾಧನೆ ಶಿಖರವೇರಿ ಅಭಿಮಾನಿಗಳ ಮನ ಗೆದ್ದ ವೀರ ಕನ್ನಡಿಗ ಯುವ ಪೀಳಿಗೆಗೆ ಮಾದರಿ" ಎಂದು ಬರೆದುಕೊಂಡಿದ್ದಾರೆ.

ನೆಟ್ಟಿಗರೋರ್ವರು ಪ್ರತಿಕ್ರಿಯಿಸಿ, "ಪ್ರೀತಿಯ ಅಪ್ಪು, ದೇಹವಾಗಿ ಈ ಲೋಕದಲ್ಲಿ ನೀವಿಲ್ಲದಿರಬಹುದು, ಆದರೆ ಕೋಟಿ ಹೃದಯಗಳಲ್ಲಿ ದೇವರಾಗಿ ನಮ್ಮೊಂದಿಗೆ ನೀವಿರುವಿರಿ. ಅಪ್ಪು ಫಾರೆವರ್, ಜೊತೆಗಿರದ ಜೀವ ಎಂದೆಂದಿಗೂ ಜೀವಂತ. ಹ್ಯಾಪಿ ಬರ್ತ್‌ಡೇ ಅಪ್ಪು, ಅಪ್ಪು ಇಲ್ಲದ ಕೊರಗು ಜೀವಿತಾವಧಿ ಶಿಕ್ಷೆ ಇದ್ದಂತೆ" ಎಂದು ತಿಳಿಸಿದ್ದಾರೆ. ಮತ್ತೋರ್ವ ಅಭಿಮಾನಿ 'ಅಪ್ಪು ಅಜರಾಮರ' ಎಂದು ತಿಳಿಸಿದ್ದಾರೆ. ಹೀಗೆ, ಪುನೀತ್ ರಾಜ್‌ಕುಮಾರ್ ಕುರಿತು ಅಭಿಮಾನಿಗಳು ಭಾವನಾತ್ಮಕ ಬರಹಗಳನ್ನು ಹಂಚಿಕೊಳ್ಳುತ್ತಿದ್ದಾರೆ.

ಜೊತೆಗೆ ಕನ್ನಡ ಕಂಡ ಶ್ರೇಷ್ಠ ನಟನಿಗೆ 50ನೇ ಜನುಮದಿನದ ಶುಭಾಶಯ ಕೋರುತ್ತಿದ್ದಾರೆ.





## ಸಚಿನ್ ನಾಯಕತ್ವದ ಇಂಡಿಯಾ ಮಾಸ್ಟರ್ಸ್‌ಗೆ ಚೊಚ್ಚಲ ಟ್ರೋಫಿ




**ರಾಯ್ಪುರ:** ಕ್ರಿಕೆಟ್ ದೇವರು ಸಚಿನ್ ತೆಂಡೂಲ್ಕರ್ ನಾಯಕತ್ವದ ಇಂಡಿಯಾ ಮಾಸ್ಟರ್ಸ್ ತಂಡವು ಚೊಚ್ಚಲ ಅಂತಾರಾಷ್ಟ್ರೀಯ ಮಾಸ್ಟರ್ಸ್ ಟಿ20 ಲೀಗ್ ಟ್ರೋಫಿಯನ್ನು ಎತ್ತಿ ಹಿಡಿದಿದೆ.

ರಾಯ್ಪುರದ ಶಾಹೀದ್ ವೀರನಾರಾಯಣ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಕ್ರಿಕೆಟ್ ದಿಗ್ಗಜ ಬ್ರಿಯಾನ್ ಲಾರಾ ನೇತೃತ್ವದ ವೆಸ್ಟ್ ಇಂಡೀಸ್ ಮಾಸ್ಟರ್ಸ್ ಪಡೆ ವಿರುದ್ಧ ಇಂಡಿಯಾ ಮಾಸ್ಟರ್ಸ್ ಗೆದ್ದು ಬೀಗಿತು. ಟಾಸ್ ಗೆದ್ದ ವೆಸ್ಟ್ ಇಂಡೀಸ್ ಮೊದಲು ಬ್ಯಾಟಿಂಗ್ ಆಯ್ದುಕೊಂಡಿತ್ತು. ಡ್ವೇನ್ ಸ್ಮಿತ್ 35 ಎಸೆತಗಳಲ್ಲಿ 2 ಸಿಕ್ಸರ್, 6 ಬೌಂಡರಿ ಮೂಲಕ 45 ರನ್ ಗಳಿಸಿದರೆ, ಸಿಮನ್ಸ್ 41 ಎಸೆತಗಳಲ್ಲಿ 1 ಸಿಕ್ಸರ್, 5 ಬೌಂಡರಿಯಿಂದ ಭರ್ಜರಿ 57 ರನ್ ಪೇರಿಸಿ ತಂಡದ ಮೊತ್ತವನ್ನು ಹೆಚ್ಚಿಸಿದರು.

ಇಂಡಿಯಾ ಮಾಸ್ಟರ್ಸ್ ಮಾರಕ ಬೌಲಿಂಗ್ ದಾಳಿಗೆ ನಾಯಕ ಬ್ರಿಯಾನ್ ಲಾರಾ ಸೇರಿದಂತೆ ಉಳಿದ ಆಟಗಾರರು ಎರಡಂಕಿ ದಾಟಲು ಸಾಧ್ಯವಾಗಲಿಲ್ಲ. ಇದರಿಂದಾಗಿ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 148 ರನ್ ಗಳಿಸಲಷ್ಟೇ ಸಾಧ್ಯವಾಯಿತು. ಕರ್ನಾಟಕ ವೇಗಿ ಮಾರಕ ಬೌಲಿಂಗ್: ಇಂಡಿಯಾ ಮಾಸ್ಟರ್ಸ್ ಪರ ಕರ್ನಾಟಕದ ವೇಗಿ ವಿನಯ್ ಕುಮಾರ್ 3 ವಿಕೆಟ್ ಕಬಳಿಸಿ ಎದುರಾಳಿ ತಂಡಕ್ಕೆ ಮಾರಕವಾದರು. ನದೀಮ್ 2 ವಿಕೆಟ್, ನೇಗಿ ಮತ್ತು ಬಿನ್ನಿ ತಲಾ 1 ವಿಕೆಟ್ ಪಡೆದರು.

**ಅಂಬಟಿ ರಾಯುಡು ಆಕರ್ಷಕ ಅರ್ಧ ಶತಕ:** ಸಾಧಾರಣ ಗುರಿ ಬೆನ್ನತ್ತಿದ್ದ ಇಂಡಿಯಾ ಮಾಸ್ಟರ್ಸ್‌ಗೆ ಆರಂಭಿಕರಾಗಿ ಬ್ಯಾಟಿಂಗ್‌ಗೆ ಇಳಿದ ಅಂಬಟಿ ರಾಯುಡು 74 ರನ್ (50 ಎಸೆತ, 4 ಬೌಂಡರಿ, 3 ಸಿಕ್ಸರ್) ಬಾರಿಸಿ ತಂಡವನ್ನು ಗೆಲುವಿನ ದಡಕ್ಕೆ ತಂದರು. ಇನ್ನು ಸಚಿನ್ ತೆಂಡೂಲ್ಕರ್ 2 ಸಿಕ್ಸರ್, 2 ಬೌಂಡರಿ ಮೂಲಕ 25 ರನ್ ಗಳಿಸಿದರು. ಬಳಿಕ ಬಂದ ಗುರುಕೀರತ್ ಸಿಂಗ್ 14 ರನ್ ಹೊಡೆದು ಔಟಾದರು. ನಂತರ ಯುವರಾಜ್ ಸಿಂಗ್ 13 ರನ್ ಮತ್ತು ಸ್ಟುವರ್ಟ್ ಬಿನ್ನಿ 16 ರನ್ ಬಾರಿಸಿ ತಂಡವನ್ನು ಗೆಲುವಿನ ದಡ ಸೇರಿಸಿದರು. 17.1 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 149 ರನ್ ಗಳಿಸಿ ಇಂಡಿಯಾ ಮಾಸ್ಟರ್ಸ್ ಟ್ರೋಫಿ ತನ್ನದಾಗಿಸಿಕೊಂಡಿತು.

## ಸೌಂದರ್ಯಗೆ ಈ ನಟಿ ತುಂಬಾ ಇಷ್ಟವಂತೆ

ಸಿನಿಮಾ ರಂಗದಲ್ಲಿ ಸೌಂದರ್ಯ ಅನೇಕ ದೊಡ್ಡ ಸಾಧನೆಗಳನ್ನು ಮಾಡಿದ್ದಾರೆ. ಚಿಕ್ಕ ವಯಸ್ಸಿನಲ್ಲೇ ಸೌಂದರ್ಯ ನಮ್ಮನ್ನೆಲ್ಲಾ ಅಗಲಿದರು. ಆದರೆ ನಟನೆಯಲ್ಲಿ ಸೌಂದರ್ಯ ಅನೇಕ ನಟಿಯರಿಗೆ ಮತ್ತು ನಟರಿಗೆ ಆದರ್ಶವಾಗಿದ್ದಾರೆ. ಗ್ಲಾಮರ್ ಇಲ್ಲದೆ ಪ್ರೇಕ್ಷಕರನ್ನು ಹೇಗೆ ಮೆಚ್ಚಿಸಬಹುದು, ಅವರ ಮನಸ್ಸನ್ನು ಹೇಗೆ ಗೆಲ್ಲಬಹುದು ಎಂಬುದಕ್ಕೆ ಸೌಂದರ್ಯ ಉದಾಹರಣೆ.

ಅನೇಕರಿಗೆ ಅಚ್ಚುಮೆಚ್ಚಿನ ನಟಿಯಾದ ಸೌಂದರ್ಯ ಅವರಿಗೂ ಇಷ್ಟವಾದ ನಟ–ನಟಿಯರಿದ್ದಾರೆ. ಒಂದು ನಟಿಯ ವಿಷಯದಲ್ಲಿ ಸೌಂದರ್ಯ ಅವರಿಗೆ ಕುತೂಹಲಕಾರಿ ಘಟನೆ ಎದುರಾಯಿತು. ಸೌಂದರ್ಯ ಅವರಿಗೆ ಒಂದು ಸಂದರ್ಶನದಲ್ಲಿ ಒಂದು ಕುತೂಹಲಕಾರಿ ಪ್ರಶ್ನೆ ಎದುರಾಯಿತು. ನಿಮಗೆ ಇಷ್ಟವಾದ ನಟಿ ಯಾರು ಎಂದು ಕೇಳಿದಾಗ ಸೌಂದರ್ಯ ಉತ್ತರಿಸಿದರು. ಟಾಲಿವುಡ್‌ನಲ್ಲಿ ಸದ್ಯಕ್ಕೆ ಒಂದು ಹುಡುಗಿಯ ನಟನೆ ನನಗೆ ತುಂಬಾ ಇಷ್ಟವಾಗುತ್ತಿದೆ. ಆಕೆಯ ಹೆಸರು ಲಯಾ ಎಂದು ಸೌಂದರ್ಯ ಹೇಳಿದರು.

ಲಯಾ ತುಂಬಾ ಭರವಸೆಯಂತೆ ಕಾಣುತ್ತಿದ್ದಾರೆ ಎಂದು ಸೌಂದರ್ಯ ಹೊಗಳಿದರು. ಆಗ ಸೌಂದರ್ಯ ಅವರಿಗೆ ಲಯಾ ಪರಿಚಯವೇ ಇರಲಿಲ್ಲ. ಸೌಂದರ್ಯ ಅವರ ಸಂದರ್ಶನ ನೋಡಿದ ಲಯಾ ತಕ್ಷಣ ಅವರ ಮನೆಗೆ ಹೋದರಂತೆ. ಯಾಕೆ ಹೀಗೆ ಬಂದಿದ್ದೀರಿ ಎಂದು ಸೌಂದರ್ಯ ಕೇಳಿದರೆ.. ನನ್ನ ಬಗ್ಗೆ ನೀವು ಸಂದರ್ಶನದಲ್ಲಿ ಮಾತನಾಡಿದ್ದೀರಿ. ಅದಕ್ಕೆ ಥ್ಯಾಂಕ್ಸ್ ಹೇಳೋಣ ಅಂತ ಬಂದೆ ಎಂದು ಲಯಾ ಹೇಳಿದರಂತೆ.

ಅಯ್ಯೋ ಅದಕ್ಕೆ ಇಷ್ಟು ದೂರ ಬರಬೇಕಿತ್ತಾ ಎಂದು ಸೌಂದರ್ಯ ಕೇಳಿದರು. ಇಲ್ಲ ಮೇಡಂ, ನಿಮ್ಮ ಬಾಯಿಂದ ನನ್ನ ಹೆಸರು ಬಂತು ಅಂದ್ರೆ ಅದು ನನಗೆ ತುಂಬಾ ದೊಡ್ಡ ವಿಷಯ ಎಂದು ಲಯಾ ಹೇಳಿದರು. ಅದೇ ಸಮಯದಲ್ಲಿ ಲಯಾ 'ಮದುವೆ ಮಾಡಿಕೊಳ್ಳೋಣ' ಕನ್ನಡ ರಿಮೇಕ್‌ನಲ್ಲಿ ನಟಿಸುತ್ತಿದ್ದರು. ತೆಲುಗಿನಲ್ಲಿ ವೆಂಕಟೇಶ್, ಸೌಂದರ್ಯ ನಟಿಸಿದ ಹಿಟ್ ಚಿತ್ರ ಅದು.

'ಮದುವೆ ಮಾಡಿಕೊಳ್ಳೋಣ' ರಿಮೇಕ್ ಬಗ್ಗೆ ಕೂಡ ಸೌಂದರ್ಯ ಲಯಾಗೆ ಸಲಹೆಗಳನ್ನು ನೀಡಿದರಂತೆ. ನನ್ನ ಹಾಗೆ ಅನುಕರಣೆ ಮಾಡಬೇಡ, ಕಾಪಿ ಮಾಡಬೇಡ. ನಿನ್ನ ಸ್ಟೈಲ್‌ನಲ್ಲಿ ನೀನು ಮಾಡು, ಚೆನ್ನಾಗಿರುತ್ತದೆ ಎಂದು ಸೌಂದರ್ಯ ಸಲಹೆ ನೀಡಿದರಂತೆ. ಸೌಂದರ್ಯ ಅವರೊಂದಿಗೆ ಮಾತನಾಡಿದ ಆ ಕ್ಷಣಗಳು ನನ್ನ ಜೀವನದಲ್ಲಿ ಮರೆಯಲಾಗದ ಕ್ಷಣಗಳು ಎಂದು ಲಯಾ ಹೇಳಿದರು.



## ನೂರನೇ ಟೆಸ್ಟ್ ನಂತರ ವಿದಾಯ ಹೇಳಲು ಬಯಸಿದ್ದೆ

**ಚೆನ್ನೈ:** ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) 18 ನೇ ಆವೃತ್ತಿಯ ಪ್ರಾರಂಭಕ್ಕೆ ಕೇವಲ 5 ದಿನಗಳು ಮಾತ್ರ ಉಳಿದಿವೆ. ಇದಕ್ಕೂ ಮುನ್ನ, ಚೆನ್ನೈ ಸೂಪರ್ ಕಿಂಗ್ಸ್ (ಸಿಎಸ್‌ಕೆ) ಗೆ ಮರು ಸೇರ್ಪಡೆಗೊಂಡ ಅನುಭವಿ ಸ್ಪಿನ್ನರ್ ರವಿಚಂದ್ರನ್ ಅಶ್ವಿನ್ ಭಾರತ ಮತ್ತು ಸಿಎಸ್‌ಕೆ ನಾಯಕ ಎಂಎಸ್ ಧೋನಿ ಬಗ್ಗೆ ಮಹತ್ವದ ಹೇಳಿಕೆ ನೀಡಿದ್ದಾರೆ.

ಇದಲ್ಲದೇ, ತಾವು ಆಡಿದ 100ನೇ ಟೆಸ್ಟ್ ಪಂದ್ಯದ ನಂತರ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಲು ಬಯಸಿದ್ದೆ ಎಂದು ಅವರು ಹೇಳಿದ್ದಾರೆ. 100ನೇ ಟೆಸ್ಟ್‌ಗೆ ಬರುವಂತೆ ಅಶ್ವಿನ್ ಧೋನಿ ಆಹ್ವಾನಿಸಿದ್ದರಂತೆ, ಆದರೆ ಅವರು ಬರಲಿಲ್ಲ.

ಚೆನ್ನೈನಲ್ಲಿ ಭಾನುವಾರ ನಡೆದ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅಶ್ವಿನ್, ತಮ್ಮ 100 ನೇ ಟೆಸ್ಟ್ ಸಮಯದಲ್ಲಿ ಧೋನಿಯಿಂದ ಅಪೇಕ್ಷಿತ ಉಡುಗೊರೆ ಸಿಗಲಿಲ್ಲ ಎಂದು ಹೇಳಿದರು. ಆದರೆ, ಐಪಿಎಲ್ 2025 ಮೆಗಾ ಹರಾಜಿನಲ್ಲಿ ಚೆನ್ನೈ ಸೂಪರ್ ಕಿಂಗ್ಸ್‌ಗೆ ತಮ್ಮನ್ನು ಆಯ್ಕೆ ಮಾಡಿದಾಗ ಧೋನಿಯಿಂದ ದೊಡ್ಡ ಗಿಫ್ಟ್ ಸಿಕ್ಕಿತು ಎಂದು ಅವರು ತಿಳಿಸಿದರು.

ಅವರು ನನಗೆ ದೊಡ್ಡ ಉಡುಗೊರೆ ನೀಡಿದರು: "ಧರ್ಮಶಾಲಾದಲ್ಲಿ ನನ್ನ 100 ನೇ ಟೆಸ್ಟ್‌ನ ಸ್ಮರಣಿಕೆಯನ್ನು ಪಡೆದುಕೊಳ್ಳಲು ನಾನು ಎಂಎಸ್ ಧೋನಿಗೆ ಕರೆ ಮಾಡಿದ್ದೆ. ಇದೇ ಟೆಸ್ಟ್ ನನ್ನ ಕೊನೆಯ ಟೆಸ್ಟ್ ಮಾಡಲು ಬಯಸಿದ್ದೆ. ಆದರೆ, ಅವರು ಬರಲು ಸಾಧ್ಯವಾಗಲಿಲ್ಲ. ಆದಾಗ್ಯೂ, ನನ್ನನ್ನು ಸಿಎಸ್‌ಕೆಗೆ ಮರಳಿ ಕರೆತರುವ ಮೂಲಕ ಅವರು ನನಗೆ ಇನ್ನೂ ದೊಡ್ಡ ಉಡುಗೊರೆ ನೀಡಿದರು. ಎಂಎಸ್ ಧೋನಿಗೆ ಧನ್ಯವಾದಗಳು. ಇಲ್ಲಿರಲು ನನಗೆ ಸಂತೋಷವಾಗಿದೆ." ಎಂದು ಅಶ್ವಿನ್ ನುಡಿದರು.

2008 ರಲ್ಲಿ ಸಿಎಸ್‌ಕೆಯೊಂದಿಗೆ ಐಪಿಎಲ್ ವೃತ್ತಿಜೀವನವನ್ನು ಪ್ರಾರಂಭಿಸಿದ ಅಶ್ವಿನ್, 2015 ರ ಋತುವಿನ ನಂತರ ಮೊದಲ ಬಾರಿಗೆ ಐದು ಬಾರಿ ಚಾಂಪಿಯನ್ ತಂಡಕ್ಕೆ ಮರಳಿದರು. ಕಳೆದ ದಶಕದಲ್ಲಿ ಅಶ್ವಿನ್ ಪಂಜಾಬ್ ಕಿಂಗ್ಸ್, ರಾಜಸ್ಥಾನ್ ರಾಯಲ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ಸೇರಿದಂತೆ ಹಲವಾರು ಫ್ರಾಂಚೈಸಿಗಳಿಗಾಗಿ ಆಡಿದ್ದಾರೆ.

ಇದೊಂದು ಅದ್ಭುತ ಸ್ಥಳ: "ಅತ್ಯಂತ ಮುಖ್ಯವಾದ ವಿಷಯವೆಂದರೆ ನಾನು ಸಾಧನೆ ಮಾಡಿದ ವ್ಯಕ್ತಿಯಾಗಿ ಸಿಎಸ್‌ಕೆಗೆ ಮರಳಿಲ್ಲ. ಬದಲಾಗಿ ಸಂಪೂರ್ಣ ಚಕ್ರದ ಮೂಲಕ ಹಾದುಹೋಗಿ ಮೊದಲಿನಂತೆಯೇ ಇಲ್ಲಿಗೆ ಮರಳುವುದನ್ನು ಆನಂದಿಸಲು ಬಯಸುವ ವ್ಯಕ್ತಿಯಾಗಿ ಬಂದಿದ್ದೇನೆ. ಇದೊಂದು ಅದ್ಭುತ ಸ್ಥಳ." ಎಂದು ಅಶ್ವಿನ್ ಹೇಳಿದರು.

ಭಾರತದ ಅತ್ಯುತ್ತಮ ಕ್ರಿಕೆಟಿಗರಲ್ಲಿ ಒಬ್ಬರಾದ ರವಿಚಂದ್ರನ್ ಅಶ್ವಿನ್ ಬಾರ್ಡರ್ – ಗವಾಸ್ಕರ್ ಟ್ರೋಫಿಯ ಸಮಯದಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ನಿಂದ ನಿವೃತ್ತರಾದರು. ಅಶ್ವಿನ್ 106 ಟೆಸ್ಟ್ ಪಂದ್ಯಗಳನ್ನು ಆಡಿದ್ದಾರೆ.

ಅಶ್ವಿನ್ ಅವರ 100 ನೇ ಟೆಸ್ಟ್ ಸಂದರ್ಭದಲ್ಲಿ, ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ವಿಶೇಷ ಸಮಾರಂಭವನ್ನು ಆಯೋಜಿಸಿತ್ತು.

ಅಲ್ಲಿ ಅಶ್ವಿನ್ ಅವರಿಗೆ ನೆನಪಿನ ಕಾಣಿಕೆಯನ್ನು ನೀಡಲಾಯಿತು. ಅಶ್ವಿನ್ ಆ ಸ್ಮರಣಿಕೆಯನ್ನು ಧೋನಿಯಿಂದ ಸ್ವೀಕರಿಸಲು ಬಯಸಿದ್ದರು. ದುರದೃಷ್ಟವಶಾತ್ ಧೋನಿಗೆ ಬರಲು ಸಾಧ್ಯವಾಗಲಿಲ್ಲ.



## 'ಸಿಕಂದರ್ ನಾಚೆ': ಸಲ್ಮಾನ್ ಜೊತೆ ಮಂದಣ್ಣ ಭರ್ಜರಿ ಡ್ಯಾನ್ಸ್



ಭಾರತೀಯ ಚಿತ್ರರಂಗದ ಬಹುನಿರೀಕ್ಷಿತ 'ಸಿಕಂದರ್' ಸಿನಿಮಾ ಬಿಡುಗಡೆಗೆ ದಿನಗಣನೆ ಆರಂಭವಾಗಿದೆ. ಸಿನಿಮಾ ಈ ತಿಂಗಳಾಂತ್ಯ ಅದ್ಧೂರಿಯಾಗಿ ತೆರೆಗಪ್ಪಳಿಸಲಿದ್ದು, ಚಿತ್ರತಂಡ ಪ್ರಚಾರ ಮುಂದುವರಿಸಿದೆ. ಪ್ರೇಕ್ಷಕರ ಕುತೂಹಲ ಹೆಚ್ಚಿಸಲು, ಸಿಕಂದರ್ ತಂಡವಿಂದು ಸಲ್ಮಾನ್ ಖಾನ್ ಮತ್ತು ರಶ್ಮಿಕಾ ಮಂದಣ್ಣ ಅವರನ್ನೊಳಗೊಂಡ 'ಸಿಕಂದರ್ ನಾಚೆ' ಹಾಡಿನ ಟೀಸರ್ ಅನಾವರಣಗೊಳಿಸಿದೆ.

ಪೆಪ್ಪಿ ಡ್ಯಾನ್ಸ್ ಟೀಸರ್, ಭರ್ಜರಿ ಡ್ಯಾನ್ಸ್‌ನ ಭರವಸೆ ನೀಡಿದೆ. ಇದು ಪಾರ್ಟಿ ಪ್ರಿಯರಿಗೆ ಪರ್ಫೆಕ್ಟ್ ಸಾಂಗ್ ಎನ್ನಬಹುದು.

ಎ.ಆರ್.ಮುರುಗದಾಸ್ ನಿರ್ದೇಶನದ ಆ್ಯಕ್ಷನ್ – ಪ್ಯಾಕ್ಡ್ ಚಿತ್ರದ ಮೂರನೇ ಹಾಡು ಇದಾಗಿದೆ. ಸಾಜಿದ್ ನಾಡಿಯಾಡ್ವಾಲಾ ನಿರ್ಮಿಸಿರುವ ಸಿಕಂದರ್‌ನಿಂದ ಈಗಾಗಲೇ ಜೋಹ್ರಾ ಜಬೀನ್ ಮತ್ತು ಬಮ್ ಬಮ್ ಭೋಲೆ ಶೀರ್ಷಿಕೆಯ ಹಾಡುಗಳು ಬಿಡುಗಡೆಯಾಗಿ ಯಶಸ್ವಿ ಆಗಿವೆ.

ಸದ್ಯ ಅನಾವರಣಗೊಂಡಿರುವ ಟೀಸರ್, 'ಸಿಕಂದರ್ ನಾಚೆ' ಒಂದು ಎನರ್ಜಿಟಿಕ್ ಸಾಂಗ್ ಅನ್ನೋ ಸುಳಿವು ಬಿಟ್ಟುಕೊಟ್ಟಿದೆ. ಇದು ಕಲಾವಿದರ ಜಬರ್‌ದಸ್ತ್ ಸ್ಟೆಪ್‌ಗಳನ್ನೊಳಗೊಂಡಿದ್ದು, ನಾಳೆ ರಿಲೀಸ್ ಆಗಲಿರೋ ಕಂಪ್ಲೀಟ್ ಸಾಂಗ್‌ಗಾಗಿ ಅಭಿಮಾನಿಗಳು ಕಾತರರಾಗಿದ್ದಾರೆ. ಸುಂದರ ಸೆಟ್, ಟರ್ಕಿ ಡ್ಯಾನ್ಸರ್‌ಗಳ ದೊಡ್ಡ ಗುಂಪಿನೊಂದಿಗೆ, 'ಸಿಕಂದರ್ ನಾಚೆ' ಅದ್ಭುತವಾಗಿ ಮೂಡಿಬಂದಿದೆ ಎಂಬ ಸುಳಿವು ಬಿಟ್ಟುಕೊಟ್ಟಿದೆ.

ಹೊಸ ಚಾರ್ಟ್‌ಬಸ್ಟರ್‌ಗಾಗಿ ಅಭಿಮಾನಿಗಳ ಕುತೂಹಲ: ಟೀಸರ್, ಹಾಡಿನ ಭವ್ಯತೆಯ ಝಲಕ್‌ಗಳನ್ನು, ಅದ್ಭುತ ನೃತ್ಯ ಸಂಯೋಜನೆಯನ್ನು ಜೊತೆಗೆ ರಶ್ಮಿಕಾ ಮಂದಣ್ಣ ಅವರ ಸ್ಪಾರ್ಕ್ಲಿಂಗ್ ಸ್ಕ್ರೀನ್ ಪ್ರೆಸೆನ್ಸ್ ಅನ್ನು ಎತ್ತಿ ತೋರಿಸಿದೆ. ಇದು ನಾಯಕ ನಟ ಸಲ್ಮಾನ್ ಖಾನ್, ನಿರ್ಮಾಪಕ ಸಾಜಿದ್ ನಾಡಿಯಾಡ್ವಾಲಾ ಮತ್ತು ನೃತ್ಯ ಸಂಯೋಜಕ ಅಹ್ಮದ್ ಖಾನ್ ಅವರ ಮತ್ತೊಂದು ಪ್ರಾಜೆಕ್ಟ್ ಎನ್ನಬಹುದು. ಈ ಮೂವರು ಕೊನೆಯದಾಗಿ 2014ರ ಕಿಕ್ ಚಿತ್ರದಲ್ಲಿ ಕೈ ಜೋಡಿಸಿದ್ದರು. ಐಕಾನಿಕ್ ಡ್ಯಾನ್ಸ್ 'ಜುಮ್ಮೆ ಕಿ ರಾತ್'ನಲ್ಲಿ ಸಹಕರಿದ್ದರು. ಇದೀಗ ಈ ಮೂವರ ಮತ್ತೊಂದು ಹಾಡು ಬರುತ್ತಿದ್ದು, ಅಭಿಮಾನಿಗಳು ಹೊಸ ಚಾರ್ಟ್‌ಬಸ್ಟರ್‌ಗಾಗಿ ಕುತೂಹಲದಿಂದ ಕಾಯುತ್ತಿದ್ದಾರೆ.

ಸಿಕಂದರ್ ಒಂದು ಹೈ ಆ್ಯಕ್ಟೇನ್ ಆ್ಯಕ್ಷನ್ ಥ್ರಿಲ್ಲರ್ ಎಂದು ನಿರೀಕ್ಷಿಸಲಾಗಿದೆ. ಖಾನ್ ಪಂಚ್ ಡೈಲಾಗ್ಸ್, ಆ್ಯಕ್ಷನ್ ಸೀಕ್ವೆನ್ಸ್‌ನೊಂದಿಗೆ ಬಿಗ್ ಸ್ಕ್ರೀನ್‌ಗೆ ಮರಳಲು ಸಜ್ಜಾಗಿದ್ದಾರೆ. ನಿರಂತರ ಬ್ಲಾಕ್‌ಬಸ್ಟರ್ ಸಿನಿಮಾಗಳನ್ನೇ ಕೊಡುತ್ತಿರುವ ರಶ್ಮಿಕಾ ಅವರಿಗಿದು ಸಲ್ಮಾನ್ ಖಾನ್ ಜೊತೆ ಮೊದಲ ಚಿತ್ರ. ಮುಂಬೈ ಮತ್ತು ಹೈದರಾಬಾದ್‌ನ ಅನೇಕ ಸ್ಥಳಗಳಲ್ಲಿ ಚಿತ್ರೀಕರಣಗೊಂಡಿರುವ 'ಸಿಕಂದರ್' ಈ ಈದ್‌ಗೆ ಬಿಡುಗಡೆಯಾಗಲಿದೆ.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: **9448074878**